ಸಂಪುಟ: ೦೭/ ಸಂಚಿಕೆ: ೧೯೪/ ರವಿವಾರ ದಿನಾಂಕ : ೨೧-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 194/ SUNDAY Date : 21-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ನಟ ಮೋಹನ್‌ಲಾಲ್‌ಗೆ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ

**ನವದೆಹಲಿ:** ಭಾರತೀಯ ಚಿತ್ರರಂಗಕ್ಕೆ ನೀಡುವ ಅಮೂಲ್ಯ ಕೊಡುಗೆಯನ್ನು ಗುರುತಿಸಿ ಮಲಯಾಳಂ ಸೂಪರ್‌ಸ್ಟಾರ್ ಮೋಹನ್ ಲಾಲ್ ಅವರಿಗೆ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಘೋಷಿಸಲಾಗಿದೆ. ನಾಲ್ಕು ದಶಕಗಳಿಗೂ ಹೆಚ್ಚು ಕಾಲದ ಅವರ ವೃತ್ತಿಜೀವನದಲ್ಲಿ 400ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಮೋಹನ್ ಲಾಲ್ ಮಲಯಾಳಂನಲ್ಲಿ ಮಾತ್ರವಲ್ಲದೆ ಕನ್ನಡ, ತಮಿಳು, ತೆಲುಗು ಮತ್ತು ಹಿಂದಿ ಚಿತ್ರಗಳಲ್ಲಿಯೂ ತಮ್ಮ ನಟನಾ ಮಾಂತ್ರಿಕತೆಯನ್ನು ಹರಡಿದ್ದಾರೆ. ಐದು ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳು ಮತ್ತು ಪದ್ಮಭೂಷಣವನ್ನು ಮೋಹನ್ ಲಾಲ್ ಪಡೆದಿದ್ದಾರೆ. ನಟ ಮೋಹನ್ ಲಾಲ್ ಅವರಿಗೆ 2023ರ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು ಎಂದು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಶುಕ್ರವಾರ ಪ್ರಕಟಿಸಿದೆ. ಇದನ್ನು ಭಾರತೀಯ ಚಿತ್ರರಂಗದ ಅತ್ಯುನ್ನತ ಗೌರವವೆಂದು ಪರಿಗಣಿಸಲಾಗಿದೆ. "ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಆಯ್ಕೆ ಸಮಿತಿಯ ಶಿಫಾರಸಿನ ಮೇರೆಗೆ ಭಾರತ ಸರ್ಕಾರವು ಮೋಹನ್ ಲಾಲ್ ಅವರಿಗೆ 2023ರ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ಘೋಷಿಸಿದೆ. ಮೋಹನ್ ಲಾಲ್ ಅವರ ಗಮನಾರ್ಹ ಸಿನಿಮೀಯ ಪ್ರಯಾಣವು ಮುಂದಿನ ಪೀಳಿಗೆಗೆ ಸ್ಫೂರ್ತಿ ನೀಡುತ್ತದೆ. ಈ ದಂತಕಥೆಯ ನಟ, ನಿರ್ದೇಶಕ ಮತ್ತು ನಿರ್ಮಾಪಕರನ್ನು ಭಾರತೀಯ ಚಿತ್ರರಂಗಕ್ಕೆ ನೀಡಿದ ಐತಿಹಾಸಿಕ ಕೊಡುಗೆಗಾಗಿ ಗೌರವಿಸಲಾಗುತ್ತಿದೆ.

## ರಾಜ್ಯದಿಂದ ಹೆಸರುಕಾಳು, ಉದ್ದು, ಸೂರ್ಯಕಾಂತಿ ಖರೀದಿಗೆ ಸಿದ್ಧತೆ

**ಬೆಂಗಳೂರು:** ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ, ಕೇಂದ್ರ ಸರ್ಕಾರವು ಕರ್ನಾಟಕದಿಂದ ಹೆಸರುಕಾಳು, ಉದ್ದು, ಸೂರ್ಯಕಾಂತಿ, ನೆಲಗಡಲೆ ಮತ್ತು ಸೋಯಾಬೀನ್ ಖರೀದಿಸಲಿದೆ. ಇದರಿಂದ ರಾಜ್ಯದ ರೈತ ಸಮುದಾಯಕ್ಕೆ ಹೆಚ್ಚಿನ ಲಾಭವಾಗಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಶನಿವಾರ ಹೇಳಿದ್ದಾರೆ. ರಾಜ್ಯ ಸರ್ಕಾರ ಪ್ರಸ್ತಾಪಿಸಿದಂತೆ, 2025-26 ಖಾರಿಫ್ ಋತುವಿನಲ್ಲಿ ಕರ್ನಾಟಕದಲ್ಲಿ ಬೆಳೆಯುವ ಈ ಬೆಳೆಗಳ ಖರೀದಿಗೆ ಅನುಮೋದನೆ ನೀಡುವಂತೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಕೋರಿರುವುದಾಗಿ ಜೋಶಿ ತಿಳಿಸಿದ್ದಾರೆ. ನನ್ನ ವಿನಂತಿಯನ್ನು ಕೇಂದ್ರ ಸರ್ಕಾರ ಈಗ ಅನುಮೋದಿಸಿದೆ ಎಂದು ತಮಗೆ ತಿಳಿಸಲು ಸಂತೋಷವಾಗುತ್ತಿದೆ ಎಂದು ಪ್ರಹ್ಲಾದ್ ಜೋಶಿ ಅವರು ಸಾಮಾಜಿಕ ಮಾಧ್ಯಮ ವೇದಿಕೆ 'ಎಕ್ಸ್' ನಲ್ಲಿ, ಹಂಚಿಕೊಂಡಿದ್ದಾರೆ.

# ಇದು ಕೇವಲ ಜಾತಿ ಸಮೀಕ್ಷೆಯಲ್ಲ

## ಜನರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆ

**ಗದಗ:** ರಾಜ್ಯದಲ್ಲಿ ನಡೆಸಲು ಉದ್ದೇಶಿಸಿರುವ ಸಮೀಕ್ಷೆ ಕೇವಲ ಜಾತಿ ಸಮೀಕ್ಷೆಯಾಗಿರದೇ, ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಾಗಿದೆ. ಜನರ ಜಾತಿಯ ವಿವರ ಪಡೆಯುವ ಜೊತೆಗೆ ಅವರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ವಿವರ ಪಡೆದು, ಅವಕಾಶ ವಂಚಿತರಿಗೆ ಸಮಾನ ಅವಕಾಶಗಳನ್ನು ನೀಡಲು ಈ ಸಮೀಕ್ಷೆಯನ್ನು ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶನಿವಾರ ಗದಗದ ಸರ್ಕ್ಯೂಟ್ ಹೌಸ್ ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಜಾತಿ ಸಮೀಕ್ಷೆಯಲ್ಲಿ ಕ್ರಿಶ್ಚಿಯನ್ ನಡಿ ವಿವಿಧ ಜಾತಿಗಳನ್ನು ಉಲ್ಲೇಖಿಸಲಾಗುವುದೇ ಎಂಬುದಕ್ಕೆ ಉತ್ತರಿಸಿ, ಇದರ ಬಗ್ಗೆ ಅಭಿಪ್ರಾಯಗಳನ್ನು ತಿಳಿಸಲಾಗಿದ್ದು, ಅನಗತ್ಯವಿರುವ ಅಂಶಗಳನ್ನು ತೆಗೆದುಹಾಕಲು ಹಿಂದುಳಿದ ವರ್ಗಗಳ ಆಯೋಗವೇ ನಿರ್ಧರಿಸುತ್ತದೆ. ಆಯೋಗವು ಶಾಸನಬದ್ಧ ಸಂಸ್ಥೆಯಾಗಿದ್ದು, ಸಮೀಕ್ಷೆ ನಡೆಸಲು ಮಾರ್ಗಸೂಚಿಗಳನ್ನಷ್ಟೇ ಸರಕಾರ ನೀಡಿದೆ. 1,75,000 ಶಿಕ್ಷಕರು ಸಮೀಕ್ಷಾ ಕಾರ್ಯಕ್ಕೆ ನಿಯೋಜಿತರಾಗಿದ್ದಾರೆ. ಒಬ್ಬ ಶಿಕ್ಷಕರು ತಲಾ 150 ಮನೆಗಳಿಂದ ಮಾಹಿತಿ ಸಂಗ್ರಹಿಸಲಿದ್ದು, ಈ ಸಮೀಕ್ಷಾ ಕಾರ್ಯ 15 ದಿನಗಳ ಕಾಲ ನಡೆಯಲಿದೆ. ಸಮೀಕ್ಷೆಯಲ್ಲಿ ಧರ್ಮ, ಜಾತಿ, ಉಪಜಾತಿ, ಶಿಕ್ಷಣ, ಉದ್ಯೋಗ ಸೇರಿದಂತೆ ಹಲವು ಮಾಹಿತಿಗಳನ್ನು ಕಲೆಹಾಕಲಿದ್ದಾರೆ ಎಂದರು.

**ಸಮೀಕ್ಷೆಗೆ ಯಾರ ವಿರೋಧವೂ ಇಲ್ಲ:** ಜಾತಿಗಣತಿಯ ಹಿಂದೆ ಷಡ್ಯಂತ್ರವಿದೆ ಎಂದು ವಚನಾನಂದ ಸ್ವಾಮೀಜಿಗಳು ಆರೋಪಿಸಿರುವುದಕ್ಕೆ ಪ್ರತಿಕ್ರಿಯೆ ನೀಡಿ, ಕೇಂದ್ರ ಸರಕಾರವೂ ಜಾತಿ ಸಮೀಕ್ಷೆ ನಡೆಸಲಿದ್ದು, ಅದರಲ್ಲಿಯೂ ಷಡ್ಯಂತ್ರವಿರಲಿದೆಯೇ? ಸಮೀಕ್ಷೆಗೆ ಯಾವುದೇ ಸಚಿವರು ವಿರೋಧ ವ್ಯಕ್ತಪಡಿಸಿಲ್ಲ. ಸಮಾಜದಲ್ಲಿ ಸಮಾನತೆ ತರಲು ಬಡವರಿಗೆ ಸರಕಾರಿ ಯೋಜನೆಗಳಲ್ಲಿ ಆದ್ಯತೆ ನೀಡಬೇಕಾಗುತ್ತದೆ ಎಂದರು.

**ಜಾತಿ ಒಡೆಯುವ ಪ್ರಶ್ನೆಯೇ ಇಲ್ಲ- ಬಿಜೆಪಿ ರಾಜಕೀಯ ಮಾಡುತ್ತಿದೆ:** ಸಮೀಕ್ಷೆಯ ನಿರ್ಧಾರವನ್ನು ಮರುಪರಿಶೀಲಿಸಲು ರಾಜ್ಯಪಾಲರು ಸೂಚನೆ ನೀಡುವಂತೆ ಬಿಜೆಪಿಯವರು ಮನವಿ ಸಲ್ಲಿಸಿರುವ ಬಗ್ಗೆ ಬಗ್ಗೆ ಪ್ರತಿಕ್ರಿಯೆ ನೀಡಿ, ಸಮೀಕ್ಷೆಯ ವಿಚಾರದಲ್ಲಿ ಬಿಜೆಪಿಯು ರಾಜಕೀಯ ಮಾಡುತ್ತಿದೆ. ಸಮೀಕ್ಷೆಯ ವಿಚಾರದಲ್ಲಿ ಜಾತಿ ಒಡೆಯುವ ಪ್ರಶ್ನೆಯೇ ಇಲ್ಲ ಎಂದರು.

ರಾಜ್ಯದಲ್ಲಿ ಭಾರಿ ಮಳೆಯಿಂದ ಬೆಳೆಹಾನಿ ಸಂಭವಿಸಿರುವ ಬಗ್ಗೆ ಉತ್ತರಿಸುತ್ತಾ, ರಾಜ್ಯದಲ್ಲಿ ಸಂಭವಿಸಿರುವ ಬೆಳೆಹಾನಿ ಬಗ್ಗೆ ಜಂಟಿ ಸಮೀಕ್ಷೆ ನಡೆಸಲಾಗುತ್ತಿದ್ದು, ವರದಿ ಬಂದ ನಂತರ ಬೆಳೆ ಪರಿಹಾರ ನೀಡಲಾಗುವುದು. ಗದಗ ಜಿಲ್ಲೆಯಲ್ಲಿ ಇನ್ನೆರೆಡು ದಿನಗಳಲ್ಲಿ ಜಂಟಿಸಮೀಕ್ಷೆಯು ಪೂರ್ಣಗೊಳ್ಳಲಿದೆ ಎಂದರು.



### ಕೇಂದ್ರ ಸರಕಾರದ್ದೇ ಅಂತಿಮ

ಕುರುಬ ಸಮಾಜವನ್ನು ಎಸ್‌ಟಿ ಗೆ ಸೇರಿಸುವ ಬಗ್ಗೆ ಪ್ರತಿಕ್ರಿಯಿಸಿ, ಕುರುಬ ಸಮಾಜವನ್ನು ಎಸ್‌ಟಿಗೆ ಸೇರಿಸುವ ಶಿಫಾರಸನ್ನು ಹಿಂದಿನ ಬಿಜೆಪಿ ಸರಕಾರವೇ ಮಾಡಿತ್ತು. ಆದರೆ ಈ ಪ್ರಸ್ತಾವನೆಯನ್ನು ಕೇಂದ್ರ ಸರಕಾರ ವಾಪಸು ಕಳಿಸಿದ್ದು, ಅದಕ್ಕೆ ವಿವರಣೆಯನ್ನು ಸರಕಾರ ನೀಡಲಿದೆ. ಯಾವುದೇ ಸಮುದಾಯವನ್ನು ಎಸ್‌ಟಿಗೆ ಸೇರಿಸುವ ನಿರ್ಧಾರವನ್ನು ಕೇಂದ್ರ ಸರಕಾರವೇ ತೆಗೆದುಕೊಳ್ಳುತ್ತದೆ ಎಂದರು.

# ಆಳಂದ ಮತಗಳ್ಳತನ ಪ್ರಕರಣ

## ತನಿಖೆಗೆ ಎಸ್‌ಐಟಿ ರಚಿಸಿ ರಾಜ್ಯ ಸರ್ಕಾರದ ಆದೇಶ

**ಬೆಂಗಳೂರು:** ಕಲಬುರ್ಗಿ ಆಳಂದ ಕ್ಷೇತ್ರದಲ್ಲಿ ನಡೆದ ಮತಗಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಎಸ್ ಐಟಿ ರಚಿಸಿ ಆದೇಶ ಹೊರಡಿಸಿದೆ. ಮತಪಟ್ಟಿಯಿಂದ ಅನಧಿಕೃತವಾಗಿ ಹೆಸರು ಕೈ ಬಿಡಲಾಗಿರುವ ಆರೋಪ ಸಂಬಂಧ 21.02.2023 ರಂದು ನೀಡಿದ ದೂರಿನ ಆಧಾರದ ಮೇಲೆ ಕಲ್ಬುರ್ಗಿ ಜಿಲ್ಲೆ ಆಳಂದ ಪೊಲೀಸ್ ಠಾಣೆಯಲ್ಲಿ 26/2023 ಕಲಂ. 182, 419, 464, 465 ಐ.ಪಿ.ಸಿ ರಂತೆ ಪ್ರಕರಣ ದಾಖಲಾಗಿದೆ.

ಈ ಪ್ರಕರಣದ ತನಿಖೆಗಾಗಿ ಸಿಐಡಿ ಅಪರ ಪೊಲೀಸ್ ಮಹಾನಿರ್ದೇಶಕರಾದ ಬಿ.ಕೆ.ಸಿಂಗ್ ನೇತೃತ್ವದಲ್ಲಿ ಎಸ್ ಐಟಿ ರಚನೆ ಮಾಡಲಾಗಿದೆ. ಸಿಐಡಿ ಎಸ್ ಪಿ ಸೈದುಲು ಅದಾವತ್ ಮತ್ತು ಸಿಐಡಿ ಎಸ್ ಪಿ ಶುಭಾನ್ವಿತ ಎಸ್ ಐಟಿ ತಂಡದಲ್ಲಿರಲಿದ್ದಾರೆ. ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ದೆಹಲಿಯಲ್ಲಿ ಈ ಪ್ರಕರಣ ಸಂಬಂಧ ಸುದ್ದಿಗೋಷ್ಠಿ ನಡೆಸಿ ಮತಗಳ್ಳತನದ ಆರೋಪ ಮಾಡಿದ್ದರು.

ಕಲ್ಬುರ್ಗಿ ಜಿಲ್ಲೆಯ ಆಳಂದ ವಿಧಾನಸಭಾ ಕ್ಷೇತ್ರದಲ್ಲಿನ 256 ಮತಗಟ್ಟೆಗಳ ವ್ಯಾಪ್ತಿಯಲ್ಲಿ ಬರುವ 6,670 ಮತದಾರರನ್ನು ಮತದಾರರ ಪಟ್ಟಿಯಿಂದ ಅನಧಿಕೃತವಾಗಿ ಕೈಬಿಡಲಾಗಿದೆ ಎಂದು ಚುನಾವಣಾ ಆಯೋಗಕ್ಕೆ ಮಾಜಿ ಶಾಸಕರಾಗಿದ್ದ ಬಿ. ಆರ್. ಪಾಟೀಲ್ ರವರು ದೂರು ಸಲ್ಲಿಸಿದ್ದ ಹಿನ್ನೆಲೆಯಲ್ಲಿ, ಚುನಾವಣಾ ಆಯೋಗ ಈ ಕುರಿತಂತೆ ಪರಿಶೀಲಿಸಿದಾಗ ಒಟ್ಟು 6018 ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡುವಂತೆ ವಿವಿಧ ಸರ್ಕಾರಿ ಆನ್‌ಲೈನ್ ಅಪ್ಲಿಕೇಷನ್‌ಗಳಿಗೆ ಅರ್ಜಿಗಳು ಸ್ವೀಕೃತವಾಗಿದ್ದು, ಅವುಗಳಲ್ಲಿ 24 ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಪುರಸ್ಕರಿಸಿ ಮತದಾರರ ಪಟ್ಟಿಯಿಂದ ಹೆಸರುಗಳನ್ನು ಕೈಬಿಟ್ಟಿರುವುದು ಪತ್ತೆಯಾಗಿದೆ.

ಆದರೆ, 5994 ಅರ್ಜಿಗಳನ್ನು ಪರಿಶೀಲಿಸಿದಾಗ ಸದರಿ ಅರ್ಜಿಗಳನ್ನು ಯಾರೋ, ಯಾವುದೋ ದುರುದ್ದೇಶದಿಂದ ವಿವಿಧ ಮೊಬೈಲ್ ಸಂಖ್ಯೆಗಳನ್ನು ಉಪಯೋಗಿಸಿ, ಮೂಲ ಮತದಾರರ ಗಮನಕ್ಕೆ ಬಾರದಂತೆ ಮತ್ತು ಗೊತ್ತಾಗದಂತೆ ಮತದಾರರ ಪಟ್ಟಿಯಿಂದ ಹೆಸರನ್ನು ಕೈಬಿಡಲು ಅರ್ಜಿ ಸಲ್ಲಿಸಿರುವುದು ಕಂಡು ಬಂದಿರುವ ಬಗ್ಗೆ ದೂರುದಾರರಾದ ಮಮತಾರವರು ವಿಚಾರಣೆ ಮಾಡಿ 21.02.2023 ರಂದು ನೀಡಿದ ದೂರಿನ ಆಧಾರದ ಮೇಲೆ ಕಲ್ಬುರ್ಗಿ ಜಿಲ್ಲೆ ಆಳಂದ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ: 26/2023 ಕಲಂ. 182, 419, 464, 465 ಐ.ಪಿ.ಸಿ ರಂತೆ ಪ್ರಕರಣ ದಾಖಲಾಗಿದೆ. ಈ ಕ್ರಿಮಿನಲ್ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯದ ಇತರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಬಹುದಾದ ಇತರ ಪ್ರಕರಣಗಳ ಸಮಗ್ರ ತನಿಖೆಯನ್ನು ಕೈಗೊಳ್ಳಲು ಎಸ್ ಐಟಿ ತನಿಖಾ ತಂಡವನ್ನು ರಚಿಸಲಾಗಿದೆ. ವಿಶೇಷ ತನಿಖಾ ತಂಡಕ್ಕೆ ಕರ್ನಾಟಕ ರಾಜ್ಯ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ, ಪೊಲೀಸ್ ಠಾಣಾಧಿಕಾರವನ್ನು ನೀಡಲಾಗಿದೆ. ಸಿಐಡಿಯ ಈ ವಿಶೇಷ ತನಿಖಾ ತಂಡಕ್ಕೆ ಆಳಂದ ಪ್ರಕರಣವೂ ಸೇರಿದಂತೆ ಹಾಗೂ ಈ ಸಂಬಂಧ ಕರ್ನಾಟಕ ರಾಜ್ಯದ ಇತರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ / ದಾಖಲಾಗುವ ಇತರ ಎಲ್ಲಾ ಕ್ರಿಮಿನಲ್ ಪ್ರಕರಣಗಳ ತನಿಖೆಯನ್ನು ನಡೆಸಲು ಸೂಚಿಸಲಾಗಿದೆ. ಎಲ್ಲ ಪ್ರಕರಣಗಳ ಸಮಗ್ರ ತನಿಖೆಯನ್ನು ಕೈಗೊಂಡು ಶೀಘ್ರವೇ ತನಿಖೆಯನ್ನು ಪೂರ್ಣಗೊಳಿಸಿ ತನಿಖಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.



## ಎಲ್ಲರಿಗೂ ತೃಪ್ತಿಯಾಗುವಂತೆ ಸಮೀಕ್ಷೆ

**ಬೆಂಗಳೂರು:** ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸೆ.22ರಿಂದ ಆರಂಭಿಸಲಿರುವ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯು ರಾಜ್ಯದ ಎಲ್ಲ 7 ಕೋಟಿ ಜನರಿಗೂ ತೃಪ್ತಿಯಾಗುವ ರೀತಿಯಲ್ಲಿ ನಡೆಯಲಿದೆ ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ವಿಶ್ವಾಸ ವ್ಯಕ್ತಪಡಿಸಿದರು.

ಶನಿವಾರ ವಿಕಾಸಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮೀಕ್ಷೆ ಪೂರ್ಣಗೊಂಡ ಬಳಿಕ, ಸಮುದಾಯಗಳ ಹಿಂದುಳಿದಿರುವಿಕೆಯನ್ನು ಗುರುತಿಸಲಾಗುವುದು. ಯಾರಿಗೂ ಅನ್ಯಾಯ ಆಗದ ರೀತಿಯಲ್ಲಿ, ಎಲ್ಲರ ಅಭಿಪ್ರಾಯ ಪಡೆದೇ ಸರಕಾರ ಮುಂದಡಿ ಇಡಲಿದೆ. ಇದನ್ನು ಮುಖ್ಯಮಂತ್ರಿ ಈಗಾಗಲೇ ಸ್ಪಷ್ಟಪಡಿಸಿದ್ದಾರೆ ಎಂದು ಹೇಳಿದರು. ಎಲ್ಲ ಜಾತಿ, ಜನಾಂಗದಲ್ಲೂ ಬಡವರಿದ್ದಾರೆ, ನಿರ್ಗತಿಕರಿದ್ದಾರೆ. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ಸಿಗಬೇಕು. ಸರಕಾರದ ಯೋಜನೆಯ ಲಾಭ ದೊರಕಬೇಕು. ಈ ನಿಟ್ಟಿನಲ್ಲಿ ಸರಕಾರ ಶ್ರಮಿಸುತ್ತಿದೆ. ಹಿಂದುಳಿದಿರುವಿಕೆಯನ್ನು ತಿಳಿಯಲು ಮತ್ತು ಅವರಿಗೆ ಸೂಕ್ತ ಸೌಲಭ್ಯ ಕಲ್ಪಿಸುವ ಉದ್ದೇಶದಿಂದಲೇ ಈ ಸಮೀಕ್ಷೆ ನಡೆಯುತ್ತಿದೆ. ಹೀಗಾಗಿ ಸಮಾಜದ ಪ್ರತಿಯೊಬ್ಬರೂ ಇದರಲ್ಲಿ ಭಾಗಿಯಾಗಬೇಕು ಮತ್ತು ವಾಸ್ತವ ಮಾಹಿತಿಯನ್ನು ದಾಖಲೀಕರಿಸಬೇಕು ಎಂದು ಅವರು ಕೋರಿದರು.



## ಬೆಳಗಾವಿಯಲ್ಲಿ ವೆಂಕಟೇಶ್ವರ ದೇಗುಲ

**ಬೆಂಗಳೂರು:** ಉತ್ತರ ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರದ ಭಕ್ತರಿಗೆ ಅನುಕೂಲವಾಗುವ ಉದ್ದೇಶದಿಂದ ಬೆಳಗಾವಿಯಲ್ಲಿ ಹೊಸ ವೆಂಕಟೇಶ್ವರ ದೇವಾಲಯ ನಿರ್ಮಾಣಕ್ಕೆ ಅನುಮೋದನೆ ನೀಡಿರುವುದಾಗಿ ಟಿಟಿಡಿ ಮಂಡಳಿ ತಿಳಿಸಿದೆ. ಮಲ್ಲೇಶ್ವರಂನ ವೆಂಕಟೇಶ್ವರ ದೇವಸ್ಥಾನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ತಿರುಮಲ ತಿರುಪತಿ ದೇವಸ್ಥಾನ ಮಂಡಳಿಯ ಸದಸ್ಯ ಎಸ್ ನರೇಶ್ ಕುಮಾರ್ ಈ ಘೋಷಣೆ ಮಾಡಿದ್ದಾರೆ.

ಸೆಪ್ಟೆಂಬರ್ 16 ರಂದು ನಡೆದ ಮಂಡಳಿಯ ಸಭೆಯಲ್ಲಿ ಈ ನಿರ್ಣಯವನ್ನು ಅಂಗೀಕರಿಸಲಾಗಿದೆ ಎಂದು ಟಿಟಿಡಿ ಹೇಳಿಕೆಯಲ್ಲಿ ತಿಳಿಸಿದೆ. ಬೆಂಗಳೂರು ಮತ್ತು ದೇಶದ ಇತರ ಭಾಗಗಳಲ್ಲಿ ಈಗಾಗಲೇ ಸ್ಥಾಪಿಸಲಾದ ದೇವಾಲಯಗಳಂತೆ, ಬೆಳಗಾವಿ ದೇವಾಲಯವು ಈ ಪ್ರದೇಶದ ಭಕ್ತರಿಗೆ ವೆಂಕಟೇಶ್ವರನನ್ನು ಹತ್ತಿರ ತರುತ್ತದೆ. ಪ್ರತಿ ಬಾರಿ ತಿರುಮಲಕ್ಕೆ ಪ್ರಯಾಣಿಸುವ ಬದಲು, ಭಕ್ತರಿಗೆ ಸ್ಥಳೀಯವಾಗಿ ಸ್ವಾಮಿಯ ಆಶೀರ್ವಾದ ಸಿಗುತ್ತದೆ ಎಂದು ಹೇಳಿದರು. ಬೆಳಗಾವಿಯಲ್ಲಿ ಸುವರ್ಣ ಸೌಧದ ಬಳಿ ಈ ದೇವಾಲಯವನ್ನು ನಿರ್ಮಿಸಲು ಪ್ರಸ್ತಾಪಿಸಲಾಗಿದ್ದು, ಶ್ರೀವಾಣಿ ಟ್ರಸ್ಟ್ ಮೂಲಕ ಇದನ್ನು ನಿರ್ಮಿಸಲಾಗುವುದು ಎಂದು ಅವರು ಹೇಳಿದರು. ಟಿಟಿಡಿ ಅಧ್ಯಕ್ಷ ಬಿಆರ್ ನಾಯ್ಡು ಅವರು ಶೀಘ್ರದಲ್ಲೇ ಬೆಳಗಾವಿಗೆ ಭೇಟಿ ನೀಡಿ ಸ್ಥಳ ಪರಿಶೀಲಿಸುವ ಮತ್ತು ಮುಂದಿನ ಹಂತಗಳ ಮೇಲ್ವಿಚಾರಣೆ ನಡೆಸುವ ನಿರೀಕ್ಷೆಯಿದೆ ಎಂದು ನರೇಶ್ ಕುಮಾರ್ ಹೇಳಿದರು.

## ಉಕ್ರೇನ್ ಮೇಲೆ ರಷ್ಯಾ ದಾಳಿ

**ಕೀವ್:** ಉಕ್ರೇನ್‌ನಾದ್ಯಂತ ಕೆಲ ಪ್ರದೇಶಗಳನ್ನು ಗುರಿಯಾಗಿಸಿ ಶನಿವಾರ ಬೆಳಿಗ್ಗೆ ರಷ್ಯಾ ನಡೆಸಿದ ದೊಡ್ಡ ಪ್ರಮಾಣದ ಕ್ಷಿಪಣಿ ಮತ್ತು ಡ್ರೋನ್ ದಾಳಿಯಲ್ಲಿ ಕನಿಷ್ಠ ಮೂವರು ಮೃತಪಟ್ಟಿದ್ದು 12ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವುದಾಗಿ ಉಕ್ರೇನ್ ಅಧಿಕಾರಿಗಳು ಹೇಳಿದ್ದಾರೆ.

ರಷ್ಯಾವು 619 ಡ್ರೋನ್‌ಗಳು, 8 ಬ್ಯಾಲಿಸ್ಟಿಕ್, 32 ಕ್ರೂಸ್ ಕ್ಷಿಪಣಿಗಳನ್ನು ಪ್ರಯೋಗಿಸಿದ್ದು 552 ಡ್ರೋನ್‌ಗಳು, 2 ಬ್ಯಾಲಿಸ್ಟಿಕ್ ಹಾಗೂ 29 ಕ್ರೂಸ್ ಕ್ಷಿಪಣಿಗಳನ್ನು ಹೊಡೆದುರುಳಿಸಲಾಗಿದೆ. ನಿಪ್ರೊಪೆಟ್ರೋವ್ಸ್ಕ ಪ್ರಾಂತದಲ್ಲಿ ಕನಿಷ್ಠ 26 ಮಂದಿ ಗಾಯಗೊಂಡಿದ್ದು ಹಲವು ಬಹುಮಹಡಿ ಕಟ್ಟಡಗಳು ಹಾಗೂ ಮನೆಗಳು ಹಾನಿಗೊಂಡಿವೆ. ಕೀವ್ ಪ್ರಾಂತದಲ್ಲಿ ಮನೆಗಳು ಹಾಗೂ ವಾಹನಗಳಿಗೆ ಹಾನಿಯಾಗಿದೆ.

ನಿಪ್ರೊಪೆಟ್ರೋವ್ಸ್ಕ, ಮಿಕೊಲಾಯಿವ್, ಚೆರ್ನಿಹಿವ್, ಝಪೋರಿಝಿಯಾ, ಪೋಲ್ಟಾವ, ಕೀವ್, ಒಡೆಸಾ, ಸುಮಿ ಮತ್ತು ಖಾರ್ಕಿವ್ ಸೇರಿದಂತೆ 9 ಪ್ರಾಂತಗಳಾದ್ಯಂತ ದಾಳಿ ನಡೆದಿದೆ. ನಮ್ಮ ಮೂಲಸೌಕರ್ಯಗಳು, ಜನವಸತಿ ಪ್ರದೇಶಗಳು ಮತ್ತು ನಾಗರಿಕ ಸಂಸ್ಥೆಗಳು ಶತ್ರುಗಳ ಗುರಿಯಾಗಿವೆ. ನಿಪ್ರೋ ನಗರದಲ್ಲಿ ಕ್ಲಸ್ಟರ್ ಶಸ್ತ್ರಾಸ್ತ್ರ ಹೊಂದಿದ್ದ ಕ್ಷಿಪಣಿಯೊಂದು ಬಹುಮಹಡಿ ಕಟ್ಟಡಕ್ಕೆ ಅಪ್ಪಳಿಸಿದೆ. ಇದು ನಮ್ಮ ನಾಗರಿಕರನ್ನು ಬೆದರಿಸಲು ಮತ್ತು ಮೂಲಸೌಕರ್ಯಗಳನ್ನು ನಾಶಗೊಳಿಸಲು ರಶ್ಯ ನಡೆಸಿದ ಉದ್ದೇಶಪೂರ್ವಕ ತಂತ್ರವಾಗಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್‌ಸ್ಕಿ ಖಂಡಿಸಿದ್ದಾರೆ.

### ಒಕ್ಕಲಿಗ ಸಮುದಾಯದ ಸಭೆಯಲ್ಲಿ ನಿರ್ಮಲಾನಂದ ಸ್ವಾಮಿಜಿ ಆಗ್ರಹ

# ಸಮೀಕ್ಷೆ ಮುಂದೂಡುವಂತೆ ಒತ್ತಾಯ

**ಬೆಂಗಳೂರು:** ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮೂಲಕ ಸೆ.22ರಿಂದ ನಡೆಸಲು ಉದ್ದೇಶಿಸಿರುವ 'ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ'ಯನ್ನು ಮುಂದೂಡಬೇಕು ಹಾಗೂ ಸಮೀಕ್ಷಾ ಅವಧಿಯನ್ನು ವಿಸ್ತರಣೆ ಮಾಡಬೇಕು ಎಂದು ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಆಗ್ರಹಿಸಿದ್ದಾರೆ. ಶನಿವಾರ ವಿಜಯನಗರದ ಆದಿಚುಂಚನಗಿರಿ ಮಠದ ಸಮುದಾಯ ಭವನದಲ್ಲಿ ಸಮುದಾಯದ ವಿವಿಧ ಮಠಾಧೀಶರು, ಒಕ್ಕಲಿಗ ಸಮುದಾಯದ ಜನಪ್ರತಿನಿಧಿಗಳು ಹಾಗೂ ಸಂಘ-ಸಂಸ್ಥೆಗಳ ಪ್ರಮುಖರೊಂದಿಗೆ ನಡೆಸಿದ ಸಮಾಲೋಚನಾ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸ್ವಾಮೀಜಿ, ಸಮೀಕ್ಷೆಯಲ್ಲಿ ಒಕ್ಕಲಿಗ ಸಮುದಾಯದವರು ಜಾತಿ ಕಾಲಂನಲ್ಲಿ ಏನೇ ಇದ್ದರೂ 'ಒಕ್ಕಲಿಗ' ಎಂದೇ ಬರೆಸಬೇಕು. ಅಗತ್ಯವಿದ್ದರೆ ಮಾತ್ರ ಉಪಪಂಗಡಗಳನ್ನು ಬರೆಸಬೇಕು ಎಂದು ಸಲಹೆ ಮಾಡಿದರು.

ಹೊಸದಾಗಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಅವಕಾಶ ಕಲ್ಪಿಸಿರುವುದನ್ನು ಸ್ವಾಗತಿಸುತ್ತೇವೆ. ಆದರೆ, ಸೆ.22ರಿಂದ ನವರಾತ್ರಿ ಆಚರಣೆ ನಡೆಯುತ್ತದೆ. ಅಲ್ಲದೆ, ಈ ವೇಳೆ ಪಿತೃಪಕ್ಷ ಸೇರಿದಂತೆ ಸಾಲು-ಸಾಲು ಹಬ್ಬಗಳಿವೆ. ರೈತಾಪಿ ಸಮುದಾಯ ಕೃಷಿ ಚಟುವಟಿಕೆಯಲ್ಲಿ ಮಗ್ನವಾಗಿರುತ್ತದೆ. ಜೊತೆಗೆ ಶಾಲೆಗಳಿಗೆ ದಸರಾ ರಜೆ ಇರಲಿದೆ. ಹೀಗಾಗಿ ಈ ಕಾಲಘಟ್ಟ ವಾಸ್ತವಿಕವಾಗಿ ಸಮೀಕ್ಷೆ ಸಾಧ್ಯವಿಲ್ಲ. ಸರಕಾರ 400ರಿಂದ 500 ಕೋಟಿ ರೂ.ವೆಚ್ಚ ಮಾಡಿ ಸಮೀಕ್ಷೆ ನಡೆಸುತ್ತಿದ್ದು, ಇದು ಅರ್ಥಪೂರ್ಣವಾಗಬೇಕು ಎಂಬುದೇ ನಮ್ಮ ಅಪೇಕ್ಷೆ. ಸಮೀಕ್ಷೆಗೆ ಇದು ಸೂಕ್ತ ಕಾಲವಲ್ಲ, ಹೀಗಾಗಿ ಸಮೀಕ್ಷೆಯನ್ನು ಮುಂದೂಡಬೇಕು ಎಂದರು.

ತೆಲಂಗಾಣ ರಾಜ್ಯದಲ್ಲಿ 3.50ಕೋಟಿ ಜನಸಂಖ್ಯೆ ಇದೆ. ಅಲ್ಲಿ 3 ತಿಂಗಳ ಕಾಲಾವಕಾಶ ಕೊಟ್ಟು ಆಧುನಿಕ ತಂತ್ರಜ್ಞಾನ ಬಳಸಿ ಸಮೀಕ್ಷೆ ಮಾಡಿದ್ದಾರೆ. ರಾಜ್ಯದಲ್ಲಿ 7 ಕೋಟಿಗೂ ಹೆಚ್ಚು ಜನಸಂಖ್ಯೆಯಿದ್ದು, ಸಮೀಕ್ಷೆ ವೈಜ್ಞಾನಿಕವಾಗಿ ಆಗಬೇಕು. ಅದಕ್ಕಾಗಿ ಹೆಚ್ಚು ಸಮಯವನ್ನು ನೀಡಬೇಕು ಎಂದು ನಿರ್ಮಲಾನಂದನಾಥ ಸ್ವಾಮೀಜಿ ಆಗ್ರಹಿಸಿದರು. ಜಾತಿಗಣತಿ ಬಗ್ಗೆ ಸಮುದಾಯದವರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಎಲ್ಲ ಜನಪ್ರತಿನಿಧಿಗಳಿಗೆ ಈ ವಿಚಾರವನ್ನು ಮನದಟ್ಟು ಮಾಡಲಾಗಿದೆ. ಒಕ್ಕಲಿಗರ ಜಾತಿಯ ಜೊತೆಗೆ ವಿವಿಧ ಧರ್ಮ, ಜಾತಿಗಳನ್ನು ಸೇರಿಸಿರುವುದು ವೈರುಧ್ಯಕ್ಕೆ ಕಾರಣವಾಗಿದೆ.ಇದೀಗ ಆಯೋಗವು ಪ್ರಕಟಿಸಿರುವ ಜಾತಿಗಳ ಪಟ್ಟಿ ಹಾಗೂ ಸಮೀಕ್ಷೆಯಲ್ಲಿ ನ್ಯೂನತೆಗಳಿದ್ದು, ಅವುಗಳನ್ನು ಸರಿಪಡಿಸಬೇಕು ಎಂದು ಸ್ವಾಮೀಜಿ ಮನವಿ ಮಾಡಿದರು. ರಾಜ್ಯ ಸರಕಾರಕ್ಕೆ ಜನಗಣತಿ ಮಾಡುವ ಅಧಿಕಾರವಿಲ್ಲ. ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಮಾತ್ರ ಸಮೀಕ್ಷೆ ಮಾಡಬೇಕು. ಶೇ.90ರಷ್ಟು ಒಕ್ಕಲಿಗ ಸಮುದಾಯದವರು ಉಪಜಾತಿಯನ್ನು ಬರೆಸಲು ಸಿದ್ಧವಿಲ್ಲ. ಕಾರಣಾಂತರದಿಂದ ಸಣ್ಣ-ಪುಟ್ಟ ಆಚರಣೆಯಿಂದ ಬಂದಿರುವ ಧಾರ್ಮಿಕ, ಸಾಂಸ್ಕೃತಿಕ ಆಚರಣೆಗಳು ಮನೆಗೆ ಸೀಮಿತವಾಗಿರುತ್ತವೆ. ಹೀಗಾಗಿ ಸರಕಾರ ಸಮೀಕ್ಷೆಯನ್ನು ಮುಂದೂಡಬೇಕು ಎಂದರು.

ಕ್ರಿಶ್ಚಿಯನ್ ಒಕ್ಕಲಿಗ, ಜೈನ ಒಕ್ಕಲಿಗ ಎಂದೆಲ್ಲಾ ಉಲ್ಲೇಖಿಸಲಾಗಿದೆ. ಮುಂದೆ ಮುಸ್ಲಿಮ್ ಒಕ್ಕಲಿಗ, ಹಿಂದೂ ಕ್ರಿಶ್ಚಿಯನ್ ಆಗಬಹುದಲ್ಲವೇ?. ಧರ್ಮ ಒಡೆದಿರುವ ಬಗ್ಗೆ ಇತಿಹಾಸ ಅವಲೋಕಿಸಿದರೆ ಗಮನಕ್ಕೆ ಬರುತ್ತದೆ. 'ನಾಸ್ತಿಕ' ಬಳಕೆಗೆ ಅವಕಾಶ ಕಲ್ಪಿಸಿರುವುದು ಗಮನಿಸಿದರೆ ಪ್ರಜಾಪ್ರಭುತ್ವದಲ್ಲಿ ಏನು ಬೇಕಾದರೂ ಆಗಬಹುದು ಎಂದು ಸ್ವಾಮೀಜಿ ಆಕ್ಷೇಪಿಸಿದರು.




### ಒಗ್ಗಟ್ಟು ಪ್ರದರ್ಶನ

ಪರಸ್ಪರ ಆರೋಪ-ಪ್ರತ್ಯಾರೋಪದಲ್ಲಿ ತೊಡಗಿರುತ್ತಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸೇರಿದಂತೆ ಆಡಳಿತ ಮತ್ತು ಪ್ರತಿಪಕ್ಷಗಳ ಒಕ್ಕಲಿಗ ಸಮುದಾಯದ ಜನಪ್ರತಿನಿಧಿಗಳು ಆದಿಚುಂಚನಗಿರಿ ಮಠದ ಸ್ವಾಮೀಜಿಗಳ ನೇತೃತ್ವದಲ್ಲಿ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ ವಿಚಾರ ಸಂಬಂಧ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದು ವಿಶೇಷವಾಗಿತ್ತು.

**ಪಾರದರ್ಶಕವಾಗಿರಲಿ:** ಸಮೀಕ್ಷೆ ಸಂದರ್ಭದಲ್ಲಿ ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ವಿಳಾಸ ಪಡೆದ ಮೇಲೆ ಗಣತಿದಾರರು ಪೂರ್ಣ ಮಾಹಿತಿ ಪಡೆದು ಅಪ್‌ಲೋಡ್ ಮಾಡಿದ ಬಳಿಕ ಮನೆಯ ಯಜಮಾನನಿಗೆ ಅದರ ಪೂರ್ಣ ಮಾಹಿತಿ ಸಿಗಬೇಕು. ಸಮೀಕ್ಷೆಯ ಮಾಹಿತಿಯೂ ಸಾರ್ವಜನಿಕರಿಗೆ ಮುಕ್ತವಾಗಿ ಸಿಗಬೇಕು, ಜತೆಗೆ ಪಾರದರ್ಶಕವಾಗಿರಬೇಕು ಎಂದು ಅವರು ತಿಳಿಸಿದರು.

ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ, ಪಟ್ಟನಾಯಕನಹಳ್ಳಿ ಮಠದ ನಂಜಾವಧೂತ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ನಿಶ್ಚಲಾನಂದನಾಥ ಸ್ವಾಮೀಜಿ ಸಾನ್ನಿಧ್ಯದಲ್ಲಿ ನಡೆದ ಸಮೀಕ್ಷೆಯ ಸಮಾಲೋಚನಾ ಸಭೆಯಲ್ಲಿ ಪಕ್ಷಬೇಧ ಮರೆತು ಸಮುದಾಯದ ರಾಜಕೀಯ ಪಕ್ಷಗಳ ಮುಖಂಡರು ಒಗ್ಗಟ್ಟು ಪ್ರದರ್ಶಿಸಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಮಾಜಿ ಸಿಎಂ ಡಿ.ವಿ.ಸದಾನಂದಗೌಡ, ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಡಿಸಿಎಂ ಡಾ.ಅಶ್ವತ್ಥ ನಾರಾಯಣ್, ಒಕ್ಕಲಿಗರ ಸಂಘದ ಅಧ್ಯಕ್ಷ ಬಿ.ಕೆಂಚಪ್ಪಗೌಡ, ಟಿ.ಕೋನಪ್ಪರೆಡ್ಡಿ ಸೇರಿದಂತೆ ಸಮುದಾಯದ ಶಾಸಕರು, ಪರಿಷತ್ ಸದಸ್ಯರು ಪಾಲ್ಗೊಂಡಿದ್ದರು.

# ಮಲಪ್ರಭಾ ಶುಗರ ಚುನಾವಣೆ

## ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ನಾಮಪತ್ರ ಸಲ್ಲಿಕೆ



**ಚನ್ನಮ್ಮನ ಕಿತ್ತೂರು:** ಇಲ್ಲಿಯ ಸಮೀಪದ ಪ್ರತಿಷ್ಠಿತ ಶ್ರೀ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ. ಎಮ್ ಕೆ ಹುಬ್ಬಳ್ಳಿ ಇದರ ಐದು ವರ್ಷಗಳ ಅವಧಿಗೆ ನಡೆಯುವ ಚುನಾವಣೆಗೆ ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಚನ್ನಮ್ಮನ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ, ಖಾನಾಪುರ ಶಾಸಕ ವಿಠ್ಠಲ ಹಲಗೇಕರ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ನೇತೃತ್ವದ ಪುನ್ಹಸಚೇತನ ಪೆನಲ್ ನಿಂದ ಎಮ್ ಎಲ್ ಸಿ ಚನ್ನರಾಜ್ ಹಟ್ಟಿಹೊಳಿ ಸಹಿತ 15 ಜನ ಚುನಾವನಾಧಿಕಾರಿ ಪ್ರಭಾವತಿ ಫಕೀರಪೂರ ಅವರಿಗೆ ನಾಮಪತ್ರ ಸಲ್ಲಿಸಿದರು.

ಸಾಮಾನ್ಯ ಕ್ಷೇತ್ರದಿಂದ ಚನ್ನರಾಜ ಬಸವರಾಜ ಹಟ್ಟಿಹೊಳಿ, ಶಿವನಗೌಡ ದೊಡ್ಡನಗೌಡ ಪಾಟೀಲ, ರಾಮನಗೌಡ ಸನಗೌಡ ಪಾಟೀಲ, ಶಂಕರ ಪರಪ್ಪ ಕಿಲ್ಲೆದಾರ, ರಘು ಚಂದ್ರಶೇಖರ ಪಾಟೀಲ, ಶಿವಪುತ್ರಪ್ಪ ಬಸವಣ್ಣೆಪ್ಪ ಮರಡಿ,ಸುರೇಶ ಯಲ್ಲಪ್ಪ ಹುಲಿಕಟ್ಟಿ, ಶ್ರೀಶೈಲ ಬಸಪ್ಪ ತುರಮರಿ, ಶ್ರೀಕಾಂತ ನಾಗಪ್ಪ ಇಟಗಿ, ಬ ವರ್ಗದಿಂದ ಶಂಕರ ಸದೆಪ್ಪಾ ಹೂಲಿ, ಅ ವರ್ಗದಿಂದ ಫಕೀರಪ್ಪ ಸಂಕ್ರನ್ನವರ, ಮಹಿಳಾ ಕ್ಷೇತ್ರದಿಂದ ಲಲಿತಾ ಬಾಲಚಂದ್ರ ಪಾಟೀಲ, ಸುನೀತಾ ಮಹಾಂತೇಶ ಲಂಗೋಟಿ, ಎಸ್ ಟಿ ವರ್ಗದಿಂದ ಬರಮಪ್ಪ ಕಲ್ಲಪ್ಪ ಶೀಗಿಹಳ್ಳಿ, ಎಸ್ ಸಿ ವರ್ಗದಿಂದ ಬಾಳಪ್ಪ ದುರಗಪ್ಪ ಪೂಜಾರ ಇವರುಗಳು ಚುನಾವಣೆಗೆ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ, ಪ್ರಮೋದ ಕೊಚೇರಿ, ಶಂಕರ ಹೊಳಿ, ಶಿವನಗೌಡ ಪಾಟೀಲ,ಬಸನಗೌಡ ಪಾಟೀಲ, ಮುದಕಪ್ಪ ಮರಡಿ, ಶಂಕರಗೌಡ ಪಾಟೀಲ, ಪ್ರಕಾಶಗೌಡ ಪಾಟೀಲ, ಮಹಾಂತೇಶ ಮತ್ತಿಕೊಪ್ಪ ಸೇರಿದಂತೆ ಕಿತ್ತೂರು, ಖಾನಾಪುರ, ಬೆಳಗಾವಿ ಗ್ರಾಮೀಣ, ಬೈಲಹೊಂಗಲ ಕ್ಷೇತ್ರದ ರೈತರು, ಮುಖಂಡರು ಪಾಲ್ಗೊಂಡಿದ್ದರು.

### ಯುವ ಜನರಲ್ಲಿ ಪ್ರಾಮಾಣಿಕತೆ ಮತ್ತು ನೈತಿಕತೆ ಅರಿವು ಮೂಡಿಸಲು ತಹಶೀಲ್ದಾರ ಶ್ರೀಶೈಲ್ ಗುಡಮೆ ಕರೆ

# ಭ್ರಷ್ಟಾಚಾರ ಮುಕ್ತ ಭಾರತ ನಿರ್ಮಾಣವಾಗಲಿ

**ಮೂಡಲಗಿ:** ಸಮಾಜದಲ್ಲಿ ಭ್ರಷ್ಟಾಚಾರವು ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯನ್ನು ಹಾಳುಮಾಡುತ್ತಿರುವ ಗಂಭೀರ ಪಿಡುಗಾಗಿದೆ. ಭ್ರಷ್ಟಾಚಾರದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅನಿವಾರ್ಯವಾಗಿದೆ ಎಂದು ಮೂಡಲಗಿ ತಹಶೀಲ್ದಾರ ಶ್ರೀಶೈಲ್ ಗುಡಮೆ ಅಭಿಪ್ರಾಯಪಟ್ಟರು.

ಅವರು ಕಲ್ಲೋಳಿಯ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಐಕ್ಯೂಎಸಿ ಘಟಕಗಳ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ "ಭ್ರಷ್ಟಾಚಾರ ವಿರೋಧಿ ಅರಿವು ಸಪ್ತಾಹ ಹಾಗೂ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2025ರ ಪೂರ್ವಭಾವಿ ಜಾಗೃತಿ ಅಭಿಯಾನ" ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಸರ್ಕಾರಗಳ ನೀತಿ ಧೋರಣೆಯನ್ನು ರೂಪಿಸುವಲ್ಲಿ ಸಮೀಕ್ಷೆಗಳ ಪಾತ್ರ ಮಹತ್ವದ್ದಾಗಿದೆ. ಎಲ್ಲ ನಾಗರಿಕರು ಸಂಪೂರ್ಣವಾದ ಮಾಹಿತಿಯನ್ನು ಒದಗಿಸುವ ಮೂಲಕ ಸಮೀಕ್ಷೆಯ ಕಾರ್ಯ ಯಶಸ್ವಿಯಾಗಿಸಲು ಸಹಕರಿಸಬೇಕು ಎಂದರು.



ಕಲ್ಲೋಳಿ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಚಿದಾನಂದ ಮುಗಳಖೋಡ ಮಾತನಾಡಿ,ಭವಿಷ್ಯದ ಪ್ರಜೆಗಳಾದ ವಿದ್ಯಾರ್ಥಿಗಳು ಪ್ರಾಮಾಣಿಕತೆ ಮತ್ತು ನೈತಿಕ ಮೌಲ್ಯಗಳನ್ನು ಅಳವಡಿಸಿಕೊಂಡು ಸಮಾಜಕ್ಕೆ ಮಾದರಿಯಾಗಬೇಕು. ಎಲ್ಲಿಯವರೆಗೆ ಲಂಚವನ್ನು ನೀಡುತ್ತೇವೆಯೋ ಅಲ್ಲಿಯವರೆಗೂ ಭ್ರಷ್ಟಾಚಾರ ನಿಲ್ಲುವುದಿಲ್ಲ. ಈಗ ನಡೆಯುತ್ತಿರುವ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯ ಕುರಿತು ಎನ್.ಎಸ್.ಎಸ್. ಸ್ವಯಂಸೇವಕರು ಸೇವಾ ಮನೋಭಾವದಿಂದ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ವಿನಂತಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಸುರೇಶ ಹನಗಂಡಿ ಮಾತನಾಡಿ, "ಸಮಾಜದಲ್ಲಿ ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ವಿದ್ಯಾರ್ಥಿಗಳು ಮತ್ತು ಯುವಜನರು ಪ್ರಮುಖ ಪಾತ್ರ ವಹಿಸಬೇಕು. ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಎಂ.ಬಿ. ಕುಲಮೂರ, ಡಾ.ಕೆ.ಎಸ್. ಪರವ್ವಗೋಳ, ಬಿ.ಕೆ. ಸೊಂಟನವರ, ಆರ್. ಎಸ್. ಪಂಡಿತ, ವಿ. ವಾಯ್. ಕಾಳೆ, ವಿಲಾಸ ಕೆಳಗಡೆ, ಬಿ.ಬಿ. ವಾಲಿ, ಡಾ. ಆರ್.ಎಂ. ತೋಟಗಿ, ಬಿ.ಸಿ. ಮಾಳಿ, ಸಂತೋಷ ಬಂಡಿ, ಎಂ.ಆರ್. ಕರಗಣ್ಣಿ, ಸಾಗರ ಐದಮನಿ, ಮಲ್ಲಪ್ಪ ಮುರಗೋಡ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕು. ರಾಧಿಕಾ ಕರೆವ್ವಗೋಳ ಪ್ರಾರ್ಥಿಸಿದರು. ಪ್ರೊ. ಡಿ.ಎಸ್. ಹುಗ್ಗಿ ಸ್ವಾಗತಿಸಿದರು. ಡಾ.ಕೆ. ಎಸ್. ಪರವ್ವಗೋಳ ನಿರೂಪಿಸಿದರು. ಎನ್ನೆಸ್ಸೆಸ್ ಕಾರ್ಯಕ್ರಮ ಅಧಿಕಾರಿ ಪ್ರೊ. ಶಂಕರ ನಿಂಗನೂರ ವಂದಿಸಿದರು.

# ಹುಬ್ಬಳ್ಳಿಯಲ್ಲಿ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ

**ಧಾರವಾಡ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿಯವರ ಮಠ ಟ್ರಸ್ಟ್ ಕಮಿಟಿ ಸಂಯುಕ್ತ ಆಶ್ರಯದಲ್ಲಿ ಸಾಂಸ್ಕೃತಿಕ ಸೌರಭ ಕಾರ್ಯಕ್ರಮವನ್ನು ವಿವಿಧ ಕಲಾ ತಂಡಗಳ ಸಹಯೋಗದಲ್ಲಿ ಸೆಪ್ಟಂಬರ್ 23 ರಂದು ಸಂಜೆ 06 ಗಂಟೆಗೆ ಹುಬ್ಬಳ್ಳಿ ಶ್ರೀ ಸಿದ್ಧಾರೂಢ ಸ್ವಾಮಿಯವರ ಮಠದ ಆವರಣದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು. ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ, ಎಫ್.ಹೆಚ್. ಜಕಪ್ಪನವರ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ಜ್ಯೋತಿ ಪಾಟೀಲ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಹುಬ್ಬಳ್ಳಿ–ಧಾರವಾಡ ಮಹಾನಗರ ಉಪ ಮಹಾಪೌರರಾದ ಸಂತೋಷ ಚವ್ಹಾಣ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸದಸ್ಯ ಮಂಗಳಾ ಗೌರಿ, ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿಯವರ ಮಠ ಟ್ರಸ್ಟ್ ಕಮಿಟಿ ಚೇರಮನ್ನರು ಸಿಎ ಚನ್ನವೀರ ದು. ಮುಂಗರವಾಡಿ ಅವರು ಭಾಗವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಾಟೀಲ ಭುವನೇಶ ದೇವಿದಾಸ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ.ಎಸ್.ಗಾಳಿ ಉಪಸ್ಥಿತರಿರುವರೆಂದು ಪ್ರಕಟಣೆ ತಿಳಿಸಿದೆ.

## ಇಂದು ಸಿದ್ಧಲಿಂಗ ಸ್ವಾಮೀಜಿ ಪುಣ್ಯಸ್ಮರಣೆ



**ಮೂಡಲಗಿ:** ತಾಲ್ಲೂಕಿನ ಅರಭಾವಿಮಠದ ಜಗದ್ಗುರು ದುರುದುಂಡೀಶ್ವರ ಸಿದ್ಧಸಂಸ್ಥಾನ ಮಠದ ಲಿಂಗೈಕ್ಯ ಸಿದ್ಧಲಿಂಗ ಸ್ವಾಮೀಗಳ 2ನೇ ಪುಣ್ಯಸ್ಮರಣೋತ್ಸವ ಹಾಗೂ ಶಿವಾನುಭವ ಕಾರ್ಯಕ್ರಮವು ಸೆ.21ರಂದು ಸಂಜೆ 6ಕ್ಕೆ ಏರ್ಪಡಿಸಿರುವರು.ಸಮಾರಂಭದ ಸಾನ್ನಿಧ್ಯವನ್ನುಅರಭಾವಿಯ ದುರದುಂಡೀಶ್ವರ ಮಠದ ಪೀಠಾಧಿಪತಿ ಗುರುಬಸವಲಿಂಗ ಸ್ವಾಮೀಜಿ ವಹಿಸುವರು. ಕಡಕೋಳದ ವೀರಕ್ತಮಠದ ಸಚ್ಚಿದಾನಂದ ಸ್ವಾಮೀಜಿ, ಬೆಲ್ಲದಬಾಗೇವಾಡಿಯ ಶಿವಾನಂದ ಸ್ವಾಮೀಜಿ, ಹುಕ್ಕೇರಿಯ ಶಿವಬಸವ ಸ್ವಾಮೀಜಿ ಸಮ್ಮುಖವಹಿಸುವರು. ಸೆ. 22ರಂದು ಬೆಳಿಗ್ಗೆ 8ಕ್ಕೆ ಸಿದ್ಧಲಿಂಗ ಸ್ವಾಮೀಜಿಯವರಗದ್ದುಗೆಗೆ ಪೂಜೆ, ಅಭಿಷೇಕ ಜರುಗುವುದು. ಬೆಳಿಗ್ಗೆ 11ರಿಂದ ಮಹಾಪ್ರಸಾದ ಇರುವುದು ಎಂದು ಸಮಿತಿಯವರು ತಿಳಿಸಿದ್ದಾರೆ.

## ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಅಥಣಿ ತಾಲೂಕಿನ ಸಪ್ತಸಾಗರ ಗ್ರಾಮದಲ್ಲಿ ಪ್ರಸ್ತುತ ಒಂದೇ ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 19–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಅಥಣಿ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಅಥಣಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ:** ತಾಂತ್ರಿಕ ತರಬೇತಿ ಸಂಸ್ಥೆ ಹಿಂದೂಸ್ಥಾನ ಏರೋನಾಟಿಕ್ಸ್ ಲಿಮಿಟೆಡ್ (HAL)ನಲ್ಲಿ ITI ಪಾಸಾದ ಅಭ್ಯರ್ಥಿಗಳಿಗೆ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಅಹ್ವಾನಿಸಿದೆ. ಆಸಕ್ತ ಅಭ್ಯರ್ಥಿಗಳು ಸೆಪ್ಟಂಬರ, 25, 2025 ರ ಒಳಗಾಗಿ https://apprenticeshipindia.gov.in ಮೂಲಕ ಜಿಲ್ಲಾಉದ್ಯೋಗ ವಿನಿಮಯ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಐ.ಟಿ.ಐ ನಲ್ಲಿ ಪೀಟ್ಟರ್, ಟರ್ನರ್, ಮಶಿನಿಷ್ಟ್, ಇಲೆಕ್ಟ್ರಾನಿಕ್ಸ್, ವೆಲ್ಡರ್, ಕಂಪ್ಯೂಟರ್ ಅಪರೇಟಿವ್ ಮತ್ತು ಪ್ರೋಗ್ರಾಮಿಂಗ್ ಅಸಿಸ್ಟೆಂಟ್, ಕಾರಪೆಂಟರ್, ಪೌಂಡರಿ ಮ್ಯಾನ್, ಶೀಟ್ ಮೆಟಲ್ ವರ್ಕರ್, ಟೂಲ್ ಮತ್ತು ಡೈ ಮೇಕರ್,ಸಿ.ಎನ್.ಸಿ. ಪ್ರೋಗ್ರಾಮರ್ ಕಮ್‌ಆಪ್‌ರೇಟರ್, ಮೆಕಾನಿಕ್ ರೆಫ್ರಿಗೆರೆಶನ್ ಮತ್ತು ಏರ್ ಕಂಡಿಶೀನಿಂಗ್ ಈ ಎಲ್ಲಾ ಕೋರ್ಸನಲ್ಲಿ ಪಾಸಾದ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಮಾರ್ಕ್ಸ್ ಕಾರ್ಡ್, ಐ.ಟಿ.ಐ ಮಾರ್ಕ್ಸ್ ಶೀಟ್ (ಸೆಲ್ಫ್ ಅಟೆಸ್ಟೆಡ್ ಇಂಟರ್ನೆಟ್ ಡೌವನಲೋಡ್ ರಿಸಲ್ಟ್ ಶೀಟ್) ಎನ್.ಟಿ.ಸಿ ಪ್ರತಿ, ಜಾತಿ ಪ್ರಮಾಣ ಪತ್ರ, ಆಧಾರ ಕಾರ್ಡ್ ಮತ್ತು ಪ್ಯಾನ್ ಕಾರ್ಡ್ ಈ ಎಲ್ಲಾ ಮೂಲ ದಾಖಲಾತಿ ಮತ್ತು 2 ಸೆಟ್ ಜೆರಾಕ್ಸ್ ಪ್ರತಿಯನ್ನು ತೆಗೆದುಕೊಂಡು ಜಿಲ್ಲಾಉದ್ಯೋಗ ವಿನಿಮಯ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 0831–2443948 ಗೆ ಅಥವಾ ಸುವರ್ಣ ವಿಧಾನಸೌಧ ಕೆಳಮಹಡಿ ಜಿಲ್ಲಾ ಉದ್ಯೋಗ ವಿನಿಮಯಕೇಂದ್ರದ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ನಿಪ್ಪಾಣಿ ತಾಲ್ಲೂಕಿನ ಬೋರಗಾಂವ ಪಟ್ಟಣದಲ್ಲಿ ಪ್ರಸ್ತುತ ಮೂರು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 19–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ನಿಪ್ಪಾಣಿ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ನಿಪ್ಪಾಣಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಸನ ಮುಕ್ತ ಸಮಾಜ ನಿರ್ಮಿಸುವುದು ನಮ್ಮೆಲ್ಲರ ಕರ್ತವ್ಯ

**ಬೆಳಗಾವಿ:** ಮಾದಕ ವಸ್ತುಗಳು ದೇಶದ ಅಭಿವೃದ್ಧಿಗೆ ಮಾರಕವಾಗಿದ್ದು, ಮಾದಕ ವಸ್ತುಗಳನ್ನು ಮಾರಾಟ ಮಾಡುವವರನ್ನು ಹಾಗೂ ಮಾದಕ ವ್ಯಸನಿಗಳನ್ನು ಗುರುತಿಸಿ ತಡೆಗಟ್ಟುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂದೀಪ ಪಾಟೀಲ ಅವರು ಹೇಳಿದರು.

ಕೌಶಾಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಜೀವನೋಪಾಯ ಅಭಿಯಾನ ಕರ್ನಾಟಕ, ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ(ಸೆ.20) ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆದ ಪರಿವರ್ತನೆ ಮಾದಕ ಮುಕ್ತ ಕರ್ನಾಟಕ ಅಭಿಯಾನ ಹಾಗೂ ಜಿಲ್ಲಾ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಯುವಜನತೆ ವಿವಿಧ ಬಗೆಯ ಮಾದಕ ವಸ್ತುಗಳಿಗೆ ವ್ಯಸನಿಗಳಾಗುತ್ತಿದ್ದಾರೆ. ಯುವಜನತೆ ದುಶ್ಚಟಗಳಿಂದ ತಮ್ಮ ಜೀವನದ ಜೊತೆಗೆ ಕುಟುಂಬದ ನೆಮ್ಮದಿಯನ್ನು ಹಾಳುಮಾಡುತ್ತಿರುವುದು ಖೇದಕರವಾದಂತಹ ಸಂಗತಿಯಾಗಿದೆ.

ಮಾದಕ ವ್ಯಸನದ ಅಮಲಿನಲ್ಲಿ ಅನೇಕ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುತ್ತಿರುವುದರಿಂದ ಸಮಾಜದ ಸ್ವಾಸ್ಥ್ಯವು ಹಾಳಾಗುತ್ತಿದೆ ಎಂದರು.

ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ನಾವು ಮಕ್ಕಳಿಗೆ ಚಿಕ್ಕಂದಿನಿಂದಲೆ ಜಾಗೃತಿ ಮೂಡಿಸಬೇಕು, ಸಮಾಜದಲ್ಲಿ ಯಾವುದೇ ಸ್ಥಳದಲ್ಲಿ ಮಾದಕ ವ್ಯಸನಿಗಳಾಗಳಿ ಅಥವಾ ಮಾದಕ ವಸ್ತುಗಳನ್ನು




ಮಾರಾಟ ಮಾಡುವವರು ಕಂಡು ಬಂದಲ್ಲಿ ದೂರು ನೀಡುವದರ ಮೂಲಕ ಸಮಾಜಘಾತುಕ ಹಾಗೂ ಸಮಾಜದ ಸ್ವಾಸ್ಥ್ಯ ಹಾಳು ಮಾಡುವವರನ್ನು ಕಾನೂನಿನ ಮೂಲಕ ಬುದ್ದಿ ಕಲಿಸಲು ಮುಂದಾಗಬೇಕು.

ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜನರಲ್ಲಿ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸುವದರ ಮೂಲಕ ಆರೋಗ್ಯವೇ ಭಾಗ್ಯ ಎಂಬ ನಾಣ್ಣುಡಿಯಂತೆ ನಮ್ಮ ಆರೋಗ್ಯ ಸಧೃಡವಾಗಿದ್ದರೆ ಮಾತ್ರ ಸದೃಢ ಸಮಾಜ ನಿರ್ಮಾಣ ಸಾಧ್ಯ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಅವರು ತಿಳಿಸಿದರು.

ನಗರ ಪೊಲೀಸ್ ಆಯುಕ್ತ ಬೋರಸೆ ಭೂಷಣ ಗುಬರಾವ್ ಅವರು ಮಾತನಾಡಿ ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿ, ಯುವ ಪೀಳಿಗೆ ಮಾದಕ ವಸ್ತುಗಳ ವ್ಯಸನಿಗಳಾಗುತ್ತಿದ್ದು ಇದನ್ನು ತಡೆಗಟ್ಟುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮಾದಕ ವಸ್ತುಗಳ ಮಾರಾಟ ಜಾಲ ಜಗತ್ತಿನಾದ್ಯಂತ ಇರುವ ದೊಡ್ಡ ಸಮಸ್ಯೆಯಾಗಿದೆ.

ನಮ್ಮ ರಾಜ್ಯ ನಮ್ಮ ದೇಶವನ್ನು ಸದೃಢವಾಗಿಡಲು ನಾವೆಲ್ಲರು ಸೇರಿಕೊಂಡು ಕೆಲಸ ಮಾಡಬೇಕು. ನಮ್ಮ ಸುತ್ತ ಮುತ್ತಲು ಮಾದಕ ವಸ್ತುಗಳ ಕುರಿತು ಚಟುವಟಿಕೆಗಳನ್ನು ಕಂಡುಬಂದಲ್ಲಿ ಪೊಲೀಸ್ ಇಲಾಖೆಯ ಜಾಲತಾಣ ಅಥವಾ ಸಹಾಯವಾಣಿ ಸಂಖ್ಯೆ ಮೂಲಕ ತಿಳಿಸಿದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾತನಾಡಿ ಮಾದಕ ವ್ಯಸನಗಳ ಸೇವನೆ ಮಾಡುವುದು ಇಂದಿನ ಯುವ ಪೀಳಿಗೆಗೆ ಒಂದು ಗರ್ವದ ಸಂಕೇತವಾಗಿದೆ. ಮಾದಕ ವಸ್ತುಗಳ ಸೇವನೆಯಿಂದಾಗಿ ಅನೇಕ ಕುಟುಂಬಗಳು ಬೀದಿ ಪಾಲಾಗಿರುವ ಉದಾಹರಣೆಗಳನ್ನು ನಾವು ಕಾಣಬಹುದಾಗಿದೆ.

ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡದೆ ಹೋದರೆ ಯುವ ಪೀಳಿಗೆ ನಾಶವಾಗಿ ಹೋಗುತ್ತದೆ. ರಾಸಾಯನಿಕವಾಗಿ ತಯಾರಿಸುತ್ತಿರುವ ಮಾದಕ ವಸ್ತುಗಳಿಗೆ ಯುವ ಪೀಳಿಗೆ ಹಾಳಾಗುತ್ತಿದ್ದು ಅಂತವರನ್ನು ಗುರುತಿಸಿ ಯುವಜನರನ್ನು ಉಳಿಸುವುದರ ಮೂಲಕ ಸದೃಢ ಸಮಾಜ ನಿರ್ಮಾಣ ಮಾಡುವುದು ದೇಶದ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಅವರು ಹೇಳಿದರು.

ಅಬಕಾರಿ ಉಪ ಆಯುಕ್ತೆ ಎಮ್. ವನಜಾಕ್ಷೀ ಅವರು ಮಾತನಾಡಿ ವೈಯಕ್ತಿಕ ಜೀವನ ಹಾಗೂ ಕೌಟುಂಬಿಕ ಜೀವನದ ಮೇಲೆ ವ್ಯಸನಗಳು ತುಂಬಾ ಪ್ರಭಾವ ಬೀರುತ್ತವೆ. ದೈಹಿಕವಾಗಿ, ಮಾನಸಿಕವಾಗಿ ವ್ಯಸನಗಳು ಮನುಷ್ಯರನ್ನು ಕುಗ್ಗಿಸುತ್ತವೆ. ಮಾದಕ ವಸ್ತು ಎಂದರೆ ಮತ್ತಿನಲ್ಲಿ, ಅಮಲಿನಲ್ಲಿ ಇರುವಂತಹ ವಸ್ತು. ನಮ್ಮ ದೇಹಕ್ಕೆ ಕ್ರಿಯಾಶೀಲತೆ ಇಲ್ಲದಿರುವ ಹಾಗೆ ಮಾಡುತ್ತದೆ, ಮಾನಸಿಕ ಸ್ಥಿತಿ ಸಮತೋಲನ ತಪ್ಪಿಸುತ್ತದೆ, ತಮ್ಮ ಮೇಲಿನ ಹಿಡಿತವನ್ನು ತಪ್ಪಸಿ ಅಪರಾಧ ಕೃತ್ಯಗಳನ್ನು ಮಾದಕ ವಸ್ತುಗಳು ಮಾಡಿಸುತ್ತವೆ.

ಪ್ರಪಂಚದಾದ್ಯಂತ 190 ದಶಲಕ್ಷಕ್ಕೂ ಹೆಚ್ಚು ಮಾದಕ ವ್ಯಸನಿಗಳಿದ್ದಾರೆ, ಇದರಲ್ಲಿ ಅತಿ ಹೆಚ್ಚು ಯುವ ಜನಾಂಗ ಇದೆ ಎಂಬುದು ಆತಂಕಕಾರಿಯಾದ ವಿಷಯವಾಗಿದೆ. ಎಲ್ಲರು ಸೇರಿಕೊಂಡು ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣ ಮಾಡಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ರವಿ ಬಂಗಾರಪ್ಪನವರ, ಬೆಳಗಾವಿ ಉತ್ತರ ವಲಯದ ಅಬಕಾರಿ ಇಲಾಖೆ ಉಪ ಆಯುಕ್ತೆ ಸ್ವಪ್ನಾ ಆರ್.ಎಸ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ಸಂಧರ್ಬದಲ್ಲಿ ಮಾದಕ ಮುಕ್ತ ಅಭಿಯಾನ ಹಾಗೂ ಸ್ವಚ್ಛತಾ ಹೀ ಸೇವಾ ಭಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಿ ಪ್ರಚಾರ ವಾಹನಗಳಿಗೆ ಚಾಲನೆ ನೀಡಲಾಯಿತು.

# ಗಲಾಟೆ ತಡೆಯಲು ಹೋದ ಪೋಲಿಸರ ಮೇಲೆ ಹಲ್ಲೆ




**ಜಮಖಂಡಿ :** ತಾಲೂಕಿನ ಕಲ್ಲಹಳ್ಳಿ ಗ್ರಾಮದಲ್ಲಿ ಅನ್ಯಾಜಾತಿಯ ಯುವಕ ಯುವತಿಯ ನಡುವಿನ ಸಂಬಧ ಎರಡು ಕುಟುಂಬದ ನಡುವೆ ನಡೆದ ಗಲಾಟೆ ತಡೆಯಲು ಹೋದ ಪೋಲಿಸರ ಮೇಲೆ ಹಲ್ಲೆ ನಡೆದಿದ ಹಿನ್ನಲೆ 20 ಜನರನ್ನು ಬಂಧಿಸಿರುವ ಘಟನೆ ನಡೆದಿದೆ.

ಕಲ್ಲಹಳ್ಳಿ ಗ್ರಾಮದಲ್ಲಿ ಯುವಕ, ಯುವತಿಯ ಪ್ರೇಮ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡು ಗುಂಪುಗಳ ಮಧ್ಯೆ ವಾಗ್ವಾದ ಗಲಾಟೆ ರಾತ್ರಿ ಸಮಯದಲ್ಲಿ ನಡೆದಿದ್ದು. ಗಲಾಟೆ ವಿಕೋಪಕ್ಕೆ ತಿರುಗುವ ಹಂತ ತಲುಪುವ ಸಮಯದಲ್ಲಿ ಅಲ್ಲಿನ ಸ್ಥಳೀಯರ ಪೋಲಿಸರಿಗೆ ಮಾಹಿತಿ ನೀಡಿದ ಹಿನ್ನಲೆಯಲ್ಲಿ. ಗ್ರಾಮೀಣ ಠಾಣೆ ಪೋಲಿಸರು ಮಾಹಿತಿ ಪಡೆದ ಪಿಎಸ್‌ಐ ಗಂಗಾಧರ ಪೂಜಾರಿ ಹಾಗೂ ಸಿಬ್ಬಂದಿಯೊಂದಿಗೆ ಘಟನಾ ಸ್ಥಳಕ್ಕೆ ತೆರಳಿದ್ದಾರೆ. ಗ್ರಾಮಸ್ಥರನ್ನು ಸಮಾಧಾನ ಪಡಿಸುತ್ತಿದ್ದಾಗ ವ್ಯಕ್ತಿಯೊಬ್ಬ ಹಾಲಿನ ಕ್ಯಾನ್‌ನಿಂದ ಪಿಎಸ್‌ಐ ಮೇಲೆ ಹಲ್ಲೆ ನಡೆಸಿದ್ದು. ಹಲ್ಲೆಯಿಂದ ಪಿಎಸ್‌ಐ ತಲೆಗೆ ಗಾಯವಾಗಿದೆ. ಇನ್ನುಳಿದ ಸಿಬ್ಬಂದಿ ಜನರನ್ನು ಚದುರಿಸಲು ಮುಂದಾದಾಗ ಎರಡು ಗುಂಪುಗಳ ನಡುವೆ ಕಲ್ಲು ತೂರಾಟ ನಡೆದಿದ್ದು. ಗ್ರಾಮಸ್ಥರ ನಡುವೆ ಹಾಗೂ ಪೋಲಿಸರ ನಡುವ ಮಾತಿನ ಚಕಮಕಿ ಮಧ್ಯ ನೂಕು, ನುಗ್ಗಲು ಮಧ್ಯ ಗಲಾಟೆ ನಡೆದಿದೆ ಎಂದು ಮಾಹಿತಿ ತಿಳಿದು ಬಂದಿರುತ್ತದೆ.

ಕಲ್ಲಹಳ್ಳಿ ಗ್ರಾಮದಲ್ಲಿ ಯುವಕ, ಯುವತಿಯ ಪ್ರೇಮ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಥಳದಲ್ಲಿ ಬೀಗ ಪೋಲಿಸ್ ಬಂದುಬಸ್ತ್ ನಿಯೋಜಿಸಲಾಗಿದ್ದು. ರಾತ್ರಿ ಘಟನಾ ಸ್ಥಳಕ್ಕೆ ಜಿಲ್ಲಾ ಎಸ್‌ಪಿ, ಸಿದ್ಧಾರ್ಥ ಗೋಯಲ್, ಡಿಎಸ್‌ಪಿ, ಎಸ್, ರೋಷನ್ ಜಮೀರ್, ಸಿಪಿಐ ಮಲ್ಲಪ್ಪ ಮಡ್ಡಿ ಭೇಟಿ ನೀಡಿ. ತನಿಖೆಯನ್ನು ಮುಇಂದುವರಿಸಿದ್ದಾರೆ. ಸ್ಥಳದಲ್ಲಿ ಸಾವಳಗಿ ಪಿಎಸ್‌ಐ, ಅಪ್ಪಣ್ಣ ಐಗಳಿ ಹಾಗೂ ಡಿಆರ್ ಪೋಲಿಸ್ ವ್ಯಾನ್ ಬಂದುಬಸ್ತ್ ವ್ಯವಸ್ಥೆಯನ್ನು ನಿಯೋಜಿಸಿದ್ದಾರೆ.

# ನವರಾತ್ರಿ ಉತ್ಸವ: ಪೂರ್ವಭಾವಿ ಸಭೆ

**ಮುದ್ದೆಬಿಹಾಳ;** ಪಟ್ಟಣದ ಬಸವನಗರದಲ್ಲಿರುವ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಜರುಗಲಿರುವ ನವರಾತ್ರೋತ್ಸವದ ಅಂಗವಾಗಿ ಪೂರ್ವಭಾವಿ ಸಭೆ ಜರುಗಿತು.

ಇತ್ತೀಚೆಗೆ ಶ್ರೀ ಅಂಬಾಭವಾನಿ ಮಂದಿರದಲ್ಲಿ ಜರುಗಿದ ಈ ಪೂರ್ವಭಾವಿ ಸಭೆಯಲ್ಲಿ ಮರಾಠಾ ಸಮಾಜದ ಸಹ ಕಾರ್ಯದರ್ಶಿ ರಾಜು ಜಾಧವ ಅವರು ಮಾತನಾಡಿ ದಿ. 22 ರಂದು ಪ್ರಾರಂಭಗೊಳ್ಳಲಿರುವ ನವರಾತ್ರೋತ್ಸವ ಅಂದು ಮುಂಜಾನೆ ಶ್ರೀ ದೇವಿಗೆ ಮಹಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಎಲೆಅಲಂಕಾರ, ಕುಂಕುಮಾರ್ಚನೆ ಜರುಗುವದಲ್ಲದೇ ಸಾಯಂಕಾಲ ಶ್ರೀ ದೇವಿಯ ಮುಂದೆ ಘಟಸ್ಥಾಪನೆ ಮಾಡಲಾಗುವದು ಎಂದು ಹೇಳಿದರು. 9 ದಿನಗಳ ಕಾಲ ಜರುಗಲಿರುವ ಈ ಮಹಾಪೂಜೆಯಲ್ಲಿ ಮರಾಠಾ ಸಮಾಜದ ಸದಸ್ಯರಿಂದ ದಿನಾಲು ಮಹಾಪೂಜೆ ಹಾಗೂ ಪ್ರಸಾದದ ಸೇವೆ ಜರುಗಲಿದ್ದು ಸಾಯಂಕಾಲ ಮಹಿಳೆಯರಿಂದ ಸಂಗೀತಸೇವೆ ಜರುಗಲಿದೆ.

ದಿ. 29 ಸೋಮವಾರ 7 ನೇ ದಿನದಂದು ತರಗಕಟ್ಟುವ ಕಾರ್ಯಕ್ರಮ ಸಾಯಂಕಾಲ ಜರುಗಲಿದ್ದು ಸಮಾಜದ ಎಲ್ಲ ಮಹಿಳೆಯರು ಉಪಸ್ತಿತರಿರುವರು. ದಿ. 30 ದುರ್ಗಾಷ್ಟಮಿ ದಿನದಂದು ಮರಾಠಾ ಸಮಾಜದವರಿಂದ ಬೆಳಿಗ್ಗೆ 10.30 ಘಂಟೆಗೆ ಊರಿನ ಎಲ್ಲ ಸುಮಂಗಲೆಯರಿಗೆ ಉಡಿತುಂಬುವ ಕಾರ್ಯಕ್ರಮ ಜರುಗಲಿದೆ. ಅಕ್ಟೋಬರ್ 1 ಮಹಾನವಮಿ ದಿನದಂದು ಘಟ್ಟ ಎತ್ತುವ ಕಾರ್ಯಕ್ರಮ ಜರುಗಲಿದ್ದು ದಿ. 2 ವಿಜಯದಶಮಿ ದಿನದಂದು ಬನ್ನಿಮುಡಿಯುವ ಕಾರ್ಯಕ್ರಮ ಜರುಗಲಿದೆ. ದಿ. 22 ರಿಂದ ಅಕ್ಟೋಬರ್ 2 ರವರೆಗೆ ಜರುಗಲಿರುವ ಈ ಕಾರ್ಯಕ್ರಮಗಳು ಸಂಪ್ರದಾಯಬದ್ದವಾಗಿ ಆಚರಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು. ಈ ಸಭೆಯಲ್ಲಿ ಮರಾಠಾ ಸಮಾಜದ ಅಧ್ಯಕ್ಷರಾದ ಭರತ ಭೋಸಲೆ, ಉಪಾಧ್ಯಕ್ಷರಾದ ನೇತಾಜಿ ನಲವಡೆ, ರವಿ ಭೋಸಲೆ ಅಣ್ಣಾಜಿ ಪವಾರ, ಅಂಬಾಜಿ ಘಾಟಗೆ, ಅನೀಲ್ ಜಾಧವ, ಕೃಷ್ಣಾಜಿ ಪವಾರ, ರಾಘವೇಂದ್ರ ಘಾಟಗೆ, ಶಿವಾಜಿ ಬಿಜಾಪೂರ, ರಾಘವೇಂದ್ರ ನಲವಡೆ, ಅನೀಲ ಪವಾರ, ಕಿರಣ ಪವಾರ, ಶಂಕರ ಘೋರಾತ, ಕಿರಣ ದುದಾನಿ, ತಾನಾಜಿ ಘೋರ್ಪಡೆ, ರಾಘವೇಂದ್ರ ಘಾಟಗೆ, ರವಿ ನಲವಡೆ, ಶಂಕರ ಪವಾರ, ಮಾರುತಿ ಪವಾರ(ಮುರಾಳ), ರವಿ ಜಾಧವ, ಲೋಹಿತ್ ಘಾಟಗೆ, ವಿಶ್ವನಾಥ ಶಿಂಧೆ, ತಾನಾಜಿ ಜಗತಾಪ, ಸಂತೋಷ ಚವ್ಹಾಣ, ಅರ್ಚಕರಾದ ಶಾಂತಯ್ಯ ಹಿರೇಮಠ ಮೊದಲಾದವರು ಉಪಸ್ತಿತರಿದ್ದರು.



## ಹೆಚ್ಚುವರಿ ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಬೆಳಗಾವಿ ನಗರದ ವೀರಭದ್ರೇಶ್ವರ ನಗರದಲ್ಲಿ ಪ್ರಸ್ತುತ ಎರಡು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 09–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಬೆಳಗಾವಿ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಬೆಳಗಾವಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೈಲಹೊಂಗಲ ಉಪವಿಭಾಗದ ಹಣಕಾಸು ಸಂಸ್ಥೆಗಳ ಗಮನಕ್ಕೆ

**ಬೆಳಗಾವಿ:** ಬೈಲಹೊಂಗಲ ಉಪವಿಭಾಗದಲ್ಲಿ ಲೇವಾದೇವಿ/ಗಿರವಿ/ಹಣಕಾಸು ಸಂಸ್ಥೆಗಳು ತಮ್ಮ ಪರವಾನಿಗೆ ಅವಧಿ ಮುಕ್ತಾಯವಾದ ನಂತರ ಮುಂದಿನ ಅವಧಿಗೆ ವ್ಯವಹಾರ ನಡೆಸಲು ಪರವಾನಿಗೆ ನವೀಕರಣ(ಮುಂದಿನ ಅವಧಿಗೆ ಪರವಾನಿಗೆ ಪಡೆದುಕೊಳ್ಳುವುದು) ಮಾಡಿಕೊಂಡಿರದ ಹಿನ್ನಲೆಯಲ್ಲಿ ಪರವಾನಿಗೆ ನವೀಕರಿಸಿಕೊಳ್ಳದೆ ಲೇವಾದೇವಿ/ಗಿರವಿ/ಹಣಕಾಸು ಸಂಸ್ಥೆಗಳನ್ನು ರದ್ದು ಪಡಿಸುವ ಕುರಿತು ಪಟ್ಟಿ ಮಾಡಲಾಗಿರುತ್ತದೆ.

ಸದರಿ ಸಂಸ್ಥೆಗಳು ಪ್ರತಿ ವರ್ಷ ತಮ್ಮ ವ್ಯವಹಾರದ ಬಗ್ಗೆ ಲೆಕ್ಕಪತ್ರಗಳನ್ನು ತಯಾರಿಸಿ ಇಲಾಖೆಗೆ ಪರಿಶಿಲನೆಗೆ ಹಾಜರಪಡಿಸಿರುವುದಿಲ್ಲಾ ಅಲ್ಲದೆ ಸದರಿ ಸಂಸ್ಥೆಗಳು ತಮ್ಮ ನೊಂದಾಯಿತ ಸ್ಥಳಗಳಲ್ಲಿ ಕಾರ್ಯನಿರ್ವಹಿಸದೆ ಇರುವುದು ಇಲಾಖೆ ಸ್ಥಾನಿಕ ಪರಿಶೀಲನೆಯಿಂದ ತಿಳಿದು ಬಂದಿರುತ್ತದೆ. ಆದ ಕಾರಣ ಸದರಿ ಸಂಸ್ಥೆಗಳು ಸ್ಥಗಿತಗೊಂಡಿರುವುದಾಗಿ ಭಾವಿಸಿ ಅವುಗಳ ಪರವಾನಿ ರದ್ದತಿಗೆ ಕ್ರಮವಿಡಲು ತಿರ್ಮಾನಿಸಲಾಗಿರುತ್ತದೆ, ಕಾರಣ ಸದರಿ ಸಂಸ್ಥೆಗಳನ್ನು ಮುಂದುವರಿಸಿಕೊಂಡು ಹೋಗಲು ಸಂಬಂಧಿಸಿದವರಿಗೆ ಆಸಕ್ತಿ ಇದ್ದರೆ ಪತ್ರಿಕಾ ಪ್ರಕಟಣೆ ಹೊರಡಿಸಿದ 7 ದಿನಗೊಳಗಾಗಿ ಆಕ್ಷೇಪಣೆಗಳನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಹಾಗೂ ಲೇವಾದೇವಿ ಸಹಾಯಕ ನಿಬಂಧಕರು, ಮಿನಿ ವಿಧಾನ ಸೌಧ ಬೈಲಹೊಂಗಲ ಇವರಿಗೆ ಸಲ್ಲಿಸಲು ತಿಳಿಸಲಾಗಿದ್ದ ನಿಗದಿತ ಅವಧಿಯಲ್ಲಿ ಯಾವುದೆ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ ಸದರಿ ಲೇವಾದೇವಿ/ಗಿರವಿ/ಹಣಕಾಸು ಸಂಸ್ಥೆಗಳ ಪರವಾನಿಗೆ ರದ್ದುಪಡಿಸಿ ಅವುಗಳ ಹೆಸರಿನಲ್ಲಿರುವ ಭದ್ರತಾ ಠೇವಣಿ ಮೊತ್ತವನ್ನು ಸರ್ಕಾರಕ್ಕೆ ಜಮಾ ಕ್ರಮವಿಡಲಾಗುವುದು ಮತ್ತು ನಂತರ ಸಲ್ಲಿಕೆಯಾಗದ ಯಾವುದೇ ಆಕ್ಷೇಪಣೆಗಳನ್ನು ಮಾಡಲು ಪರಗಣಿಸಲಾಗುವುದಿಲ್ಲ.

ರದ್ದು ಪಡಿಸುವ ಕುರಿತು ಪಟ್ಟಿ ಮಾಡಲಾದ ಲೇವಾದೇವಿ/ಗಿರವಿ/ಹಣಕಾಸು ಸಂಸ್ಥೆಗಳ ವಿವರ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಹಾಗೂ ಲೇವಾದೇವಿ ಸಹಾಯಕ ನಿಬಂಧಕರ ಕಚೇರಿ, ಬೈಲಹೊಂಗಲ್ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ನಾಳೆ ಗ್ರಾ.ಪಂಚಾಯತ್ ಮಟ್ಟದಲ್ಲಿ ಬಾಲ್ಯವಿವಾಹ ನಿಷೇಧ ಜಾಗೃತಿ ಜಾಥಾ

**ಕೊಪ್ಪಳ:** ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತವಾಗಿಸುವ ಉದ್ದೇಶದಿಂದ ಸೆಪ್ಟೆಂಬರ್ 22 ರಂದು ಗ್ರಾಮ ಪಂಚಾಯತ್ ಮಟ್ಟದಲ್ಲಿ ಬಾಲ್ಯ ವಿವಾಹ ನಿಷೇಧ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಾಥಾದಲ್ಲಿ ಸ್ಥಳೀಯ ಜನ ಪ್ರತಿನಿಧಿಗಳು, ಕಾನೂನು ಸೇವೆಗಳ ಪ್ರಾಧಿಕಾರ, ವಿವಿಧ ಭಾಗೀದಾರರ ಇಲಾಖೆಗಳ ಅಧಿಕಾರಿ, ಮುಖ್ಯಸ್ಥರುಗಳು, ಮಹಿಳಾ ಸಂಘಗಳ ಪದಾಧಿಕಾರಿಗಳು, ಎನ್.ಆರ್.ಎಲ್.ಎಮ್, ಎನ್.ಯು.ಎಲ್.ಎಮ್ ಸಂಘಗಳ ಪದಾಧಿಕಾರಿಗಳು ಮತ್ತು ವಿವಿಧ ಸ್ವ–ಸಹಾಯ ಸಂಘಗಳ, ಯುವಕರ ಸಂಘ, ಯುವತಿಯರ ಸಂಘ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಪೂಜಾರಿಗಳು, ಪುರೋಹಿತರು, ಅರ್ಚಕರು, ಮೌಲ್ವಿಗಳು, ಪಾದ್ರಿಗಳು, ಧಾರ್ಮಿಕ ಮುಖಂಡರು, ಧರ್ಮಗುರುಗಳು, ವಿವಾಹಗಳನ್ನು ಆಯೋಜಿಸುವ ಸಂಘಟಕರು, ಫಂಕ್ಷನ್ ಹಾಲ್ ಮತ್ತು ಶಾದಿ ಮಹಲ್‌ಗಳ ಮುಖ್ಯಸ್ಥರು, ಮುದ್ರಕರು, ಡೆಕೋರೇಷನ್‌ಗಳ ಮಾಲೀಕರು, ಮುಖ್ಯಸ್ಥರು, ವಿಡಿಯೋ, ಛಾಯಾಚಿತ್ರಗಾರರು, ಅಡುಗೆಯವರು, ವಾದ್ಯವೃಂದದವರನ್ನು ಒಳಗೊಂಡಂತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತವಾಗಿಸುವಲ್ಲಿ ಎಲ್ಲರೂ ಜಿಲ್ಲಾಡಳಿತದೊಂದಿಗೆ ಕೈಜೋಡಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

# ಧಾರವಾಡ: ನಾಳೆ ವಿದ್ಯುತ್ ವ್ಯತ್ಯಯ

**ಧಾರವಾಡ:** 110 ಕೆವ್ಹಿ ಯು.ಎ.ಎಸ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆಪ್ಟೆಂಬರ 22, 2025 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು2ನೇ ತ್ರೈಮಾಸಿಕ ತುರ್ತುಪಾಲನಾ ಕಾಮಗಾರಿಯನ್ನು ಕೈಗೊಳ್ಳುವುದರಿಂದ ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ 11ಕೆವ್ಹಿ ಮಾರ್ಗಗಳಲ್ಲಿ ದಿನಾಂಕ: ಸೆಪ್ಟೆಂಬರ 22, 2025 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಎತ್ತಿನಗುಡ್ಡ, ಅಗ್ರಿ ಯುನಿವರಸಿಟಿ ಕ್ಯಾಂಪಸ್, ಕುಮಾರೇಶ್ವರ ನಗರ, ಸೈದಾಪೂರ, ಬೆಳಗಾವಿ ಮೇನ್ ರೋಡ್, ನಾರಾಯಣಪುರ, ಸಿ.ಐ.ಟಿ.ಬಿ, ಕೆ.ಹೆಚ್.ಬಿ ಕಾಲೋನಿ, ಸಂಪಿಗೆ ನಗರ, ತಾವರಗೇರಿ ಹಾಸ್ಪಿಟಲ್, ಸನ್ಮತಿ ನಗರ, ಜಿ.ಟಿ.ಸಿ ಕ್ಯಾಂಪಸ್, ಮೆಹಬೂಬ ನಗರ, ಹಶ್ಮಿ ನಗರ, ಮಾಳಾಪುರ, ಏರಟೆಕ್, ಜಯಲಕ್ಷ್ಮೀ ಇಂಡಸ್ಟ್ರಿಸ್, ಬಸವ ಕಾಲೋನಿ, ಪವರ್ ಗ್ರಿಡ್, ಪೆಪ್ಸಿ, ಕಿಲ್ಲಾ, ಸಾಧುನವರ ಎಸ್ಟೆಟ್, ನರೇಂದ್ರ, ಮಮ್ಮಿಗಟ್ಟಿ, ಚಿಕ್ಕಮಲ್ಲಿಗವಾಡ, ಹಿರೇಮಲ್ಲಿಗವಾಡ, ಶಿರಡಿನಗರ, ತಾಜನಗರ, ಬಿ.ಎಸ್.ಕೆ ಲೇಔಟ, ಮಾಳಾಪುರ ಲಾಸ್ಟ್ ಬಸ್ಟಾಪ್, ರಾಜನಗರ, ತಮದಂಡಿ ಪ್ಲಾಟ್, ಹರಿಜನಕೇರಿ, ಎಪಿಎಮ್‌ಸಿ, ಫೈರ ಸ್ಟೇಶನ್, ರಾಮನಗೌಡಾ ಹಾಸ್ಪಿಟಲ್, ದುರ್ಗಾದೇವಿ ದೇವಸ್ಥಾನ, ಮರಾಠ ಕಾಲೋನಿ, ಕೊಪ್ಪದಕೇರಿ, ಗುಲಗಂಜಿಕೊಪ್ಪ, ಎಂ.ಬಿ ನಗರ, ಸಿವಿಲ್ ಹಾಸ್ಪಿಟಲ್, ನಿತಿನ್ ನಗರ, ಒಲ್ಡ್ ಎಸ್.ಪಿ ಸರ್ಕಲ್, ಲಕ್ಷ್ಮೀ ಗುಡಿಯ ಸುತ್ತಮುತ್ತಲಿನ ಪ್ರದೇಶ, ಪೋಲಿಸ್ ಹೆಡ್ ಕ್ವಾಟರ್ಸ ಪ್ರದೇಶ, ಬೇಂದ್ರೆ ನಗರ, ಹಿರೇಮಠ ಲೇಔಟ್, ಐಶ್ವರ್ಯ ನ್ಯಾನೋಸಿಟಿ, ನಂದಿ ಹೈವೇ ಬೈಪಾಸ್, ಮಲ್ಲಿಗೆ ನಗರ, ಗುರುನಗರ, ಶ್ರೀಗುರು ನಗರ, ಕೆ.ಹೆಚ್.ಬಿ ಲೇಔಟ್, ಮಲ್ಲಿಗವಾಡ, ಮೂಕಾಂಬಿಕ ನಗರ, ಗೌಶಿಯ ಟೌನ್, ಸುಂದರ್ ನಗರ, ಸೈನಿಕ್ ನಗರ, ಜೋಶಿ ಫಾರ್ಮ, ಮುಧೋಳ್ಕರ್ ಕಂಪೌಂಡ್, ಮತ್ತು ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಕಾಗವಾಡ ತಾಲೂಕಿನ ಕಾಗವಾಡ ಪಟ್ಟಣದಲ್ಲಿ ಪ್ರಸ್ತುತ ಎರಡು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 17–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಕಾಗವಾಡ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಕಾಗವಾಡ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಬ್ರಹ್ಮಶ್ರೀ ಗುರುಗಳ ಜಯಂತಿ

**ಬೆಳಗಾವಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ರವಿವಾರ (ಸೆ.21) ಬೆಳಿಗ್ಗೆ. 11 ಗಂಟೆಗೆ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಉತ್ಸವ ಕಾರ್ಯಕ್ರಮ ಜರುಗಲಿದೆ.ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆ ವಹಿಸಲಿದ್ದು, ಸಾಹಿತಿಗಳಾದ ರವಿ ಕೋಟಾಗಸ್ತಿ ಅವರು ವಿಶೇಷ ಉಪನ್ಯಾಸ ಮಾಡಲಿದ್ದಾರೆ.ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ. ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**ನಾಳೆ ನಾಡಿನ ವಿವಿಧ ಮಠಾಧೀಶರು, ಜನಪ್ರತಿನಿಧಿಗಳು, ಗಣ್ಯರು, ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ನವರಾತ್ರಿ ಉತ್ಸವಕ್ಕೆ ಚಾಲನೆ**

# ಸವದತ್ತಿ ಯಲ್ಲಮ್ಮನ ಸನ್ನಿಧಿಯಲ್ಲಿ ನವರಾತ್ರಿ ಸಡಗರ

ವರದಿ–ಮಲ್ಲನಗೌಡ ಪಾಟೀಲ

**ಉಗರಗೋಳ:** "ಎಲ್ಲರ ಅಮ್ಮ' ಯಲ್ಲಮ್ಮನ ಸನ್ನಿಧಿಯಲ್ಲಿ ಈಗ ನವರಾತ್ರಿ ಸಡಗರ ಮನೆಮಾಡಿದೆ. ಒಂಭತ್ತು ದಿನಗಳ ನವರಾತ್ರಿ ಉತ್ಸವವನ್ನು ಸಂಭ್ರಮದಿಂದ ನೆರವೇರಿಸಲು ಜಿಲ್ಲಾಡಳಿತದ ಮಾರ್ಗದರ್ಶನದಲ್ಲಿ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಸಜ್ಜಾಗಿದೆ.

ಸೆ.22ರಂದು ಸಂಜೆ ನಾಡಿನ ವಿವಿಧ ಮಠಾಧೀಶರು, ಜನಪ್ರತಿನಿಧಿಗಳು, ಗಣ್ಯರು ಹಾಗೂ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಮೊದಲ ಘಟ್ಟ ಸ್ಥಾಪಿಸುವ ಮೂಲಕ ನವರಾತ್ರಿ ಉತ್ಸವಕ್ಕೆ ವಿಧ್ಯುಕ್ತವಾದ ಚಾಲನೆ ಸಿಗಲಿದೆ. ಬಳಿಕ ಒಂಭತ್ತು ದಿನಗಳವರೆಗೆ ನಿತ್ಯ ಬೆಳಿಗ್ಗೆ ಮತ್ತು ಸಂಜೆ ಆದಿಶಕ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಿಗೆ ವಿಶೇಷ ಪೂಜೆ ನೆರವೇರಲಿದೆ. ಪ್ರತಿದಿನವೂ ಒಂದೊಂದು ಅವತಾರದಲ್ಲಿ ಸಾವಿರಾರು ಸೀರೆಗಳನ್ನು ಬಳಸಿ, ದೇವಿಗೆ ಅಲಂಕಾರ ಮಾಡಲಾಗುತ್ತದೆ.

ನವರಾತ್ರಿ ಉತ್ಸವದಲ್ಲಿ ಲಕ್ಷಲಕ್ಷ ಸಂಖ್ಯೆಯಲ್ಲಿ ಭಕ್ತಸಮೂಹ ಅಮ್ಮನ ಸನ್ನಿಧಿಗೆ ಬರುತ್ತದೆ. ಕರ್ನಾಟಕಕ್ಕಿಂತ ಮಹಾರಾಷ್ಟ್ರ, ಗೋವಾ, ತಮಿಳನಾಡು, ಆಂಧ್ರ ಪ್ರದೇಶ ರಾಜ್ಯಗಳಿಂದ ಅತ್ಯಧಿಕ ಭಕ್ತರು ಗುಡ್ಡಕ್ಕೆ ಬರುತ್ತಾರೆ.

ನವರಾತ್ರಿ ಸಂದರ್ಭ ಗುಡ್ಡಕ್ಕೆ ಬರುವ ಪ್ರತಿ ಭಕ್ತರು ದೀಪಕ್ಕೆ ಎಣ್ಣೆ ಹಾಕುವುದು ವಾಡಿಕೆ. ಹಾಗಾಗಿ ಯಲ್ಲಮ್ಮ ದೇವಿಯ ಗರ್ಭಗುಡಿ ಎದುರು ಬೃಹತ್ ದೀಪ ಅಳವಡಿಕೆ ಮಾಡಲಾಗಿದೆ. ಭಕ್ತರು ಅದರಲ್ಲೇ ಎಣ್ಣೆ ಹಾಕಿ ಭಕ್ತಿ ಸಮರ್ಪಿಸಲಿದ್ದಾರೆ. ಭಕ್ತರ ಸಂಖ್ಯೆ ಹೆಚ್ಚಿರುವ ಕಾರಣ, ಏಕಕಾಲಕ್ಕೆ ಎಲ್ಲರಿಗೂ ದೇವಸ್ಥಾನಕ್ಕೆ ಹೋಗಲು ಕಷ್ಟಸಾಧ್ಯ. ಹಾಗಾಗಿ ಯಲ್ಲಮ್ಮ ದೇವಸ್ಥಾನದ ಆವರಣದಲ್ಲಿಯೂ ದೀಪಗಳ ಅಳವಡಿಕೆ ಮಾಡಲಾಗಿದೆ.



> ನವರಾತ್ರಿ ಉತ್ಸವವನ್ನು ಯಶಸ್ವಿಯಾಗಿ ನಡೆಸಲು ಎಲ್ಲ ತಯಾರಿ ಮಾಡಿಕೊಂಡಿದ್ದೇವೆ. ಭಕ್ತರಿಗೆ ಯಾವ ಸೌಕರ್ಯ ಕೊರತೆಯಾಗದಂತೆ ನೋಡಿಕೊಳ್ಳುತ್ತೇವೆ. ಎಲ್ಲರೂ ಜಾತ್ರೆ ಸುಗಮವಾಗಿ ನಡೆಯಲು ಸಹಕಾರ ಕೊಡಬೇಕು.
>
> **ವಿಶ್ವಾಸ ವೈದ್ಯ,**
> **ಶಾಸಕ, ಸವದತ್ತಿ ಯಲ್ಲಮ್ಮ**

2023ರಲ್ಲಿ ನವರಾತ್ರಿಯಲ್ಲಿ 14,194 ಕೆ.ಜಿ ಎಣ್ಣೆ ಸಂಗ್ರಹವಾಗಿತ್ತು. ಪ್ರತಿ ಕೆ.ಜಿಗೆ 51 ರೂಪಾಯಿ ದರದಲ್ಲಿ ಮಾರಿದಾಗ 7,23,894 ರೂಪಾಯಿ ಆದಾಯ ಬಂದಿತ್ತು. 2024ರಲ್ಲಿ 16,200 ಕೆ.ಜಿ ಎಣ್ಣೆ ಸಂಗ್ರಹವಾಗಿ, ಪ್ರತಿ ಕೆ.ಜಿಗೆ 58 ರೂಪಾಯಿ ದರದಲ್ಲಿ ಮಾರಿ 9,39,600 ರೂಪಾಯಿ ಆದಾಯ ಬಂದಿತ್ತು. ಕಳೆದ ವರ್ಷ 21 ಲಕ್ಷಕ್ಕೂ ಅಧಿಕ ಭಕ್ತರು ದೇವಿ ದರ್ಶನ ಪಡೆದಿದ್ದರು. ಈ ಬಾರಿಯೂ ಹೆಚ್ಚಿನ ಭಕ್ತರು ಭೇಟಿ ನೀಡಿ, ಹೆಚ್ಚಿನ ಎಣ್ಣೆ ಸಂಗ್ರಹವಾಗುವ ನಿರೀಕ್ಷೆಯಿದೆ. 1, 3, 5, 7 ಮತ್ತು 9ನೇ ದಿನಗಳಂದು ಗುಡ್ಡಕ್ಕೆ ಬರುವವರ ಪ್ರಮಾಣ ಗಣನೀಯವಾಗಿ ಇರಲಿದೆ. ಇನ್ನೂ ಉತ್ಸವದಲ್ಲಿ ಜನದಟ್ಟಣೆ ಆಗಬಹುದೆಂದು ಕೆಲವರು ಮೊದಲೇ ಗುಡ್ಡಕ್ಕೆ ಬಂದು ದೇವಿ ದರ್ಶನ ಪಡೆದುಕೊಂಡು ಹೋಗುತ್ತಿರುವುದು ಕಂಡುಬರುತ್ತಿದೆ.

ಅ.1ರಂದು ಆಯುಧ ಪೂಜೆ ಇದ್ದು, 2ರಂದು ಬನ್ನಿ ಮುಡಿಯುವ ಮುಖಾಂತರವಾಗಿ ಉತ್ಸವ ಸಮಾರೋಪಗೊಳ್ಳಲಿದೆ. ನವರಾತ್ರಿ ಅಂಗವಾಗಿ ಅಂಗಡಿ–ಮುಂಗಟ್ಟುಗಳು ಸುಣ್ಣ, ಬಣ್ಣ, ತಳಿರು–ತೋರಣಗಳಿಂದ ಸಿಂಗಾರಗೊಳ್ಳುತ್ತಿವೆ. ಅದರಲ್ಲೂ ವಿಶೇಷವಾಗಿ ಎಣ್ಣೆ ಮಾರಾಟದ ಅಂಗಡಿಗಳು ಕಣ್ಮನಸೆಳೆಯುತ್ತಿವೆ. ಈ ಅವಧಿಯಲ್ಲಿ ಲಕ್ಷಾಂತರ ರೂಪಾಯಿ ಎಣ್ಣೆ ಮಾರಾಟಕ್ಕೆ ಏಳುಕೊಳ್ಳದ ನಾಡು ಸಾಕ್ಷಿಯಾಗುತ್ತದೆ. ಸುಲಭ ದರ್ಶನಕ್ಕೆ ವ್ಯವಸ್ಥೆ ಮಾಡಿದ್ದೇವೆ. ಶುಚಿತ್ವಕ್ಕೆ ಒತ್ತು ಕೊಡುವ ಜತೆಗೆ, ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧಿಸಿದ್ದೇವೆ. ಗರ್ಭಿಣಿಯರು, ಅಂಗವಿಕಲರು ಮತ್ತು ಹಿರಿಯ ನಾಗರಿಕರಿಗೆ ಅನುಕೂಲವಾಗುವಂತೆ, ಮುಖ್ಯರಸ್ತೆಯಿಂದ ದೇವಸ್ಥಾನದವರೆಗೂ ಸಾಗಲು ಬ್ಯಾಟರಿ ಚಾಲಿತ ವಾಹನದ ವ್ಯವಸ್ಥೆಯನ್ನು ಮಾಡಿದ್ದೇವೆ. ಶುದ್ಧಕುಡಿಯುವ ನೀರು, ವಸತಿ, ಸರತಿ ಸಾಲಿನ ವ್ಯವಸ್ಥೆ ಹಾಹೂ ಭಕ್ತರು ನಿಗದಿತ ಸ್ಥಳದಲ್ಲೇ ದೀಪಕ್ಕೆ ಎಣ್ಣೆ ಹಾಕಿ ಸಹಕರಿಸಬೇಕು. ಎಲ್ಲೆಂದರಲ್ಲಿ ಎಣ್ಣೆ ಹಾಕಿ ಗಲೀಜು ಸೃಷ್ಟಿಸಬಾರದು ಎಂದು ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಕಾರ್ಯದರ್ಶಿ ಅಶೋಕ ದುಡಗುಂಟಿ ಭಕ್ತರಲ್ಲಿ ಮನವಿ ಮಾಡಿದ್ದಾರೆ.

ಜಾತ್ರೆಯಲ್ಲಿ ಭದ್ರತೆ, ಸುರಕ್ಷತೆ ದೃಷ್ಟಿಯಿಂದ ಸೂಕ್ತ ಬಂದೋಬಸ್ತ್ ಕಲ್ಪಿಸಲಾಗುವುದು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲಾಗುವುದು ಎಂದು ಬೆಳಗಾವಿ ಜಿಲ್ಲಾ ಎಸ್‌ಪಿ ಡಾ.ಭೀಮಾಶಂಕರ ಗುಳೇದ ಹೇಳಿದ್ದಾರೆ

> ನಾಡಿನಲ್ಲಿ ದೊಡ್ಡ ನವರಾತ್ರಿ ಉತ್ಸವ ನಡೆಯುವ ಸ್ಥಳಗಳಲ್ಲಿ ಯಲ್ಲಮ್ಮನಗುಡ್ಡವೂ ಒಂದು. ಸೌಹಾರ್ದ, ಸಡಗರದಿಂದ ನವರಾತ್ರಿ ಉತ್ಸವ ಆಚರಣೆಗೆ ಸಕಲ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.
>
> **ಮೊಹಮ್ಮದ್ ರೋಷನ್,**
> **ಜಿಲ್ಲಾಧಿಕಾರಿ**

> ಯಲ್ಲಮ್ಮನಗುಡ್ಡದಲ್ಲಿ ನಡೆಯುವ ನವರಾತ್ರಿ ಜಾತ್ರೆಗೆ ಮಹಾರಾಷ್ಟ್ರದ ಭಕ್ತರೇ ಹೆಚ್ಚಾಗಿ ಬರುತ್ತಾರೆ. ಹೀಗಾಗಿ ಬೆಳಗಾವಿ ಕೇಂದ್ರ ಮತ್ತು ನಗರ ಸಾರಿಗೆ ನಿಲ್ದಾಣದಿಂದ ವಿಶೇಷ ಬಸ್ ಸೌಲಭ್ಯ ಕಲ್ಪಿಸಲಾಗಿದೆ. ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದಂತೆ 24 ತಾಸು ಬಸ್ ಸೌಲಭ್ಯ ಕಲ್ಪಿಸಲಾಗುವುದು.
>
> **ಕೆ.ಎಲ್.ಗುಡೆನ್ನವರ,**
> **ಬೆಳಗಾವಿ ವಿಭಾಗೀಯ ನಿಯಂತ್ರಣಾಧಿಕಾರಿ,**
> **ಸಾರಿಗೆ ಸಂಸ್ಥೆ**

## ಭಾವನಸೌಂದತ್ತಿ: ಆದಿಬಣಜಿಗ ಸಮಾಜದ ಸಭೆ



**ರಾಯಬಾಗ:** ತಾಲೂಕಿನ ಭಾವನಸೌಂದತ್ತಿ ಗ್ರಾಮದಲ್ಲಿ ನಡೆದ ಇದೆ ಸಪ್ಟೆಂಬರ 22ರಿಂದ ಅಕ್ಟೋಬರ್ 7ರ ವರೆಗೆ ನಡೆಯುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ರಾಜ್ಯದ ಆದಿ ಬಣಜಿಗ ಸಮಾಜ ದವರು ಧರ್ಮ ಕಾಲಂನಲ್ಲಿ ಹಿಂದೂ, ಜಾತಿ ಮತ್ತು ಉಪಜಾತಿಕ ಕಾಲಂನಲ್ಲಿ ಆದಿಬಣಜಿಗ ಎಂದು ನಮೂದಿಸಬೇಕು ಎಂದು ಓಂಕಾರ ಆಶ್ರಮ ಮಠದ ಶ್ರೀ ಶಿವಶಂಕರ ಸ್ವಾಮೀಜಿ ಕರೆ ನೀಡಿದ್ದಾರೆ.

ಗ್ರಾಮದ ಓಂಕಾರ ಆಶ್ರಮ ಮಠದಲ್ಲಿ ಆದಿಬಣಜಿಗ ಸಮಾಜದ ಸಭೆಯಲ್ಲಿ ಮಾತನಾಡಿದ ಅವರು, ಜಾತಿಜಣಗನತಿ ಶುರುವಾಗಲಿದೆ. ಹಾಗಾಗಿ ಜಾತಿ ಆಧಿಬಣಜಿಗ, ಉಪಜಾತಿಯಲ್ಲೂ ಆಧಿಬಣಜಿಗ ಎಂದು ನಮೂದಿಸಿ ಧರ್ಮ ಕಾಲಂ ನಲ್ಲಿ ಹಿಂದೂ ಎಂದು ನಮೂದಿಸಬೇಕು. ಹಿರಿಯರು ಅಂದು ಮಾಡಿದ ತಪ್ಪಿನಿಂದ ಇಂದು ಸಮಸ್ಯೆಯಾಗುತ್ತಿದೆ. ಹಾಗಾಗಿ ಎಲ್ಲರೂ ಜಾಗೃತಿಯಿಂದ ಕಾರ್ಯ ನಿರ್ವಹಿಸಿ ಎಂದು ಶ್ರೀಗಳು ಕರೆ ನೀಡಿದರು. ಅಂಕಲಿ ಗ್ರಾಪಂ ಸದಸ್ಯ ತುಕಾರಂ ಪಾಟೀಲ ಮಾತನಾಡಿ, ನಮ್ಮ ಈ ಭಾಗದ ಜನರಿಗೆ ಆದಿಬಣಜಿಗ ಎಂದರೆ ತಿಳಿಯುವುದಿಲ್ಲ. ಚತುರ್ಥ ಲಿಂಗಾಯತ ಎಂದರೆ ತಿಳಿಯುತ್ತದೆ. ಹಾಗಾಗಿ ಎಲ್ಲರೂ ಗ್ರಾಮೀಣ ಭಾಗದ ನಮ್ಮ ಸಮಾಜದ ಜನರಿಗೆ ಆದಿ ಬಣಜಿಗ ನಮೂದಿಸಬೇಕೆಂದು ಜಾಗೃತಿಮೂಡಿಸಲು ಸಹಕರಿಸಬೇಕು ಎಂದರು.

ಅಖೀಲ ಕರ್ನಾಟಕ ಆದಿಬಣಜಿಗ ಸಮಾಜದ ಅಭಿವೃದ್ಧಿ ಸಂಘದ ಅಧ್ಯಕ್ಷ ಅಜ್ಜಪ್ಪ ನಾಗರಾಳೆ ಮಾತನಾಡಿ, ಯಾವುದೇ ಜನರ ಮಾತಿಗೆ ಕಿವಿಗೊಡದೇ ತಮ್ಮ ಸಂಬಂಧಿಕರಿಗೆ ಹಾಗೂ ಸ್ನಹೇತರಿಗೆ ಜಾತಿಗಣತಿ ಕುರಿತು ಜಾಗೃತಿ ಮೂಡಿಸಬೇಕು ಎಂದು ಹೇಳಿದರು.


ಈ ಸಂದರ್ಭದಲ್ಲಿ ಮಹಾದೇವ ರೆಂದಾಳೆ, ಜ್ಯೋತಿ ಕೆಂಪಟ್ಟಿ, ಶಿವಪ್ಪ ನಾಯಕ, ರವೀಂದ್ರ ಚೌಗಲೆ, ಸತ್ಯಪ್ಪ ಭೀಷ್ಠೆ, ಪ್ರಕಾಶ ಭೀಷ್ಠೆ, ಚಿದಾನಂದ ಮಂಗಸೂಳೆ, ಮಾರುತಿ ನಾಯಿಕ, ಸದಾಶಿವ ಭಿರಡಿ, ಶಂಕರ್ ಚೌಗುಲೆ ಸೇರಿದಂತೆ ದಿಗ್ಗೆವಾಡಿ, ನಸಲಾಪುರ, ಅಂಕಲಿ, ರಾಯಬಾಗ, ಯಕ್ಸಂಬಾ, ಹಿರೇಕುಡಿ, ಕೆಂಪಟ್ಟಿ, ಮೆಖಳಿ ಗ್ರಾಮದ ಆದಿಬಣಜಿಗ ಸಮಾಜದ ಅನೇಕ ಮುಖಂಡರು ಕಾರ್ಯಕರ್ತರು ಉಪಸ್ಥಿದ್ದರು.

## ಕಲಾ ಪ್ರತಿಭೋತ್ಸವ ಕಾರ್ಯಕ್ರಮ

**ಬೆಳಗಾವಿ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ, 28 ಹಾಗೂ 29 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಕಲಾ ಪ್ರತಿಭೋತ್ಸವ ಕಾರ್ಯಕ್ರಮ ಜರುಗಲಿದೆ.

ಆಸಕ್ತ ಅಭ್ಯರ್ಥಿಗಳು ಅಕ್ಟೋಬರ್, 13, 2025 ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಏಕವ್ಯಕ್ತಿ ಸ್ಪರ್ಧೆಗಳಿಗೆ 9 ರಿಂದ 14 ವರ್ಷ ಬಾಲ ಹಾಗೂ 15 ರಿಂದ 18 ವರ್ಷ ಕಿಶೋರ ಪ್ರತಿಭಾವಂತರಿಗೆ ಜಾನಪದ ಗೀತೆ, ಸುಗಮ ಸಂಗೀತ, ಹಿಂದುಸ್ತಾನಿ/ ಕರ್ನಾಟಕ ವಾದ್ಯ ಸಂಗೀತ, ಹಿಂದುಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ, ಕಲಾ ಪ್ರಕಾರಗಳಿಗೆ 7 ನಿಮಿಷಗಳ ವರೆಗೆ ಸಮಯವನ್ನು ಹಾಗೂ ಶಾಸ್ತ್ರೀಯ ನೃತ್ಯ ಕಲೆಗೆ 10 ನಿಮಿಷ ಹಾಗೂ ಚಿತ್ರಕಲೆಗೆ 120 ನಿಮಿಷಗಳ ಕಾಲ ಸಮಯವನ್ನು ನಿಗದಿ ಪಡಿಸಲಾಗಿದೆ. 19 ರಿಂದ 30 ವರ್ಷ ವಯಸ್ಸಿನ ಯುವ ಪ್ರತಿಭಾವಂತರಿಗೆ ನನ್ನ ಮೆಚ್ಚಿನ ಸಾಹಿತಿ (ಆಶು ಭಾಷಣ), ಸುಗಮ ಸಂಗೀತ, ಹಿಂದುಸ್ತಾನಿ/ ಕರ್ನಾಟಕ ವಾದ್ಯ ಸಂಗೀತ, ಹಿಂದುಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ, ಕಲಾ ಪ್ರಕಾರಗಳಿಗೆ 7 ನಿಮಿಷಗಳ ವರೆಗೆ ಸಮಯವನ್ನು ಹಾಗೂ ಶಾಸ್ತ್ರೀಯ ನೃತ್ಯ ಕಲೆಗೆ 10 ನಿಮಿಷ ಹಾಗೂ ಚಿತ್ರಕಲೆಗೆ 120 ನಿಮಿಷಗಳ ಕಾಲ ಸಮಯವನ್ನು ನಿಗದಿ ಪಡಿಸಲಾಗಿದೆ. ಸಮೂಹ ಸ್ಪರ್ಧೆಯಲ್ಲಿ ಭಾಗವಹಿಸುವ 19 ರಿಂದ 30 ವರ್ಷದವರಿಗೆ ನಾಟಕವನ್ನು ಪ್ರದರ್ಶಿಸಲು 45 ನಿಮಿಷಗಳ ಕಾಲಾವಕಾಶವ ಕಲ್ಪಿಸಲಾಗಿದೆ. ಸೂಚನೆ: ಒಬ್ಬರಿಗೆ ಒಂದು ಕಲಾ ಪ್ರಕಾರದಲ್ಲಿ ಮಾತ್ರ ಸ್ಪರ್ಧಿಸಲು ಅವಕಾಸವಿದೆ. ಸ್ಪರ್ಧೆಗಳಲ್ಲಿ ಭಾವಹಿಸುವವರು ಸ್ವ ವಿಳಾಸ ದೂರವಾಣಿ ಸಂಖ್ಯೆಯೊಂದಿಗೆ ಕಲಾ ಪ್ರಕಾರ ಹಾಗೂ ಜನ್ಮ ದಾಖಲೆ ಕುರಿತು ಜನನ ಪ್ರಮಾಣ ಪತ್ರ ಅಥವಾ ಶಾಲಾ/ಕಾಲೇಜು ದಾಖಲಾತಿಯನ್ನು ಸಲ್ಲಿಸಬೇಕು. ಸಮೂಹ ಸ್ಪರ್ಧೆಯ ನಾಟಕದಲ್ಲಿ ಕನಿಷ್ಠ 10 ಜನ ಗರಿಷ್ಠ 15 ಜನರಿಗೆ ಮಾತ್ರ ಅವಕಾಶ. ಸ್ಪರ್ಧೆಯಲ್ಲಿ ತೀರ್ಪುಗಾರರು ನೀಡುವ ತೀರ್ಪು ಅಂತಿಮವಾಗಿರುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಲೆ ಮಕ್ಕಳಿಗೆ ಬುಕ್ ಪೆನ್ ವಿತರಣೆ



**ತೇರದಾಳ:** ಇಲ್ಲಿನ ದೇವರಾಜ ನಗರದ ಸಚಿನ ಪಾತ್ರೋಟ ಜನುಮ ದಿನದ ದಿನಿಮಿತ್ತ ಟೈಗರ್ ಗ್ರುಪ್ ವತಿಯಿಂದ ದೇವರಾಜ ನಗರದ ಸರಕಾರಿ ಎಚ್‌ಪಿಎಸ್ ಶಾಲೆ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಹಾಗೂ ಪೆನ್ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗ್ರುಪ್‌ನ ವಿದ್ಯಾನಂದ ಧರೆನ್ನವರ, ಸಾಮಾಜಿಕ ಕೆಲಸ ಮಾಡುವುದೆ ಟೈಗರ್ ಗ್ರುಪ್ ಉದ್ದೇಶವಾಗಿದೆ. ಮುಂಬರುವ ದಿನಗಳಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಹಾಗೂ ಬಡವರಿಗೆ ಸ್ಪಂಧಿಸುವ ಹಲವು ಯೋಜನೆಗಳನ್ನು ರೂಪಿಸಲಾಗುತ್ತಿದೆ. ಸರಕಾರಿ ಶಾಲೆಗಳಿಗೆ ಬಡ ಕುಟುಂಬದ ಮಕ್ಕಳು ಬರುತ್ತಾರೆ ಎಂಬ ಉದ್ದೇಶದಿಂದ ಮಕ್ಕಳಿಗೆ ನೋಟ್‌ಬುಕ್ ಹಾಗೂ ಪೆನ್ ವಿತರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಶಿಕ್ಷಕ ಶಾನೂರ ಮೋಮಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಶೈಲ ಮಲಾಬದಿ, ಪ್ರದೀಪ, ರಾಜು ಅಲಾಸ, ಚೇತನ, ಧರೀಶ ಹಾಗೂ ಶಾಲೆ ಶಿಕ್ಷಕರು ಇದ್ದರು.

## ನರೇಗಾ ಯೋಜನೆಯ ಜಾಬಕಾರ್ಡಗಳಿಗೆ ಇ-ಕೆವೈಸಿ ಕಡ್ಡಾಯ

**ಕೊಪ್ಪಳ:** ತಾಲ್ಲೂಕಿನ 38 ಗ್ರಾಮ ಪಂಚಾಯಿತಿಗಳಲ್ಲಿ ಮಹಾತ್ಮ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೋಂದಾಯಿತ ಸಕ್ರಿಯ ಕುಟುಂಬಗಳ ಜಾಬ ಕಾರ್ಡಗಳಲ್ಲಿರುವ ಎಲ್ಲಾ ಸದಸ್ಯರು ಸೆಪ್ಟೆಂಬರ್, 30ರ ಒಳಗಾಗಿ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ ಎಂದು ಕೊಪ್ಪಳ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಅವರು ತಿಳಿಸಿದ್ದಾರೆ.


ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿರುವ ಸಿಬ್ಬಂದಿಗಳು, ಬೇರ್‌ಫೂಟ್ ಟೆಕ್ನಿಷಿಯನ್ ಗಳು, ಜಿಕೆಎಂಗಳಿಗೆ ತರಬೇತಿ ನೀಡುವ ಮೂಲಕ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಮೊದಲನೇ ಹಂತದಲ್ಲಿ ಪ್ರಾಯೋಗಿಕವಾಗಿ ತುಮಕೂರು, ಕೊಪ್ಪಳ, ಕೋಲಾರ, ಹಾಸನ ಹಾಗೂ ಹಾವೇರಿ ಜಿಲ್ಲೆಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯದಿಂದ ಆಯ್ಕೆ ಮಾಡಿಕೊಳ್ಳಲಾಗಿದ್ದು, ನರೇಗಾ ಯೋಜನೆಯಡಿ ಅನುಷ್ಠಾನಗೊಳ್ಳುವ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಕೂಲಿಕಾರರ ಪ್ರತಿಯೊಬ್ಬರ ಏಣಿಕೆ ಮೂಲಕ ಎನ್.ಎಂ.ಎಂ.ಎಸ್ ಹಾಜರಾತಿ ಸಂಖ್ಯೆ ಆನ್ಲೈನ್ ತೆಗೆದುಕೊಳ್ಳುತ್ತಿದ್ದು ಇ–ಕೆವೈಸಿ ಹೊಂದಿರುವರು ಅವರ ಹಾಜರಾತಿ ತೆಗೆದುಕೊಳ್ಳುವಾಗ ಅವರ ಆಧಾರ್ ನಂಬರ್ ಮತ್ತು ಸ್ಥಳದಲ್ಲಿ ಹಾಜರಿದ್ದವರ ಮುಖ ಹೊಂದಾಣಿಕೆಯಾಗಿದ್ದಲ್ಲಿ ಮಾತ್ರ ಅವರ ಎನ್.ಎಂ.ಎಂ.ಎಸ್ ಪರಿಗಣಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

ಕೊಪ್ಪಳ ತಾಲೂಕಿನಲ್ಲಿ ಒಟ್ಟು 1,11,030 ಸಕ್ರೀಯ(Active) ಕೂಲಿಕಾರರಿದ್ದು ಇಲ್ಲಿಯವರೆಗೆ 43,849 ಕೂಲಿಕಾರರು ಇ–ಕೆವೈಸಿ ಹೊಂದಿದ್ದು, 67,181 ಕೂಲಿಕಾರರು ಇ–ಕೆವೈಸಿ ಹೊಂದುವದು ಬಾಕಿ ಇರುತ್ತದೆ. ಈಗಾಗಲೇ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಐಇಸಿ ಕಾರ್ಯಕ್ರಮಗಳಾದ ಮೈಕ್ ಮೂಲಕ, ಸ್ವಚ್ಛ ವಾಹಿನಿಯ ಮೂಲಕ ಪ್ರಚಾರ ಕೈಗೊಂಡಿದ್ದು ತಾಲೂಕಿನಲ್ಲಿ 67,181 ಕೂಲಿಕಾರರು ಇ–ಕೆವೈಸಿ ಹೊಂದುವದು ಬಾಕಿ ಇರುವದರಿಂದ ಪ್ರತಿಯೊಬ್ಬ ನರೇಗಾ ಕೂಲಿಕಾರರು ತಪ್ಪದೇ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ–ಕೆವೈಸಿ ಹೊಂದುವುದು. ಇ–ಕೆವೈಸಿ ಮಾಡಿಸದೇ ಇರುವಂತಹ ಕೂಲಿಕಾರರ ಎನ್.ಎಂ.ಎಂ.ಎಸ್ (NMMS)ನಲ್ಲಿ ಹಾಜರಾತಿಯನ್ನು ಅಕ್ಟೋಬರ್ 1 ರಿಂದ ತೆಗೆದುಕೊಳ್ಳುವದಿಲ್ಲ. ತುರ್ತಾಗಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಎಲ್ಲಾ ಕೂಲಿಕಾರರು ನಿಮ್ಮ ಆಧಾರ ಕಾರ್ಡ ಹಾಗು ಜಾಬಕಾರ್ಡನೊಂದಿಗೆ ನಿಮ್ಮ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ–ಕೆವೈಸಿ ಹೊಂದಬೇಕೆಂದು ಕೊಪ್ಪಳ ತಾ.ಪಂ ಕಾರ್ಯಾಲಯದ ಪ್ರಕಟಣೆ ತಿಳಿಸಿದ್ದಾರೆ.

# ದೇಶ ಕಟ್ಟುವಲ್ಲಿ ಇಂಜನಿಯರುಗಳ ಪಾತ್ರ ಬಹುಮುಖ್ಯ

**ಮೋಳೆ:** ದೂರದೃಷ್ಟಿ ಹಾಗೂ ಜನಸ್ನೇಹಿ ಚಿಂತನೆಗಳಿಂದ ಸರ್. ಎಂ.ವಿಶ್ವೇಶ್ವರಯ್ಯನವರು ನಾಡಿನ ಎಲ್ಲಾ ವರ್ಗಗಳ ಆಶಾಕಿರಣ ಎನಿಸಿದ್ದಾರೆ. ಮುದ್ದೇನಹಳ್ಳಿಯಲ್ಲಿ ಜನಿಸಿ ಜಗತ್ತೇ ನಿಬ್ಬೆರಗಾಗುವಂತೆ ತಮ್ಮ ಯೋಜನೆಗಳ ಮೂಲಕ ದೇಶ ಸೇವೆಯನ್ನು ಮಾಡಿದ ಅವರ ಬದುಕು ಇಂಜಿಯರ್‌ಗಳಿಗೆ ಮಾದರಿಯಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ, ಅಥಣಿ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯನವರ 165 ನೇ ಜನ್ಮ ದಿನಾಚರಣೆಯನ್ನು ಅಥಣಿ ತಾಲೂಕಾ ಇಂಜನಿಯರ್ಸ್ ಅಸೋಶಿಯೇಷನ್, ಹಾಗೂ ಗುತ್ತಿಗೆದಾರರ ಸಂಘದ ವತಿಯಿಂದ ಏರ್ಪಡಿಸಿದ ಕಾರ್ಯಕ್ರಮದಲ್ಲಿ ವಿಶ್ವೇಶ್ವರಯ್ಯನವರ ಭಾವಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡುತ್ತಿದ್ದರು. ಇಂಜನಿಯರಗಳಿಗೆ ವಿಶ್ವೇಶ್ವರಯ್ಯ ಮಾದರಿ, ಅವರ ಸಮಯಪ್ರಜ್ಞೆ,ಕಾರ್ಯತಂತ್ರ ಮತ್ತು




ಅನುಷ್ಠಾನದ ವೈಖರಿ ಎಲ್ಲಾ ಹಂತದಲ್ಲೂ ಗಮನ ಸೆಳೆಯುತ್ತದೆ. ಅವರು ಕೊಡುಗೆ ನೀಡದೆ ಹೋಗಿದ್ದರೆ ವಿಶ್ವವಿಖ್ಯಾತ ಕನ್ನಂವಾಡಿ ಆನೆಕಟ್ಟು ಅಸಾಧ್ಯವಾಗುತ್ತಿತ್ತು. ದೇಶ ಕಟ್ಟುವಲ್ಲಿ ಅಭಿಯಂತರರ ಪಾತ್ರ ಬಹುಮುಖ್ಯವಾಗಿದೆ ಎಂದರು.

ಅಥಣಿಯಲ್ಲೊಂದು ಇಂಜನಿಯರಿಂಗ ಕಾಲೇಜು ನಿರ್ಮಿಸುವ ಬಗ್ಗೆ ತಾವು ಪ್ರಸ್ತಾವಣೆ ಮಾಡಿದ್ದು, ಅದಕ್ಕಾಗಿಯೇ 50 ಎಲ್ಲರ ಭೂಮಿಯನ್ನು ಕಾಯ್ದಿರಿಸಲಾಗಿದೆ,ಸೂಕ್ತ ಸಮಯದಲ್ಲಿ ಕಾಲೇಜನ್ನು ಪ್ರಾರಂಭಿಸಲಾಗುವುದೆಂದು ಭರವಸೆ ನೀಡಿದ ಲಕ್ಷ್ಮಣ ಸವದಿ ಅವರು ಅಥಣಿಯಲ್ಲಿ ಇಂಜನಿಯರ ಭವನ ನಿರ್ಮಿಸಲು ಸರಕಾರದಿಂದ ಎಲ್ಲಾ ಸೌಲಭ್ಯಗಳನ್ನು ಕೊಡಿಸುವುದಾಗಿ ಹೇಳಿದರು. ಮುಖ್ಯ ಅತಿಥಗಳಾಗಿ ಧಾರವಾಡ ಐಐಟಿ ಉಪನ್ಯಾಸಕ ಡಾ.ಅನಿಕೇತ ಕಟವರೆಮಾತನಾಡಿದರು. ಕರ್ನಾಟಕ ನೀರಾವರಿ ನಿಗಮದ ಕಾರ್ಯಪಾಲಕ ಇಂಜನಿಯರ ನಾಗರಾಜ ಬಿ.ಎ, ಅಧ್ಯಕ್ಷತೆ ವಹಿಸಿದ್ದರು.ರಾಜಶೇಖರ ಟೋಪಗಿ, ರಾಜು ಆಲಬಾಳ, ಸಂಜೀವ ಕುಲಕರ್ಣಿ,ಶ್ರೀಧರ ಚವ್ಹಾನ ಸೇರಿದಂತೆ ಇಂಜನಿಯರು ಹಾಗೂ ಗುತ್ತೆಗೆದಾರರು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

**ಪ್ರಶಸ್ತಿ ಪ್ರಧಾನ:** ಅಥಣಿ ತಾಲೂಕಾ ಬೆಸ್ಟ್ ಇನಿಮಿನೆಂಟ್ ಇಂಜನಿಯರ ಎಂದು ಐದು ಜನ ಇಂಜನಿಯರುಗಳನ್ನು ಆಯ್ಕೆ ಮಾಡಿದ್ದು, ಪ್ರವೀಣ ಹುಣಸಿಕಟ್ಟಿ, ವೀರಣ್ಣ ವಾಲಿ, ಶಿವಲಿಂಗ ಗಲಗಲಿ, ಎಂ.ಬಿ.ಪಾಟೀಲ(ಕಾಗವಾಡ) ಹಾಗೂ ಗುರುರಾಜ ಸಂಪನ್ನರವ ಅವರಿಗೆ ಪ್ರಶಸ್ತಿ ಪ್ರಧಾನ ಮಾಡಿದರು. ಇದೇ ವೇಳೆ ನಿವೃತ್ ಇಂಜಿನಿಯರುಗಳಾದ ಜಯಾನಂದ ಹಿರೇಮಠ, ಎಸ್.ಎಸ್.ಮಾಕಾಣಿ ಮತ್ತಿತರರನ್ನು ಸನ್ಮಾನಿಸಿದರು, ಅಭಿಯಂತರ ರವೀಂದ್ರ ಮುರಗಾಲಿಯವರು ಹಾಸ್ಯಭರಿತವಾಗಿ ವಾಸ್ತವ ಸತ್ಯವನ್ನು ಮಾತನಾಡುವ ಮೂಲಕ ಸಭೆಯನ್ನು ನಗೆಗಡಲಿಗೆ ಕೋಡೊಯ್ದರ ಪ್ರಸಂಗ ಜರುಗಿತು.

# ಸೆ.23ರಂದು ರಾಷ್ಟ್ರೀಯ ಆಯುರ್ವೇದ ದಿನಾಚರಣೆ

**ಧಾರವಾಡ:** ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆಯುಷ್ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಸೆಪ್ಟಂಬರ್ 23 ರಂದು ಬೆಳಿಗ್ಗೆ 10 ಗಂಟೆಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರಾದ ದಿನೇಶ್ ಗುಂಡೂರಾವ್ ಅವರು ಗೌರವ ಉಪಸ್ಥಿತಿ ವಹಿಸುವರು. ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ, ಎಫ್. ಹೆಚ್. ಜಕ್ಕಪ್ಪನವರ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ–ಧಾರವಾಡ ಮಹಾನಗರ ಮಹಾಪೌರರಾದ ಜ್ಯೋತಿ ಪಾಟೀಲ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಗ್ಯಾರೆಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್. ಆರ್. ಪಾಟೀಲ ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಬೆಂಗಳೂರು ಆಯುಷ್ ಇಲಾಖೆಯ ಆಯುಕ್ತ ವಿಪಿನ್ ಸಿಂಗ್, ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಮ್. ಹೊನಕೇರಿ ಅವರು ಭಾಗವಹಿಸುವರೆಂದು ಡಾ. ಗಣೇಶ ಎಸ್. ಕಬಾಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಯಕ ಮುಖೇಶರದ್ದು ಮರೆಯಲಾರದ ಮಧುರ ಧ್ವನಿ

**ಬೆಳಗಾವಿ:** ಗಾಯಕ ಮುಖೇಶರದ್ದು ಮರೆಯಲಾರದ ಮಧುರ ಧ್ವನಿ ಆದರೆ ವಿಶಿಷ್ಟವಾದ ಧ್ವನಿ. ಅವರು ತಮ್ಮದೇ ಆದ ಅಭಿಮಾನಿ ಬಳಗವನ್ನು ಹೊಂದಿದ್ದರು ಈಗಲೂ ಹೊಂದಿದ್ದಾರೆ. ಅವರು ಗಾಯಕ ಕೆ.ಎಲ್. ಸೈಗಲ್ ರ ಅಭಿಮಾನಗಳಾಗಿದ್ದರು. ಸೈಗಲ್ ಅವರ ಧ್ವನಿ ಅನುಕರಣೆ ಮಾಡುತ್ತ ಮುಖೇಶ ಚಿತ್ರರಂಗವನ್ನು ಪ್ರವೇಶಿಸಿದರು ಮುಂದೆ ತಮ್ಮದೇ ಆದ ಧ್ವನಿಯಿಂದ ಪ್ರಸಿದ್ಧರಾದರು ಸ್ವರಾಂಜಲಿ ಸಂಗೀತ ಶಾಲೆಯ ಸ್ಥಾಪಕ

ಹಿಂದವಾಡಿಯಲ್ಲಿರುವ ಸ್ವರಾಂಜಲಿ ಕರೋಕೆ ಸಂಗೀತ ಶಾಲೆಯವರು ಖ್ಯಾತ ಹಿಂದಿ ಗಾಯಕ ಮುಖೇಶ ಅವರ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಮುಖೇಶ ಅವರ ಭಾವಚಿತ್ರಕ್ಕೆ ಮಾಲೆಯನ್ನು ಹಾಕಿ, ಅವರ ಚಲನಚಿತ್ರಗಳಲ್ಲಿಯ ಹಾಡುಗಳನ್ನು ಹಾಡುವುದರೊಂದಿಗೆ ತಮ್ಮ ಸಂಭ್ರಮವನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಸ್ವರಾಂಜಲಿ ಸಂಸ್ಥಾಪಕ ಚಂದ್ರಶೇಖರ ಹಿರೇಮಠ ಮುಖೇಶ ಅವರ ಕುರಿತಾದ ಹಲವಾರು ವಿಷಯಗಳನ್ನು ಹಂಚಿಕೊಂಡರು.



ಹಾಡುಗಾರರಾದ ಕಿರಣ ಕುಲಕರ್ಣಿ, ಅಶೋಕ ಕರಪೆ, ಗಜಾನನ ರತನ, ಅನ್ವರ ಝುರಿ, ತನ್ವೀರ ಜಾಗಿರದಾರ, ಮಂಜುನಾಥ ಹಿರೇಮಠ, ಪ್ರಭಾಕರ ಕೊಲ್ಹಾರ, ಸಲಿಂ ಶೈಖ, ಸಯ್ಯದ ಎನ್. ಆರ್, ಚಂದ್ರಕಾಂತ ಅಪ್ಪಣ್ಣವರ, ಪಾಂಡುರಂಗ ಖಂಡುಕರ್, ಹರಿ ಸುತಾರ, ಚಂದ್ರಶೇಖರ ಹಿರೇಮಠ, ಸುಕನ್ಯ ಸೂಜಿ, ಅನುರಾಧಾ ಕುಲಕರ್ಣಿ, ಛಾಯಾ ಕರಪೆ, ಸುಧಾಕರ ಚೊಳಚದ ಮುಖೇಶರ ಜನಪ್ರಿಯ ಹಾಡುಗಳನ್ನು ಪ್ರಸ್ತುತ ಪಡಿಸಿದರು. ಮೇರಾ ನಾಮ ಜೋಕರ ಚಿತ್ರದ ಜೀನಾ ಯಹಾಂ ಮರನಾ ಯಹಾಂ ಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

## ದೇಶನೂರ: ಹೆಚ್ಚುವರಿ ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಬೈಲಹೊಂಗಲ ತಾಲೂಕಿನ ದೇಶನೂರ ಗ್ರಾಮದಲ್ಲಿ ಪ್ರಸ್ತುತ ಎರಡು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 15-10-2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಬೈಲಹೊಂಗಲ್ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಬೈಲಹೊಂಗಲ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ನಿಲಯದ ಸೈಕ್ಲಿಂಗ್ ಕ್ರೀಡಾಪಟು ಸಾಧನೆ

**ಬೆಳಗಾವಿ:** ಬಾಗಲಕೋಟೆ ಜಿಲ್ಲೆಯ ಬೀಳಗಿ ಪಟ್ಟಣದಲ್ಲಿ ಕರ್ನಾಟಕ ಅಮೆಚೂರ್ ಸೈಕ್ಲಿಂಗ್ ಸಂಸ್ಥೆ ಜಮಖಂಡಿ ಇವರ ವತಿಯಿಂದ ಸೆಪ್ಟೆಂಬರ, 14 ಮತ್ತು 15, 2025 ರಂದು ನಡೆದ ರಾಜ್ಯ ಮಟ್ಟದ 20ನೇ ಮೌಂಟೇನ್ ಬೈಕ್ ಸೈಕ್ಲಿಂಗ್ ಚಾಂಪಿಯನ್ ಶಿಪ್ ಪಂದ್ಯಾವಳಿಯಲ್ಲಿ ಬೆಳಗಾವಿ ಕ್ರೀಡಾ ವಸತಿ ನಿಲಯದ ಸೈಕ್ಲಿಂಗ್ ಕ್ರೀಡಾಪಟು ಪ್ರೀತಿ ಹಳಬರ ಅವರು ಬೆಳ್ಳಿ ಪದಕವನ್ನು ಪಡೆದಿರುತ್ತಾರೆ.

ಕ್ರೀಡಾಪಟು ಪ್ರೀತಿ ಹಳಬರ ಇವರಿಗೆ ಯಲ್ಲಪ್ಪ ಹಿರೇಕುರುಬರ ತರಬೇತಿಯನ್ನು ನೀಡಿರುತ್ತಾರೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರಾದ ಬಿ. ಶ್ರೀನಿವಾಸ್, ಬೆಳಗಾವಿ ಜಿಲ್ಲಾ ಸೈಕ್ಲಿಂಗ್ ಸಂಸ್ಥೆಯ ಕಾರ್ಯದರ್ಶಿಗಳಾದ ಆರ್.ಎಚ್.ಪೂಜಾರಿ ಹಾಗೂ ಸಿಬ್ಬಂದಿ ವರ್ಗದವರು ಸೇರಿ ಶುಭ ಹಾರೈಸಲಾಯಿತು ಎಂದು ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುರಕರಶೀಗಿಹಳ್ಳಿ: ಹೆಚ್ಚುವರಿ ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಬೈಲಹೊಂಗಲ ತಾಲೂಕಿನ ತುರಕರಶೀಗಿಹಳ್ಳಿ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 15-10-2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಬೈಲಹೊಂಗಲ್ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಬೈಲಹೊಂಗಲ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಅಥಣಿ ತಾಲೂಕಿನ ಸಂಬರಗಿ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.ದಿನಾಂಕ: 18-10-2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಅಥಣಿ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಅಥಣಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಸರಾ: ಹೆಚ್ಚುವರಿ ಸಾರಿಗೆ ವ್ಯವಸ್ಥೆ

**ಬೆಳಗಾವಿ:** ದಸರಾ ಹಬ್ಬದ ಪ್ರಯುಕ್ತ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಅಕ್ಟೋಬರ, 1 ಮತ್ತು 2 ರಂದು ಚಿಕ್ಕೋಡಿ ವಿಭಾಗದ ಚಿಕ್ಕೋಡಿ, ನಿಪ್ಪಾಣಿ, ಸಂಕೇಶ್ವರ, ಹುಕ್ಕೇರಿ, ಗೋಕಾಕ, ರಾಯಬಾಗ ಹಾಗೂ ಸೆಪ್ಟಂಬರ, 30 ರಿಂದ ಅಕ್ಟೋಬರ, 7 ರ ವರೆಗೆ ಅಥಣಿ ಘಟಕಗಳಿಂದ ಬೆಂಗಳೂರು, ಪೂಣೆ, ಮುಂಬಯಿ, ಸಾತಾರಾ, ಇಚಲಕರಂಜಿ, ಕೊಲ್ಹಾಪೂರ ಹಾಗೂ ಇತರೇ ಅಂತರರಾಜ್ಯ ಮಾರ್ಗಗಳಿಗೆ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು. ದಸರಾ ಹಬ್ಬ ಆಚರಿಸಲು ಬರುವ ಪ್ರಯಾಣಿಕರಿಗಾಗಿ ವಿಭಾಗದ ಎಲ್ಲ ಘಟಕಗಳಿಂದ ಸೆಪ್ಟಂಬರ್, 30. 2025 ರಂದು ಹೆಚ್ಚುವರಿ ವಾಹನಗಳನ್ನು ಬೆಂಗಳೂರಿನಿಂದ ವಿಭಾಗದ ತಾಲೂಕು ಕೇಂದ್ರಗಳಿಗೆ ಕಾರ್ಯಾಚರಣೆ ಮಾಡಲಾಗುವುದು. ಸೆಪ್ಟಂಬರ್, 22 ರಿಂದ 30 ರವರೆಗೆ ಸವದತ್ತಿ ಎಲ್ಲಮ್ಮಾ ಹಾಗೂ ವಿವಿಧ ಧಾರ್ಮಿಕ ಕ್ಷೇತ್ರಗಳಿಗೆ ಚಿಕ್ಕೋಡಿ, ನಿಪ್ಪಾಣಿ, ಸಂಕೇಶ್ವರ, ಹುಕ್ಕೇರಿ, ಗೋಕಾಕ, ರಾಯಬಾಗ ಹಾಗೂ ಅಥಣಿ ಘಟಕಗಳಿಂದ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು, ಸಾರ್ವಜನಿಕ ಪ್ರಯಾಣಿಕರು ಈ ವಿಶೇಷ ಹೆಚ್ಚುವರಿ ಸಾರಿಗೆಗಳ ಪ್ರಯೋಜನ ಪಡೆಯಬಹುದಾಗಿದೆ ಎಂದು ಚಿಕ್ಕೋಡಿ ವಿಭಾಗದ ವಾ.ಕ.ರ.ಸಾ.ಸಂಸ್ಥೆ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲೆಯಲ್ಲಿ 4,880 ಗಣತಿದಾರರಿಂದ 5,46,012 ಕುಟುಂಬಗಳ ಸಮೀಕ್ಷೆ: ಜಿಲ್ಲಾಧಿಕಾರಿ ದಿವ್ಯ ಪ್ರಭು

# ನಾಳೆಯಿಂದ ಹಿಂದುಳಿದ ವರ್ಗಗಳ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ

**ಧಾರವಾಡ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪ್ರಕ್ರಿಯೆಯ ಪೂರ್ವಭಾವಿ ತಯಾರಿ ಕಾರ್ಯಗಳು ಆಗಸ್ಟ 23 ರಿಂದ ಆರಂಭಗೊಂಡಿದೆ. ರಾಜ್ಯದ ವಿವಿಧ ಭಾಗಗಳಲ್ಲಿ ವಾಸಿಸುತ್ತಿರುವ ಜನರಲ್ಲಿನ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಸಮಾನತೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ನಿಮಿತ್ತ ದತ್ತಾಂಶ ಸಂಗ್ರಹಿಸಲು ರಾಜ್ಯ ಸರ್ಕಾರವು ಈ ಸಮೀಕ್ಷೆಯನ್ನು ಕೈಗೊಂಡಿದ್ದು, ಜಿಲ್ಲೆಯಲ್ಲಿ ಸೆ.22 ರಿಂದ ಅ.7 ರವರೆಗೆ ಹಿಂದುಳಿದ ವರ್ಗಗಳ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ ಜರಗಲಿದ್ದು, ಜಿಲ್ಲೆಯಲ್ಲಿ 4,880 ಗಣತಿದಾರರಿಂದ 5,46,012 ಕುಟುಂಬಗಳ ಸಮೀಕ್ಷೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲಾಧಿಕಾರಿಗಳು, ಸಮೀಕ್ಷೆಯಲ್ಲಿ ಹಸ್ಕಾಂದಿಂದ ವಿದ್ಯುತ್ ಮೀಟರ್ ರೀಡರ್‌ಗಳ ಮೂಲಕ ಮನೆಮನೆಗೆ ಭೇಟಿ ನೀಡಿ ಜಿಯೋ ಟ್ಯಾಗಿಂಗ್ ಮಾಡುವ ಕಾರ್ಯ ಈಗಾಗಲೇ ಪ್ರಾರಂಭವಾಗಿದೆ. 90 ದಿನಗಳ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸುವ ಬದ್ಧತೆಯೊಂದಿಗೆ ಈ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಮೀಕ್ಷೆಯ ಮೊದಲ ಹಂತದಲ್ಲಿ ಮನೆ ಪಟ್ಟಿ ಮತ್ತು ಮ್ಯಾಪಿಂಗ್ ಕೆಲಸಗಳನ್ನು ಪೂರ್ಣಗೊಳಿಸಲಾಗುತ್ತಿದೆ. ಜಿಲ್ಲೆಯ ಪ್ರತಿಯೊಂದು ಮನೆಗಳನ್ನು ಎಣಿಸಿ, ಅನುಕ್ರಮ ಸಂಖ್ಯೆಯನ್ನು ನೀಡಲಾಗುವುದು. ವಿದ್ಯುತ್ ಸಂಪರ್ಕ ಹೊಂದಿರುವ ಎಲ್ಲಾ ಮನೆಗಳನ್ನು ಆರ್.ಆರ್. ಮೀಟರ್ ಸಂಖ್ಯೆಯ ಆಧಾರದ ಮೇಲೆ ಗುರುತಿಸಿ ಜನರ ಸಮೀಕ್ಷೆ ಕೈಗೊಳ್ಳಲಾಗುತ್ತಿರುವುದರಿಂದ ಯಾವುದೇ ಮನೆ ಸಮೀಕ್ಷಾ ವ್ಯಾಪ್ತಿಯಿಂದ ತಪ್ಪಿ ಹೋಗುವ ಸಾಧ್ಯತೆ ಇರುವುದಿಲ್ಲ ಎಂದು ತಿಳಿಸಿದ್ದಾರೆ.

ಎರಡನೇ ಹಂತದಲ್ಲಿ, ಸಮೀಕ್ಷೆಯ ಮುಖ್ಯ ಕಾರ್ಯವನ್ನು ವೈಜ್ಞಾನಿಕ ರೀತಿಯಲ್ಲಿ ನಡೆಸಲು ದಸರಾ ರಜೆಯ ಅವಧಿ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ಸಮೀಕ್ಷೆ ನಡೆಸಲಾಗುವುದು. ಈ ಅವಧಿಯಲ್ಲಿ ಶಾಲಾ ರಜೆ ಇರುವುದರಿಂದ ಸಮೀಕ್ಷಾ ಕಾರ್ಯಕ್ಕೆ ಅನುಕೂಲವಾಗುವುದು ಎಂದು ಅವರು ಹೇಳಿದ್ದಾರೆ.

ಈ ಸಮೀಕ್ಷೆಗಾಗಿ ಇ-ಆಡಳಿತ ಹಾಗೂ ಇಂಧನ ಇಲಾಖೆಗಳಿಂದ ವಿದ್ಯುಚ್ಛಕ್ತಿ ಮೀಟರ್ ಸಂಪರ್ಕದ ಆಧಾರದ ಮೇಲೆ ವಿನ್ಯಾಸಗೊಳಿಸಿದ ನವೀನ, ಕ್ರಿಯಾತ್ಮಕ ಮತ್ತು ವಿಶಿಷ್ಟವಾದ ಆ್ಯಪ್ ಅಭಿವೃದ್ಧಿಪಡಿಸಲಾಗಿದೆ. ಮೀಟರ್ ರೀಡರ್‌ಗಳು ಸಂಗ್ರಹಿಸಿದ ಮನೆ ಪಟ್ಟಿ ಡೇಟಾವನ್ನು ಇಡಿಸಿಎಸ್ (EDCS) ಸರ್ವರ್‌ಗಳಲ್ಲಿ ಅಪ್‌ಲೋಡ್ ಮಾಡಲಾಗುವುದು. ನಂತರ ದ್ವಿತೀಯ ದತ್ತಾಂಶಗಳನ್ನು ಆಧರಿಸಿ ಮೌಲೀಕರಿಸಿದ ಮನೆಪಟ್ಟಿ ಮ್ಯಾಪಿಂಗ್ ಮಾಡಲಾಗುತ್ತದೆ.

ಅಭಿವೃದ್ಧಿ ಪಡಿಸಲಾದ ಅಪ್ಲಿಕೇಷನ್‌ನಲ್ಲಿ ಮನೆಯ ಸ್ಥಳವನ್ನು ಸೆರೆಹಿಡಿಯಲಾಗುತ್ತದೆ ಮತ್ತು ಅಪಾರ್ಟ್‌ಮೆಂಟ್‌ಗಳು, ವಾಸ ಸ್ಥಳಗಳ ಕ್ಲಸ್ಟರ್ ಸೇರಿದಂತೆ ಪ್ರತಿ ಮನೆಗಳಿಗೆ ವಿಶಿಷ್ಟ (Unique Number) ಸಂಖ್ಯೆಯನ್ನು ನೀಡಲಾಗಿರುತ್ತದೆ. ವಿದ್ಯುತ್ ಬಿಲ್ಲ್ ನೀಡುವಾಗ ಮೀಟರ್ ರೀಡರ್‌ಗಳು ಆಗಸ್ಟ 23, 2025 ರಿಂದ ಪ್ರಾರಂಭಿಸಿ ಅಭಿವೃದ್ಧಿ ಪಡಿಸಲಾದ ಆ್ಯಪ್‌ನಲ್ಲಿ ಮನೆಗಳ ಮಾಹಿತಿಯನ್ನು ದಾಖಲಿಸಿದ್ದಾರೆ. ಮತ್ತು ಪ್ರತಿ ಮನೆಗೂ ಸ್ಟಿಕ್ಕರ್ ಅಂಟಿಸಿ ಸಮೀಕ್ಷಾದಾರರಿಗೆ ಮನೆಯ ಗುರುತಿಸುವಿಕೆ ಸುಲಭವಾಗುವಂತೆ ಮಾಡಿದ್ದಾರೆ. ಪ್ರಸ್ತಾವಿತ ಸಮೀಕ್ಷೆಯು ಹಿಂದುಳಿದ ವರ್ಗಗಳ ಮತ್ತು ಇತರ ಎಲ್ಲಾ ಜನರ ದತ್ತಾಂಶಗಳನ್ನು ಸಂಗ್ರಹಿಸಲು ಉಪಯೋಗವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಅಂದಾಜು ಒಟ್ಟು 5,46,012 ಕುಟುಂಬಗಳಿವೆ. ಈ ಪೈಕಿ ಪ್ರತಿ 150 ಮನೆಗಳಿಗೆ ಒಂದು ಬ್ಲಾಕ್ ರಚನೆ ಮಾಡಿ, ಪ್ರತಿ ಬ್ಲಾಕ್‌ಗೆ ಒಬ್ಬ ಗಣತಿದಾರರಂತೆ ಜಿಲ್ಲೆಯಲ್ಲಿ ಒಟ್ಟು 4,880 ಗಣತಿದಾರರನ್ನು ನೇಮಿಸಲಾಗಿದೆ. ಪ್ರತಿ 20 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರಂತೆ ಒಟ್ಟು 244 ಮೇಲ್ವಿಚಾರಕರನ್ನು ಹಾಗೂ ಪ್ರತಿ 50 ಗಣತಿದಾರರಿಗೆ ಒಬ್ಬ ಮಾಸ್ಟರ್ ಟ್ರೇನರ್‌ರಂತೆ ಜಿಲ್ಲೆಯಲ್ಲಿ 87 ಮಾಸ್ಟರ್ ಟ್ರೇನರ್‌ಗಳನ್ನು ಗುರುತಿಸಿ, ತರಬೇತಿ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ರಾಜ್ಯ ಮಟ್ಟದಲ್ಲಿ 05 ಮಾಸ್ಟರ್ ಟ್ರೇನರ್‌ಗಳಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಸಮೀಕ್ಷಾ ಕಾರ್ಯಕ್ಕೆ ಮುಖ್ಯವಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ-3,937 ಸಿಬ್ಬಂದಿಯವರನ್ನು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಇಲಾಖೆಯಿಂದ-238 ಸಿಬ್ಬಂದಿಯವರನ್ನು, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಿಂದ-326 ಸಿಬ್ಬಂದಿಯವರನ್ನು ಹಾಗೂ ಇತರೆ ಇಲಾಖೆಗಳಿಂದ 211 ಸಿಬ್ಬಂದಿಯವರನ್ನು ಸಮೀಕ್ಷಾ ಕಾರ್ಯಕ್ಕಾಗಿ ನಿಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಕಾರ್ಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು 60 ಪ್ರಶ್ನಾವಳಿಗಳ ಒಟ್ಟು 4.66 ಲಕ್ಷ ಮಾದರಿ ಕುಟುಂಬ ಅನುಸೂಚಿ ನಮೂನೆಗಳನ್ನು ಧಾರವಾಡ ಜಿಲ್ಲೆಗೆ ಹಂಚಿಕೆ ಮಾಡಲಾಗಿದೆ.

ಸಮೀಕ್ಷೆಯ ಸಮಯದಲ್ಲಿ ಅವಶ್ಯವಿರುವ ಕುಟುಂಬ ಮುಖ್ಯಸ್ಥರ ವಿವರ, ರೇಷನ ಕಾರ್ಡ, ಆಧಾರ ಕಾರ್ಡ ಹಾಗೂ ಆಧಾರ ಕಾರ್ಡಗೆ ಜೋಡಣೆಯಾಗಿರುವ ಮೊಬೈಲ್ ಸಂಖ್ಯೆ, ಕುಟುಂಬದ ಎಲ್ಲ ಸದಸ್ಯರ ಆಧಾರ ಸಂಖ್ಯೆ, ಚುನಾವಣಾ ಗುರುತಿನ ಚೀಟಿ, ವಿಶೇಷ ಚೇತನರಾಗಿದ್ದಲ್ಲಿ ಯು.ಡಿ.ಐ.ಡಿ. ನಂಬರ್, ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಿದ್ಯಾಭ್ಯಾಸದ ವಿವರಗಳು, ಮೀಸಲಾತಿ ಪಡೆದ ವಿವರಗಳು ಹಾಗೂ ಕೃಷಿ ಸಂಬಂಧಿಸಿದ ಚಟುವಟಿಕೆಗಳ ಮಾಹಿತಿಯನ್ನು ಮುಂಚಿತವಾಗಿ ತಯಾರಿಸಿಟ್ಟುಕೊಂಡು ಗಣತಿದಾರರಿಗೆ ನಿಗದಿತ ಅವಧಿಯಲ್ಲಿ ಮಾಹಿತಿಯನ್ನು ಒದಗಿಸಲು ಅನುಕೂಲವಾಗುವಂತೆ ಆಶಾ ಕಾರ್ಯಕರ್ತೆಯರಿಗೆ ನಮೂನೆಗಳನ್ನು ವಿತರಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ನಗರ ಪ್ರದೇಶಗಳಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಕಾಲೇಜು ವಿದ್ಯಾರ್ಥಿಗಳಿಂದ ಕುಟುಂಬದ, ನೆರೆಹೊರೆ ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜಾಗೃತಾ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

## ಸೆ. 23ರಂದು ರಾಷ್ಟ್ರೀಯ ಆಯುರ್ವೇದ ದಿನಾಚರಣೆ

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾಪಂಚಾಯತ, ಆಯುಷ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಕಾರವಾರ, ಆಯುಷ್ ವೈದ್ಯಾಧಿಕಾರಿಗಳ ಸಂಘ ಹಾಗೂ ನಗರಸಭೆ ಕಾರವಾರ ಸ್ಥಳೀಯ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಸೆ.23 ರಂದು ಬೆಳಗ್ಗೆ 10.30 ಗಂಟೆಗೆ ಕಾರವಾರದ ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೆಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೆಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.


ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಪ್ರಯುಕ್ತ ಸೆ.22 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆಯುಷ್ ಕಚೇರಿಯ ಮೊದಲನೆಯ ಮಹಡಿಯಲ್ಲಿ ಉಚಿತ ಆಯುಷ್ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆರೋಗ್ಯ ಶಿಬಿರದಲ್ಲಿ ಭಾಗವಹಿಸಿ, ಆರೋಗ್ಯ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಆಯುಷ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿಷ್ಯವೇತನಕ್ಕೆ ನೊಂದಣಿ ಪ್ರಾರಂಭ

**ಧಾರವಾಡ:** ಎನ್.ಎಮ್.ಎಮ್.ಎಸ್. ಶಾಲಾ (ನ್ಯಾಷನಲ್ ಮೀನ್ಸ ಕಂ ಮೆರಿಟ್ ಶಿಷ್ಯವೇತನ) ಪರೀಕ್ಷೆ-2025 ಗೆ 8ನೇ ತರಗತಿ ಓದುವ ಅರ್ಹ ವಿದ್ಯಾರ್ಥಿಗಳು ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು ಸುತ್ತೋಲೆಯ ಪ್ರಕಾರ ಲಾಗಿನ್‌ನಲ್ಲಿ ಅಕ್ಟೋಬರ್ 15 ರೊಳಗಾಗಿ ಹೆಸರು ನೋಂದಾಯಿಸಕೊಳ್ಳಬೇಕೆಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರುದ್ರಣ್ಣ ಚಂದರಗಿಗೆ ಅತ್ಯುತ್ತಮ ಪ್ರಶಸ್ತಿ ಪ್ರದಾನ

**ಬೆಳಗಾವಿ:** ನಗರದ ಹೊರವಲಯದಲ್ಲಿರುವ ಖಾಸಗಿ ಹೋಟೆಲ್ ನಲ್ಲಿ ಗುರುವಾರ ಸಂಜೆ ಪಿಡಿಲೈಟ್ ಇಂಡಸ್ಟ್ರೀಸ್ ವತಿಯಿಂದ ಆಯೋಜಿಸಲಾದ ಪಿಡಿಲೈಟ್ ಫಾಲ್ಕೋಫಿಕ್ಸ್ ಪ್ರಶಸ್ತಿ ( Pidilite Award for Excellence ) ಸಮಾರಂಭದಲ್ಲಿ ಬೆಳಗಾವಿ ಶ್ರೀ ಬಾಲಾಜಿ ಹಾರ್ಡ್ ವೇರ್ ಗ್ಯಾಲರಿಯ ಮಾಲೀಕರಾದ ರುದ್ರಣ್ಣ ಚಂದರಗಿ ಅವರಿಗೆ 2025-26 ನೇ ಸಾಲಿನ ಅತ್ಯುತ್ತಮ ಸಾಧನೆ ಪ್ರಶಸ್ತಿ ನೀಡಿ, ಗೌರವಿಸಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಚಿಫ್ ಸೆಲ್ಸ್ ಮತ್ತು ಮಾರ್ಕೆಟಿಂಗ್ ಶ್ರೀನಿವಾಸ್ ನಾಯ್ಡು ಅವರು ಮಾತನಾಡಿ, .1959ರಲ್ಲಿ ಆರಂಭವಾದ ಕಂಪನಿ ಗ್ರಾಹಕರ ಮನಮುಟ್ಟುವಲ್ಲಿ ಹಾಗೂ ವಿಶ್ವಾಸ ಉಳಿಸಿಕೊಳ್ಳುವಲ್ಲಿ ಯಶ್ವಸಿಯಾಗಿದೆ, ಅದೆಲ್ಲವೂ ನಮ್ಮ ವಿತಕರಿಂದ ಸಾಧ್ಯವಾಗಿದೆ. ಪಿಡಿಲೈಟ್ ಕಂಪನಿ ಏಳಿಗೆಗೆ ವಿತಕರ ಪಾತ್ರ ಮಹತ್ವದಾಗಿದೆ ಎಂದರು.

ಸಣ್ಣದಾಗಿ ಆರಂಭವಾದ ಪೆವಿಕ್ವಿಕ್ ಕಂಪನಿಯೂ ದೇಶದ ಮೂಲೆ ಮೂಲೆಯಲ್ಲಿ ತಲುಪುವಲ್ಲಿ ಮೇಲಾಧಿಕಾರಿಗಳು, ಸಿಬ್ಬಂದಿ, ವಿತರಕರ ಶ್ರಮ ಬಹಳಷ್ಟಿದೆ. 66 ವರ್ಷಗಳ ಅವಧಿಯಲ್ಲಿ ಮಾರಾಟಗಾರರ ಹಾಗೂ ಗ್ರಾಹಕರ ವಿಶ್ವಾಸ ಉಳಿಸಿಕೊಂಡಿದೆ. ಪೆವಿಕ್ವಿಕ್ ದಿಂದ ಪಿಡಿಲೈಟ್ ಫಾಲ್ಕೋಫಿಕ್ಸ್ ದಾಪುಗಾಲು ಇಡಲು ಕಂಪನಿಯ ಸಿಬ್ಬಂದಿ ಒಗ್ಗಟವೇ ಕಾರಣ, ದೇಶ ಸೇರಿದಂತೆ ಶೀಘ್ರವೇ ಪೂನಾದಲ್ಲಿ ಮತ್ತೊಂದು ಹೊಸದಾಗಿ ಕಂಪನಿಯ ಆರಂಭಸಲಿದೆ ಎಂದರು.

ಸಾವಿರಾರು ಜನರು ಈ ಕಂಪನಿಯಲ್ಲಿ ಕಾರ್ಯನಿರ್ವಸುತ್ತಿದ್ದಾರೆ. ಜೊತೆಗೆ ಕೋಟ್ಯಾಂತರ ಗ್ರಾಹಕರು ಪಿಡಿಲೈಟ್ ಫಾಲ್ಕೋಫಿಕ್ಸ್ ಉಪಯೋಗಿಸುತ್ತಿದ್ದಾರೆ. ಅದರಲ್ಲಿ 2004 ರಲ್ಲಿ ಕಂಪನಿಯು 1000 ಕೋಟಿ ಮಾರಾಟ ತಲುಪಿದೆ. ಗುಣಮಟ್ಟದೊಂದಿದೆ ಅಂತರಾಷ್ಟ್ರೀಯ ಕಂಪನಿಗಳಿಗೂ ಪೈಪೋಟಿ ನೀಡುತ್ತಿದೆ. ನಮ್ಮ ಕಂಪನಿಯ ತಯಾರಿಕೆಗೆ ಮೋದಿಯವರು ಕೂಡ ಶ್ಲಾಘನೀಯ ವ್ಯಕ್ತಪಡಿಸಿದಾರೆ. ಪಿಡಿಲೈಟ್ ಫಾಲ್ಕೋಫಿಕ್ಸ್ ನ್ನು

ಗೋಡೆಗಳಿಗೆ ಅಂಟಿಸಿದ ಎರಡು ಗಂಟೆಗಳಲ್ಲಿ ಗಟ್ಟಿಯಾಗಿ ಗೋಡೆಗಳನ್ನು ಅಂಟಿಕೊಂಡು ಸದೃಢವಾಗಬಲ್ಲದು. ಈ ಸಂದರ್ಭದಲ್ಲಿ ನಿರ್ದೇಶಕ ಭರತ್ ಹುಮಾವತ, ರುಪಾಂಗಜ್ ಗುಪ್ತಾ, ಜಯತ್ರಿಪಾಟಿ, ಉತ್ಪಾದನಾ ಮಾನ್ಯೇಜರ್ ಅಕ್ಷತ್ ಜೈನ್ , ಅಜೀತ, ವಿಜಯ ಮಾಹಾತೇಂಶ , ರಮೇಶ್ ನಾರಾಯಣಕರ್, ಶ್ರೀ ಬಾಲಾಜಿ ಹಾರ್ಡ್ ವೇರ್ ಗ್ಯಾಲರಿಯ ಮಾಲೀಕರಾದ ರುದ್ರಣ್ಣ ಚಂದರಗಿ , ಸಾಗರ ಪಸೊಕರ್, ಶಿವಾನಂದ , ನಾರಾಯಣ ಕುಲಕರ್ಣಿ ಹಾಗೂ ಇತರರು ಇದ್ದರು.

## ಬಸವಜ್ಯೋತಿ ಸಂಘಕ್ಕೆ 10.09 ಲಕ್ಷ ರೂ.ಲಾಭ



**ಮುದ್ದೇಬಿಹಾಳ:** ಜಾಮೀನುದಾರರು ಸಾಲಗಾರರಷ್ಟೇ ಜವಾಬ್ದಾರರಿದ್ದು ಸಾಲಗಾರನ ಅರ್ಹತೆ ನೋಡಿಕೊಂಡು ಆತನಿಗೆ ಸಹಿ ಹಾಕಬೇಕು ಎಂದು ಬಸವಜ್ಯೋತಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ಎಂ.ಇಸ್ಲಾಂಪೂರ ಹೇಳಿದರು.

ಪಟ್ಟಣದ ಬಸವ ನಗರದ ಗಾರ್ಡನದಲ್ಲಿ ಗುರುವಾರ ಬಸವಜ್ಯೋತಿ ಪತ್ತಿನ ಸಹಕಾರಿ ಸಂಘದ 17ನೇ ವಾರ್ಷಿಕ ಮಹಾಸಭೆಯಲ್ಲಿ ಅವರು ಮಾತನಾಡಿದರು. ಸಂಘದಿಂದ ನಿರಂತರ ವ್ಯವಹಾರ ಇರಿಸಿಕೊಂಡರೆ ಮತದಾನದ ಹಕ್ಕು, ಸಾಲ ಸೌಲಭ್ಯ ದೊರೆಯುತ್ತದೆ ಎಂದರು. ಸಂಘದ ಉಪಾಧ್ಯಕ್ಷ ಎಸ್.ಎಸ್.ಕಡಿ, ತಂಗಡಗಿ ಪಿಕೆಪಿಎಸ್ ಅಧ್ಯಕ್ಷ ಶ್ರೀಶೈಲ ಮರೋಳ, ನಿರ್ದೇಶಕರಾದ ಎ.ಎಸ್.ಕೋಟಿ, ಸಿ.ಎಂ.ಹಾವರಗಿ, ಜಿ.ಎಸ್.ಕಡಕೋಳ, ಸಿ.ಸಿ.ಬೇನಾಳ, ಎಸ್.ಜಿ.ಚಿತ್ತವಾಡಗಿ, ಎಂ.ಬಿ.ಕೋಲಕಾರ, ಎಂ.ಎಂ.ಗಂಜಿಹಾಳ, ಬಿ.ಬಿ.ಹೆಗಡೆ, ಸಂಘದ ಸಿಇಒ ಎಸ್.ಎಸ್.ಮಾಗಿ ಇದ್ದರು.

## ಮಕ್ಕಳ ರಕ್ಷಣಾ ನೀತಿ ಅನುಷ್ಠಾನ ಕಡ್ಡಾಯ

**ಕಾರವಾರ:** ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 (ಪರಿಷ್ಕರಣೆ 2023)ಯು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳ ವ್ಯಾಪ್ತಿಗೆ ಬರುವ ಅಥವಾ ನಡೆಸುವ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ರಹಿತ ವಸತಿ ನಿಲಯ/ಶಿಕ್ಷಣ ಸಹಿತ ವಸತಿ ನಿಲಯ ಅಥವಾ ಶಾಲೆ/ಕ್ರೀಡಾ ವಸತಿ ನಿಲಯ ಅಥವಾ ಶಾಲೆ/ ಅಂಗನವಾಡಿಗಳು/ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆ/ತೆರೆದ ತಂಗುದಾಣಗಳು/ಯಾವುದೇ ಶಿಕ್ಷಣ ಸಂಸ್ಥೆ/ವೃತ್ತಿಪರ ಕೋರ್ಸ್/ಕೋಚಿಂಗ್ ಕೇಂದ್ರ/ಐಟಿಐ ಕೋರ್ಸ್/ಪಾಲಿಟೆಕ್ನಿಕ್ ಕೋರ್ಸ್/ವಿವಿಧ ಇಲಾಖೆಯ ಅಡಿಯಲ್ಲಿ ನಡೆಯುವ ಡಿಪ್ಲೊಮಾ ಕೋರ್ಸ್/ವೃತ್ತಿ-ಸ್ವ-ಉದ್ಯೋಗ ತರಬೇತಿ ಅಥವಾ ಕೋಚಿಂಗ್ ಕೇಂದ್ರಗಳು/ಕಲೆ/ಚಿತ್ರಕಲೆ/ಕ್ರೀಡೆ/ನಾಟಕ/ಸಂಗೀತ/ಯೋಗ/ನೃತ್ಯ/ಡ್ಯಾನ್ಸ್ ತರಬೇತಿ ಶಾಲೆಗಳು/ಪ್ಯಾರಾ ಮೆಡಿಕಲ್ ಕೋಚಿಂಗ್ ಕೇಂದ್ರಗಳು/ಧಾರ್ಮಿಕ ಶಿಕ್ಷಣ ಕೇಂದ್ರಗಳು ಹಾಗೂ 18 ವರ್ಷದೊಳಗಿನ ಮಕ್ಕಳಿರುವ ಔಪಚಾರಿಕ ಅಥವಾ ಅನೌಪಚಾರಿಕ ಕೇಂದ್ರಗಳಿಗೆ ಅನ್ವಯಿಸುತ್ತದೆ ಹಾಗೂ ಇದನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕಾಗಿರುತ್ತದೆ.

ಎಲ್ಲಾ ಇಲಾಖೆಗಳ ಮುಖ್ಯಸ್ಥರು ತಮ್ಮ ಅಧೀನ ಕಛೇರಿಗಳಿಂದ ಮಕ್ಕಳ ರಕ್ಷಣಾ ನೀತಿಯನ್ನು ಸಿದ್ದಪಡಿಸಿದ ಮಾಹಿತಿಯನ್ನು ಕ್ರೋಢಿಕರಿಸಿ ಜಿಲ್ಲಾಧಿಕಾರಿಯವರಿಂದ ಅನುಮೋದನೆ ಪಡೆದುಕೊಳ್ಳಬೇಕು ಹಾಗೂ ಸಂಘ ಸಂಸ್ಥೆಗಳು ಮಕ್ಕಳ ರಕ್ಷಣಾ ನೀತಿಯನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಗೆ ಸಲ್ಲಿಸಬೇಕು. ಇದನ್ನು ಜಿಲ್ಲಾಧಿಕಾರಿಯವರಿಂದ ಅನುಮೋದನೆ ಪಡೆದು ಹಿಂದಿರುಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಉಮಾ ನೇತಲಕರ ಕಟ್ಟಡದ 2 ನೇ ಮಹಡಿ, ಹಬ್ಬುವಾಡ ಕಾರವಾರ ಕಚೇರಿಗೆ ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಚೆ ಕಛೇರಿಯಲ್ಲಿ ರೈಲ್ವೆ ಬುಕಿಂಗ್ ಆರಂಭಕ್ಕೆ ಮನವಿ

**ಜಮಖಂಡಿ:** ನಗರದ ಅಂಚೆ ಕಛೇರಿಯಲ್ಲಿ ರೈಲ್ವೆ ಟಿಕೆಟ್ ಬುಕಿಂಗ್ ಕಳೆದ ಕೆಲವು ತಿಂಗಳಿನಿಂದ ಸ್ಥಗಿತಗೊಂಡಿದ್ದು ಇದರಿಂದಾಗಿ ರೈಲ್ವೆ ಪ್ರಯಾಣಿಕರು ಅನಗತ್ಯ ತೊಂದರೆ ಎದುರಿಸುತ್ತಿದ್ದಾರೆ ಎಂದು ಸರಾಫ್ ಬಜಾರ ವ್ಯಾಪಾರಸ್ಥರು ಅಂಚೆ ಕಛೇರಿ ಮುಖ್ಯ ವ್ಯವಸ್ಥಾಪಕ ಎಸ್.ಎಸ್.ಮನ್ನಿಕೇರಿ ಮನವಿ ಸಲ್ಲಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೊದಲಿನ ರೀತಿಯಲ್ಲಿ ರೈಲ್ವೆ ಟಿಕೆಟ್ ಬುಕಿಂಗ್ ಕೌಂಟರ ತೆರದು ಸಾರ್ವಜನಿಕರಿಗೆ ಸೇವೆ ನೀಡಬೇಕು. ಹಿರಿಯ ಅಧಿಕಾರಿಗಳನ್ನು ಸಂಪರ್ಕಿಸಿ ಶೀಘ್ರದಲ್ಲಿ ಬುಕಿಂಗ್ ವ್ಯವಸ್ಥೆ ಮತ್ತೇ ಆರಂಭಿಸಲು ಒತ್ತಾಯಿಸಿದರು.

ಅಂಚೆ ಕಛೇರಿ ಮುಖ್ಯ ವ್ಯವಸ್ಥಾಪಕ ಎಸ್. ಎಸ್.ಮನ್ನಿಕೇರಿ ಮಾತನಾಡಿ, ತಾವು ನೀಡಿದ ಮನವಿಪತ್ರವನ್ನು ಮೇಲಾಧಿಕಾರಿಗಳಿಗೆ ಕಳುಹಿಸಿಕೊಡುವ ಮೂಲಕ ಶೀಘ್ರದಲ್ಲಿ ಆರಂಭಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಉಮೇಶ ಕೊಠಾರಿ, ರಮೇಶ ಮೆಹ್ತಾ, ಮುಖೇಶ ಜೈನ್, ಸಂದೀಪ ವರ್ಮಾ, ಬಾಲಕಿಸನ ವರ್ಮಾ, ದಾಮೋದರ ವರ್ಮಾ, ಸುರೇಶ ವರ್ಮಾ, ವಿಮಲ ಓಸ್ವಾಲ್, ಕಿರಣ ಓಸ್ವಾಲ್, ರಾಜೇಶ ಓಸ್ವಾಲ್, ನರೇಂದ್ರ ಭಂಡಾರಿ, ಮಂದರ ಓಸ್ವಾಲ್, ಪಿಂಟು ಓಸ್ವಾಲ್, ದರ್ಶನ ಓಸ್ವಾಲ್, ರಾಜೇಶ ಜೈನ್, ರಾಮದೇವ ವರ್ಮಾ, ಗೌರವ ವರ್ಮಾ ಸಹಿತ ಹಲವರು ಇದ್ದರು.



# ಬೆಳಗಾವಿ ಶುಗರ್ಸ ಕಾರ್ಖಾನೆಗೆ ಗೋಲ್ಡನ್ ಪ್ರಶಸ್ತಿ

**ಬೆಳಗಾವಿ:** ಸತೀಶ ಗ್ರುಪ್‌ನ ಬೆಳಗಾಂ ಶುಗರ್ಸ ಪ್ರೈವೇಟ್ ಲಿಮಿಟೆಡ್ ಸಕ್ಕರೆ ಕಾರ್ಖಾನೆಗೆ 2024-25 ನೇ ಸಾಲಿನ ಕರ್ನಾಟಕ ವಲಯದ ಗೋಲ್ಡನ್ಡ್ ಪ್ರಶಸ್ತಿಯನ್ನು ದಕ್ಷಿಣ ಭಾರತ ಕಬ್ಬು ಮತ್ತು ಸಕ್ಕರೆ ತಂತ್ರಜ್ಞರ ಸಂಸ್ಥೆ(ಸಿಸ್ಟಾ) ನೀಡಿ ಗೌರವಿಸಲಾಯಿತು.




ಬೆಳಗಾಂ ಶುಗರ್ಸ ಪ್ರೈವೇಟ್ ಲಿಮಿಟೆಡ್ ಸಕ್ಕರೆ ಕಾರ್ಖಾನೆಯು ರೈತರ ಅಭ್ಯುಧಯವನ್ನೆ ಗುರಿಯನ್ನಾಗಿಸಿಕೊಂಡು ತನ್ನ ಕಾರ್ಯಕ್ಷಮತೆಗೆ ತಕ್ಕಂತೆ ಪರ್ಯಾಪ್ತ ಪ್ರಮಾಣದ ಕಬ್ಬನ್ನು ಲಭ್ಯವಾಗಿಸಿಕೊಳ್ಳುವ ದೃಷ್ಟಿಯಿಂದ ತನ್ನ ಕಾರ್ಯಕ್ಷೇತ್ರದಲ್ಲಿ ವಿವಿಧ ಕಬ್ಬು ಅಭಿವೃದ್ಧಿ ಕ್ರಮಗಳನ್ನು ಕೈಗೊಳ್ಳುವ ಮೂಲಕ ಸುಧಾರಿತ ತಳಿಯ ಕಬ್ಬು ಅಭಿವೃದ್ಧಿ ಯೋಜನೆಗಳನ್ನು ಹಮ್ಮಿಕೊಂಡು ಹೆಚ್ಚಿನ ಇಳುವರಿ ಪಡೆಯುತ್ತಿರುವ ಕಾರ್ಯವನ್ನು ಪರಿಗಣಿಸಿ ಕರ್ನಾಟಕ ವಲಯದ ಅತ್ಯುತ್ತಮ ಕಬ್ಬು ಅಭಿವೃದ್ಧಿ ಕ್ಷೇತ್ರದಲ್ಲಿ ಗೋಲ್ಡನ್ಡ್ ಪ್ರಶಸ್ತಿಯನ್ನು ಚನ್ನೈನ ದಕ್ಷಿಣ ಭಾರತ ಕಬ್ಬು ಮತ್ತು ಸಕ್ಕರೆ ತಂತ್ರಜ್ಞರ ಸಂಸ್ಥೆಯು ಸೆ. 19 ರಂದು ಆಂಧ್ರ ಪ್ರದೇಶ ರಾಜ್ಯದ ತಿರುಪತಿಯಲ್ಲಿ ನಡೆದ 54ನೇ ವಾರ್ಷಿಕ ಸಮಾವೇಶದಲ್ಲಿ ಬೆಳಗಾಂ ಶುಗರ್ಸ ಪ್ರೈವೇಟ್ ಲಿಮಿಟೆಡ್ ಕಾರ್ಖಾನೆಯ ಹಿರಿಯ ಉಪಾಧ್ಯಕ್ಷರಾದ ಎಲ್.ಆರ್ ಕಾರಗಿ ಮತ್ತು ಕಬ್ಬು ವಿಭಾಗದ ಪ್ರಧಾನ ವ್ಯವಸ್ಥಾಪಕರಾದ ಎಸ್. ಆರ್ ಬಿರ್ಜೆ ಇವರು ಪ್ರಶಸ್ತಿಯನ್ನು ಸ್ವೀಕರಿಸಿದರು.

ಸಕ್ಕರೆ ಉದ್ಯಮದ ಕುರಿತು ವಿಶೇಷ ಅಧ್ಯಯನ, ತಾಂತ್ರಿಕತೆ ಅಭಿವೃದ್ದಿ ಹಾಗೂ ವಿವಿದ ವಿಷಯಗಳ ಮಾಹಿತಿ ಶಿಬಿರ ಏರ್ಪಡಿಸುವ ಮೂಲಕ ಸಕ್ಕರೆ ಉದ್ಯಮಕ್ಕೆ ಅತ್ಯಮೂಲ್ಯ ಕೊಡುಗೆ ಮತ್ತು ಪ್ರೋತ್ಸಾಹ ನೀಡುತ್ತಿರುವ ದಕ್ಷಿಣ ಭಾರತ ಕಬ್ಬು ಮತ್ತು ಸಕ್ಕರೆ ತಂತ್ರಜ್ಞರ ಸಂಸ್ಥೆಯು ಪ್ರತಿ ವರ್ಷ ದಕ್ಷಿಣ ಭಾರತದ ಎಲ್ಲ ಖಾಸಗಿ ಮತ್ತು ಸಹಕಾರಿ ಸಕ್ಕರೆ ಕಾರ್ಖಾನೆಗಳ ಕಾರ್ಯ ನಿರ್ವಹಣೆಯ ಮಾನದಂಡಗಳ ಮೌಲ್ಯಮಾಪನ ಮಾಡಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ ಕಾರ್ಖಾನೆಗಳಿಗೆ ಈ ಪ್ರಶಸ್ತಿ ನೀಡುವ ಮೂಲಕ ಪ್ರೋತ್ಸಾಹಿಸುತ್ತಿದೆ. ಸಂಸ್ಥಾಪಕ ಅಧ್ಯಕ್ಷರಾದ ಸತೀಶ ಜಾರಕಿಹೊಳಿಯವರ ಮಾರ್ಗದರ್ಶನದಲ್ಲಿ ಕಾರ್ಖಾನೆಯು ಏಳ್ಗೆಯನ್ನು ಸಾಧಿಸುತ್ತಿದ್ದು, ಕಾರ್ಖಾನೆಯ ಚೇರಮನ್ ಮತ್ತು ಸಿ.ಎಫ್.ಓ ರವರಾದ ಪ್ರದೀಪಕುಮಾರ ಇಂಡಿ ಅವರ ನೇತೃತ್ವದ ಆಡಳಿತ ಮಂಡಳಿಯ ನಿರ್ಣಯ, ರೈತ ಭಾಂದವರ ಸಹಕಾರ, ಅಧಿಕಾರಿಗಳ ಮತ್ತು ಕಾರ್ಮಿಕ ಹಾಗೂ ಸಿಬ್ಬಂದಿ ವರ್ಗದವರ ಪರಿಶ್ರಮದಿಂದ ಕಾರ್ಖಾನೆಯು ಈ ಪ್ರಶಸ್ತಿ ಪಡೆಯಲು ಪಾತ್ರವಾಗಿದೆ.

ಈ ಸಾಧನೆಯಲ್ಲಿ ಕಾರ್ಖಾನೆಯ ಕಾರ್ಮಿಕ ಹಾಗೂ ಸಿಬ್ಬಂದಿ ವರ್ಗದವರ ಶ್ರದ್ದೆ ಮತ್ತು ಶ್ರಮವು ಶ್ಲಾಘನೀಯವಾಗಿದೆ. ಕಾರ್ಖಾನೆಯ ಆಡಳಿತ ಮಂಡಳಿಯ ಪರವಾಗಿ, ಸಂಸ್ಥೆಯ ಎಲ್ಲ ವಿಭಾಗಗಳ ಮುಖ್ಯಸ್ಥರಿಗೂ, ಅಧಿಕಾರಿ ವರ್ಗದವರಿಗೂ, ತಾಂತ್ರಿಕ ಮತ್ತು ತಾಂತ್ರಿಕೇತರ ಸಿಬ್ಬಂದಿ ವ ಕಾರ್ಮಿಕ ವರ್ಗದವರಿಗೂ ಮತ್ತು ರೈತ ಭಾಂದವರಿಗೂ, ಹಣಕಾಸು ಸಂಸ್ಥೆಗಳಿಗೂ, ಗ್ರಾಹಕರಿಗೂ ಮತ್ತು ಕಾರ್ಖಾನೆಯ ಎಲ್ಲ ಶ್ರೇಯೋಭಿಲಾಷಿಗಳಿಗೂ ಧನ್ಯವಾದಗಳನ್ನು ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿಯೂ ಸಹ ಎಲ್ಲ ರೈತ ಭಾಂದವರು,ಕಾರ್ಮಿಕರು ಮತ್ತು ಸಿಬ್ಬಂದಿ ವರ್ಗದವರು ಹಾಗೂ ಕಬ್ಬು ತೋಡ್ನಿ ಮತ್ತು ಸಾರಿಗೆ ಮಕ್ತೆದಾರರು ಇನ್ನೂ ಹೆಚ್ಚಿನ ಸಹಕಾರವನ್ನು ನೀಡಿ ಸಂಸ್ಥೆಯ ಪ್ರಗತಿಗೆ ಶ್ರಮಿಸಬೇಕು ಎಂದು ಬೆಳಗಾಂ ಶುಗರ್ಸ ಚೇರಮನ್ ಮತ್ತು ಸಿ.ಎಪ್.ಓ ಪ್ರದೀಪಕುಮಾರ ಇಂಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಸೆ.30ರಂದು ಅಂಚೆ ಅದಾಲತ್

**ಕಾರವಾರ:** ಕಾರವಾರ ಅಂಚೆ ವಿಭಾಗದ 2024 ನೇ ಸಾಲಿನ 4 ನೇ ತ್ರೈಮಾಸಿಕ ಅಂಚೆ ಆದಾಲತ್ ಸೆ.30 ರಂದು ಮಧ್ಯಾಹ್ನ 3 ಗಂಟೆಗೆ ಅಂಚೆ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಕಾರವಾರ ವಿಭಾಗ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನಡೆಯಲಿದೆ.

ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲೂಕು ವ್ಯಾಪ್ತಿಗಳಲ್ಲಿರುವ ಅಂಚೆ ಸೇವೆಗಳಿಗೆ ಸಂಬಂಧಪಟ್ಟ ಸಲಹೆ, ಸೂಚನೆ ಮತ್ತು ದೂರುಗಳನ್ನು ಅಂಚೆ ಆದಾಲತ್‌ನಲ್ಲಿ ವಿಚಾರಣೆಗೆ ಎಂದು ಮೇಲ್ಬರಹ ಬರೆದು ಯಾವುದೇ ಅಂಚೆ ಕಚೇರಿಯಲ್ಲಿ ರವಾನೆಗಾಗಿ ಸಲ್ಲಿಸಬಹುದು. ಇಂತಹ ಲಕೋಟೆಗೆ ಅಂಚೆ ವೆಚ್ಚ ಭರಿಸುವ ಅಗತ್ಯವಿರುವುದಿಲ್ಲ. ಇಂತಹ ದೂರು ಮತ್ತು ಸಲಹೆ ಸೂಚನೆಗಳನ್ನು ಅಂಚೆ ಅಧೀಕ್ಷಕರು ಕಾರವಾರ ವಿಭಾಗ ಕಾರವಾರ ಇವರ ಕಾರ್ಯಾಲಯಕ್ಕೆ ಸೆ.29 ರ ವರೆಗೆ ತಲುಪುವಂತೆ ಕಳುಹಿಸಬೇಕು.

ಈ ವಿಭಾಗೀಯ ಅಂಚೆ ಆದಾಲತ್‌ನಲ್ಲಿ ಸಾಮಾನ್ಯ ಮಟ್ಟದ ಅಂದರೆ ಈ ವಿಭಾಗದ ಅಂಚೆ ಕಚೇರಿಗಳಿಂದ ಈಗ ಕೊಡುತ್ತಿರುವ ಸೇವೆಗಳಲ್ಲಿ ಇರುವ ಕೊರತೆಗಳನ್ನು ಮತ್ತು ಅವುಗಳನ್ನು ಸುಧಾರಿಸುವ ಸಲಹೆ ಸೂಚನೆಗಳನ್ನಷ್ಟೇ ಚರ್ಚಿಸಲಾಗುವುದು. ಇಲಾಖೆಯ ಕಾರ್ಯನೀತಿ ಧೋರಣೆಗಳ ಬಗ್ಗೆ ಸಲಹೆ ಸೂಚನೆಗಳನ್ನು ಈ ವಿಭಾಗೀಯ ಅಂಚೆ ಆದಾಲತನಲ್ಲಿ ಚರ್ಚಿಸಲಾಗುವುದಿಲ್ಲ. ಇಂತಹ ಕಾರ್ಯನೀತಿ ಧೋರಣೆಗಳ ಬಗ್ಗೆ ಸಲಹೆ ಸೂಚನೆಗಳನ್ನು ಬೇರೆ ಯಾವುದೇ ಸಮಯದಲ್ಲಿ ಬರೆದು ತಿಳಿಸಿದ್ದಲ್ಲಿ ಸಂಬಂಧಪಟ್ಟ ಮೇಲಾಧೀಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗುವುದು ಎಂದು ಕಾರವಾರ ವಿಭಾಗದ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

## ತಿರಸ್ಕೃತಗೊಂಡ ಪ್ರಸ್ತಾವನೆಗಳ ಪರಿಶೀಲನೆ

**ಕಾರವಾರ:** 2023 ರ ಮುಂಗಾರು ಹಂಗಾಮಿನ ಮರುವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ಅಡಿ ಈಗಾಗಲೇ ತೋಟಗಾರಿಕಾ ಇಲಾಖೆ/ ಸಂಬಂಧಿತ ಬ್ಯಾಂಕ್ ಗಳ ಮೂಲಕ ಕ್ಷೇತ್ರ ಪರಿಶೀಲನೆಗೊಂಡ, ಉತ್ತರ ಕನ್ನಡ ಜಿಲ್ಲೆಗೆ ಸಂಬಂಧಿತ ಒಟ್ಟೂ 180 ರೈತರ ಪ್ರಸ್ತಾವನೆಗಳು ಛಿಡಿಠಡಿ ಟ್ಟಚಿಣಚ್ಛಿ ಆದ ಕಾರಣ ತಿರಸ್ಕೃತಗೊಂಡಿದ್ದು, ಸದರಿ ಪ್ರಸ್ತಾವನೆಗಳ ವಿವರವುಳ್ಳ ಪಟ್ಟಿಯನ್ನು ಆಯಾ ತಾಲ್ಲೂಕಿನ ತೋಟಗಾರಿಕಾ ಇಲಾಖಾ ಕಛೇರಿ, ಸಂಬಂಧಿತ ಗ್ರಾಮ ಪಂಚಾಯತ ಕಛೇರಿಗಳು ಮತ್ತು ಕಂದಾಯ ಇಲಾಖೆಯ ಕಛೇರಿಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಲಾಗಿರುತ್ತದೆ.

ಈ ಬಗ್ಗೆ ರೈತರು ತಮ್ಮ ಆಕ್ಷೇಪಣೆಯನ್ನು ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರಿಗೆ ಅ.6 ರೊಳಗೆ ಸಲ್ಲಿಸಬಹುದಾಗಿದ್ದು, ರೈತರು ತಮ್ಮ ಪಟ್ಟಿಯನ್ನು ಪರಿಶೀಲಿಸಿಕೊಳ್ಳುವಂತೆ ಹಾಗೂ ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ತೋಟಗಾರಿಕಾ ಇಲಾಖಾ ಕಛೇರಿಯನ್ನು ಸಂಪರ್ಕಿಸುವಂತೆ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಮಕಾತಿಗೆ ಅರ್ಜಿ ಆಹ್ವಾನ

**ಹಾವೇರಿ:** ಹಾವೇರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಅರೆಕಾಲಿಕ ಸ್ವಯಂ ಸೇವಕರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಸೇವಾ ಮನೋಭಾವನೆಯೊಂದಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಸಾಮಾನ್ಯ ಜನರ ನಡುವೆ ಸೇತುವೆಯಾಗಿ ಕೆಲಸ ನಿರ್ವಹಿಸಲು ಬಯಸುವ ಹಾಲಿ-ನಿವೃತ್ತ ಶಿಕ್ಷಕರು ಸಮಾಜ ಸೇವೆಯಲ್ಲಿ ಆಸಕ್ತಿ ಹೊಂದಿದವರು, ಅಧ್ಯಾಪಕರು,ನಿವೃತ್ತ ನೌಕರರು, ರೈತರು, ಪಂಚಾಯಿತಿ ಸದಸ್ಯರು, ಯಾವುದೇ ಇಲಾಖೆಯ ನಿವೃತ್ತಿ ಹೊಂದಿದ ಸರಕಾರಿ ನೌಕರರು, ಹಿರಿಯ ನಾಗರೀಕರು, ಮಹಿಳೆಯರು, ತೃತೀಯ ಲಿಂಗಿಗಳು, ಎಸ್.ಸಿ. ಎಸ್.ಟಿ ವರ್ಗದವರು, ಸಾಮಾಜಿಕವಾಗಿ ಆರ್ಥಿಕವಾಗಿ ಹಿಂದುಳಿದವರು, ಎಂ.ಎಸ್.ಡಬ್ಬು ವಿದ್ಯಾರ್ಥಿಗಳು, ಅಂಗನವಾಡಿ ಸಹಾಯಕರು, ವೈದ್ಯರುಗಳು, ವಿದ್ಯಾರ್ಥಿಗಳು ಹಾಗೂ ಕಾನೂನು ವಿದ್ಯಾರ್ಥಿಗಳು, ರಾಜಕೀಯೇತರ ಹಾಗೂ ಸರ್ಕಾರೇತರ ಸಂಘ ಸಂಸ್ಥೆಗಳ ಸದಸ್ಯರು, ವಿಧವೆಯರು, ನಿವೃತ್ತ ಸೇನಾಧಿಕಾರಿಗಳು, ರಕ್ಷಣಾ ವಿಭಾಗದಲ್ಲಿ ಪ್ರಸ್ತುತ ಸೇವೆ ಸಲ್ಲಿಸುತ್ತಿರುವವರ ಸಂಗಾತಿ, ಮಕ್ಕಳು, ಅರ್ಜಿ ಸಲ್ಲಿಸಬಹುದಾಗಿದೆ. ಅರೆಕಾಲಿಕ ಸ್ವಯಂ ಸೇವಕರ ನೇಮಕಾತಿಗಾಗಿ ಸಮಿತಿ ರಚಿಸಿದ್ದು, ಅಗತ್ಯ ಬಿದ್ದಲ್ಲಿ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುತ್ತದೆ. ಅರೆಕಾಲಿಕ ಸ್ವಯಂ ಸೇವಕರ ಸೇವೆಗೆ ಯಾವುದೇ ವೇತನ ಅಥವಾ ಶುಲ್ಕ ಇರುವುದಿಲ್ಲ. ಆದರೆ ಕೆಲವೊಮ್ಮೆ ಗೌರವಧನಕ್ಕೆ ಅರ್ಹರಾಗಿರುತ್ತಾರೆ. ಆಸಕ್ತ ಅಭ್ಯರ್ಥಿಗಳು ತಮ್ಮ ಸಂಪೂರ್ಣ ಮಾಹಿತಿ ಹಾಗೂ ಸೂಕ್ತ ದಾಖಲೆಗಳು, ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಎರಡು ಭಾವಚಿತ್ರದೊಂದಿಗೆ ದಿನಾಂಕ 04-10-2025 ರೊಳಗಾಗಿ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಲ ಪ್ರಾಧಿಕಾರ, ನ್ಯಾಯಾಲಯಗಳ ಆವರಣ, ಹಾವೇರಿ ಈ ವಿಳಾಸಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾವೇರಿ ಈ ವಿಳಾಸದಲ್ಲಿ ಸಂಪರ್ಕಿಸಬಹುದೆಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶೈಲಜಾ ಎಚ್.ವಿ. ಅವರು ತಿಳಿಸಿದ್ದಾರೆ.

## ದರಪಟ್ಟಿ ಆಹ್ವಾನ

**ಹಾವೇರಿ:** ಗುಡ್ಡದ ಚನ್ನಾಪುರದ ಶ್ರೀ ಚನ್ನಕೇಶ ಸರ್ಕಾರಿ ಪಾಲಿಟೆಕ್ನಿಕ್‌ನ ಅನುಪಯುಕ್ತ ಉಪಕರಣ ಹಾಗೂ ಪಿಠೋಕರಣಗಳ ವಿಲೇವಾರಿಗೆ ದರಪಟ್ಟಿ ಆಹ್ವಾನಿಸಲಾಗಿದೆ. ಆಸಕ್ತರು ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿ ದಿನಾಂಕ 26-09-2025ರೊಳಗಾಗಿ ಪ್ರಾಂಶುಪಾಲರು, ಶ್ರೀ ಚನ್ನಕೇಶ ಸರ್ಕಾರಿ ಪಾಲಿಟೆಕ್ನಿಕ್, ಗುಡ್ಡದ ಚನ್ನಾಪುರದ- ಬಂಕಾಪೂರ, ತಾ.ಶಿಗ್ಗಾಂವ ಈ ವಿಳಾಸಕ್ಕೆ ಸಲ್ಲಿಸಲು ಕೋರಲಾಗಿದೆ.

### ಅರ್ಧ ಶತಮಾನದ ಮಹಾಲಿಂಗಪುರದ ಗ್ರಂಥಾಲಯ ದುರ್ಗಂಧದ ಮಧ್ಯೆ ಅನಾಥ

# ಗಬ್ಬು ವಾಸನೆ ನಡುವೆ ಮೂಗು ಮುಚ್ಚಿಕೊಂಡು ಓದಬೇಕು

**ವರದಿ ಶಿವಲಿಂಗ ಸಿದ್ನಾಳ**

**ಮಹಾಲಿಂಗಪುರ:** ಗ್ರಂಥಾಲಯ ತೆರದರೆ ಕ್ರಾಂತಿಕಾರಿಗಳು ಹುಟ್ಟುತ್ತಾರೆ, ಮದ್ಯಾಲಯ (ಸಾರಾಯಿ ಅಂಗಡಿ) ತೆರೆದರೆ ಗುಲಾಮರು ಹುಟ್ಟುತ್ತಾರೆ. ಸರಕಾರಕ್ಕೆ ಕ್ರಾಂತಿಕಾರಿಗಳು ಬೇಕಾಗಿಲ್ಲ, ಗುಲಾಮರು ಬೇಕು. ಅಂತಲೇ ಎಲ್ಲೆಂದರಲ್ಲಿ ಸಾರಾಯಿ ಅಂಗಡಿ ತೆರೆಯಲು ಜಾಗ ಸಿಗುತ್ತದೆ. ಆದರೆ ಗ್ರಂಥಾಲಯ ತೆರೆಯಲು ಇಂದಿಗೂ ಜಾಗ ಸಿಗುತ್ತಿಲ್ಲ ಎಂಬ ಮಾತಿಗೆ ಸಾಕ್ಷಿಯಾಗಿ ಮಹಾಲಿಂಗಪುರ ಗ್ರಂಥಾಲಯಕ್ಕೆ ಅನಾಥ ಪ್ರಜ್ಞೆ ಕಾಡುತ್ತಿದೆ.

ಪಟ್ಟಣದಲ್ಲಿ ಓದುವ ಜನರಿದ್ದರೂ ಓದಿಗೆ ಪೂರಕ ವಾತಾವರಣವಿಲ್ಲದೇ ಅರ್ಧ ಶತಮಾನದ ಗ್ರಂಥಾಲಯ ದುರ್ಗಂಧದ ಮಧ್ಯೆ ದುಃಸ್ಥಿತಿಯಲ್ಲಿದೆ.

**ಅರ್ಧ ಶತಮಾನವಾದರೂ ಅನಾಥ:**

ಅಂದಾಜು 60 ವರ್ಷಗಳ ಹಿಂದೆ ಪಂಡಿತಪ್ಪ ಅಂಬಿ ಮನೆಯಲ್ಲೇ ಆರಂಭಿಸಿದ್ದ ಗ್ರಂಥಾಲಯ 1966ರಲ್ಲಿ ಪುರಸಭೆ ವತಿಯಿಂದ ಮುಂದುವರೆಯಿತು. 1988ರಿಂದ ಗ್ರಂಥಾಲಯ ಇಲಾಖೆ ಮುನ್ನಡೆಸುತ್ತಿದೆ. ಪುರಸಭೆ ಆವರಣದಲ್ಲಿದ್ದ ಗ್ರಂಥಾಲಯ 2008 ರಲ್ಲಿ ಪುರಸಭೆಯ ನೂತನ ಕಟ್ಟಡ ನಿರ್ಮಾಣದ ನೆಪದಲ್ಲಿ ಪಕ್ಕದ ಹಳೇ ಆಸ್ಪತ್ರೆಯ ಕೊಠಡಿಗೆ ಸ್ಥಳಾಂತರಗೊಂಡಿತು. ಅದೂ ಕೂಡ ಮಳೆಗೆ ಸೋರುವ ಶಿಥಿಲ ಕಟ್ಟಡವಾಗಿತ್ತು.



**ಫಿಶ್ ಮಾರ್ಕೆಟ್‌ನಲ್ಲಿ ಗಬ್ಬೆದ್ದ ಗ್ರಂಥಾಲಯ:**

ನಾಲ್ಕು ವರ್ಷಗಳ ಹಿಂದೆ ಗ್ರಂಥಾಲಯವನ್ನು ಮತ್ತೆ ಜೋಡು ರಸ್ತೆಯಲ್ಲಿನ ಪುರಸಭೆ ವಾಣಿಜ್ಯ ಮಳಿಗೆಗೆ ಯತ್ತಂಗಡಿ ಮಾಡಲಾಯಿತು. ಅಲ್ಲೂ ಕೂಡ ಗ್ರಂಥಾಲಯದ ಎದುರೇ ತರಕಾರಿ ಸೌದಾ ಹಾಗೂ ಮೀನು ಮಾಂಸ ಮಾರಾಟ ನಡೆವುದರಿಂದ ದುರ್ಗಂಧಕ್ಕೆ ಓದುಗರು ಮೂಗು ಮುಚ್ಚಿಕೊಂಡು ಪತ್ರಿಕೆ ಓದುವಂತಾಗಿದೆ. 58 ವರ್ಷವಾದರೂ ಗ್ರಂಥಾಲಯ ಈಗಲೂ ಅನಾಥವಾಗಿದೆ. 30 ಸಾವಿರ ಪುಸ್ತಕಗಳು, 15 ದಿನಪತ್ರಿಕೆಗಳು, ಸಾವಿರಾರು ಓದುಗರು ಕೂಡ ಅತಂತ್ರ ಸ್ಥಿತಿ ಅನುಭವಿಸುವಂತಾಗಿದೆ.

ಗ್ರಂಥಾಲಯ ಇಲಾಖೆ ಮತ್ತು ಪುರಸಭೆಯ ನಿರ್ಲಕ್ಷ್ಯದಿಂದ ಸಾರ್ವಜನಿಕ ಗ್ರಂಥಾಲಯ ಅನಾಥವಾಗಿದೆ. ಇನ್ನಾದರೂ ಸಂಬಂಧಪಟ್ಟವರು ಗ್ರಂಥಾಲಯಕ್ಕೊಂದು ಶಾಶ್ವತ ಸೂರು ಕಲ್ಪಿಸಬೇಕು. ಪುರಸಭೆಯವರು ಮಳಿಗೆಗಳಿಂದ ಬರೀ ಲಾಭ ಗಳಿಸುವ ಉದ್ದೇಶ ಇಟ್ಟುಕೊಳ್ಳಬಾರದು. ಇಂಥ ಗ್ರಂಥಾಲಯಕ್ಕೂ ಆಶ್ರಯ ನೀಡಬೇಕು ಎಂದು ನ್ಯಾಯವಾದಿ ಸುರೇಶ ಮಡಿವಾಳ, ಸಿ.ಐ.ಕೊಳಕಿ, ಮಹಾದೇವ ನೇಸೂರ, ರಾಜಪ್ಪ ಲೋಣಿ, ಮಹಾದೇವ ನೇಸೂರ, ಎಂ.ಪಿ.ಹುಕ್ಕೇರಿ, ಆರ್.ಎಸ್. ಯಕ್ಸಂಬಿ, ಎಂ.ಎಂ.ಅಂಬಿ, ಉಸ್ಮಾನ ನಾಲಬಂದ ಸೇರಿದಂತೆ ನಿಯಮಿತ ಓದುಗರು ಆಗ್ರಹಿಸಿದ್ದಾರೆ.

### ಜಾಗಕ್ಕೆ ಒತ್ತುವರಿ ಕಾಟ

ಗ್ರಂಥಾಲಯಕ್ಕೆ ಶಾಶ್ವತ ಸೂರು ಕಲ್ಪಿಸಲು ಇಲ್ಲಿನ ದುರ್ಗಾದೇವಿ ಗುಡಿ ಬಳಿಯ 167.22 ಚಮೀ ಪುರಸಭೆ ಜಾಗವನ್ನು ಗ್ರಂಥಾಲಯ ಇಲಾಖೆ 30 ವರ್ಷ ಲೀಜ್ ಪಡೆದು 12.60 ಲಕ್ಷ ರೂ. ಲೀಜ್ ಮೊತ್ತವನ್ನೂ ಭರ್ತಿ ಮಾಡಿದೆ. ವರ್ಷಗಳ ಹಿಂದೆ ಜಮಖಂಡಿ ಎಸಿ ಸಾಹೇಬ್ರು ಅಲ್ಲಿ ಗ್ರಂಥಾಲಯ ಇಲಾಖೆಯ ಜಾಗೆ ಎಂದು ಫಲಕ ಅಳವಡಿಸಿದ್ದರು. ಆದರೆ ಈಗ ಅಲ್ಲಿ ಆ ಫಲಕವೇ ಇಲ್ಲ.

> ಗ್ರಂಥಾಲಯಕ್ಕಾಗಿ ಲೀಜ್ ಪಡೆದ ಜಾಗದಲ್ಲಿ ಅಳವಡಿಸಿದ್ದ ಇಲಾಖೆಯ ಫಲಕವನ್ನು ಸ್ಥಳೀಯರು ಹಲವು ಬಾರಿ ತೆರವುಗೊಳಿಸಿದ್ದರು. ಮತ್ತೆ ಮತ್ತೆ ಮತ್ತೆ ಅಳವಡಿಸಿ ಬಂದರೂ ಅಲ್ಲಿಯವರು ಫಲಕ ಕಿತ್ತೊಗೆದು ಜಾಗ ಒತ್ತುವರಿ ಮಾಡಿದ್ದಾರೆ. ಗ್ರಂಥಾಲಯಕ್ಕೆ ಶಾಶ್ವತ ಸೂರು ಬೇಕಾಗಿದೆ.
>
> **-ಶಿವಾನಂದ ಮನಗುತ್ತಿ, ಗ್ರಂಥಪಾಲಕ, ಮಹಾಲಿಂಗಪುರ**

## ಅಂತರಜಿಲ್ಲಾ ಬೈಕ್ ಕಳ್ಳನ ಬಂಧನ




**ಜಮಖಂಡಿ:** ನಗರಠಾಣೆ ಆರಕ್ಷಕರು ಹದ್ದಿನ ಕಣ್ಣಿನ ರೀತಿಯಲ್ಲಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿದ್ದು ಬಾಗಲಕೊಟೆ, ವಿಜಯಪುರ, ಬೆಳಗಾವಿ ಜಿಲ್ಲೆಗಳಲ್ಲಿ ಬೈಕ ಕಳ್ಳತನ ಮಾಡಿದ ವ್ಯಕ್ತಿಯನ್ನು ಬಂಧಿಸುವಲ್ಲಿ ಯಶಸ್ವಿ ಆಗಿದ್ದಾರೆಂದು ಬಾಗಲಕೊಟೆ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಸಿದ್ದಾರ್ಥ ಗೊಯಲ್ ಹೇಳಿದರು.

ನಗರಠಾಣೆಯ ಆವರಣದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಂಧಿತನಿಂದ ವಿವಿಧ ಕಂಪನಿಗಳ ಅಂದಾಜು 11 ಲಕ್ಷ ಮೌಲ್ಯದ 24 ಬೈಕಗಳನ್ನು ವಶ ಪಡಿಸಿಕೊಂಡು ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ನ್ಯಾಯಾಂಗ ವಶಕ್ಕೆ ನೀಡಲಾಗಿದೆ. ಕಳೆದ 15 ದಿನಗಳ ಹಿಂದೆ, ಜಮಖಂಡಿ ಗ್ರಾಮೀಣ ಠಾಣೆ ಆರಕ್ಷಕರು 22 ಬೈಕ ಕಳ್ಳತನ ಮಾಡಿದ್ದ ಆರೋಪಿಯನ್ನು ಬಂಧಿಸಿದ್ದರು ಎಂದರು.

ಹನುಮಾನ ದೇವಸ್ಥಾನದ ಎದುರು ನಿಲ್ಲಿಸಲಾಗಿದ್ದ ತಾಲೂಕಿನ ಸಿದ್ದಾಪುರ ಗ್ರಾಮದ ಯಲ್ಲಪ್ಪ ಕಾಗವಾಡ ಎಂಬುವರ ಬೈಕ ಅಗಸ್ಟ 7 ರಂದು ಕಳ್ಳತನವಾಗಿತ್ತು. ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದ ನಗರಠಾಣೆ ಆರಕ್ಷಕರು ಡಿವೈ.ಎಸ್.ಪಿ. ರೋಶನಜಮೀರ, ಸಿಪಿಐ ಮಲ್ಲಪ್ಪ ಮಡ್ಡಿ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ತಾಲೂಕಿನ ಮಧುರಖಂಡಿ ಗ್ರಾಮದ ನಿವಾಸಿ ಲಕ್ಕಪ್ಪ ಮಾದರ ಆರೋಪಿಯನ್ನು ಬಂಧಿಸಿದ್ದಾರೆ. ಬಂಧಿತನಿಂದ 24 ಬೈಕಗಳನ್ನು ವಶಪಡಿಸಿಕೊಂಡಿದ್ದಾರೆ. ಜಮಖಂಡಿ ರಬಕವಿ-ಬನಹಟ್ಟಿ, ಮುಧೋಳ, ಬೆಳಗಾವಿ ಜಿಲ್ಲೆ ಸವದತ್ತಿ, ಮುರಗೋಡ, ವಿಜಯಪುರ ಜಿಲ್ಲೆ ಬಬಲೇಶ್ವರ, ಗಾಂಧಿಚೌಕ, ಬಸವನಬಾಗೇವಾಡಿ ಠಾಣಾ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ದ ಆರೋಪಿಯನ್ನು ಬಂಧಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಅಪರಾಧ ವಿಭಾಗದ ಪಿಎಸೈ ಎನ್.ಕೆ.ಕಾಜಗಾರ, ನಗರಠಾಣೆ ಪಿಎಸೈ ಅನೀಲ ಕುಂಬಾರ, ಆರಕ್ಷಕರಾದ ಪ್ರಕಾಶ ಹೊಸಮನಿ, ಸಂಗಪ್ಪ ಕೊಠಿ, ಪರಶುರಾಮ, ಘಾಟಗೆ, ಮುತ್ತಪ್ಪ ಮಾಂಗ, ರಾಜು ಪೂಜಾರಿ, ರಾಜಶೇಖರ ಮನಗೂಳಿ ಸಹಿತ ಹಲವರಿದ್ದರು ಎಂದರು.

ಇದೇ ಸಂದರ್ಭದಲ್ಲಿ ಡಿವೈಎಸ್.ಪಿ. ರೋಶನ ಜಮೀರ, ಜಮಖಂಡಿ ವೃತ್ತ ಸಿಪಿಐ ಮಲ್ಲಪ್ಪ ಮಡ್ಡಿ, ಮುಧೋಳ ವೃತ್ತ ಸಿಪಿಐ ಶಿರಹಟ್ಟಿ, ನಗರಠಾಣೆ ಪಿಎಸೈ ಅನೀಲ ಕುಂಬಾರ, ಅಪರಾಧ ವಿಭಾಗ ಪಿಎಸೈ ಎನ್.ಕೆ. ಕಾಜಗಾರ, ಗ್ರಾಮೀಣಠಾಣೆ ಪಿಎಸೈ ಪೂಜಾರಿ ಇದ್ದರು.

## ಮಾತೃ ಭಾಷೆ ಪ್ರೀತಿಸಿ, ಹಿಂದಿ ಗೌರವಿಸಿ

**ಮುಧೋಳ:** ಆಧುನಿಕ ಯುಗದಲ್ಲಿ ಉದ್ಯೋಗ ಮತ್ತು ಸಮೂಹ ಸಂವಹನಕ್ಕೆ ಕನ್ನಡ, ಇಂಗ್ಲೀಷ ಹಾಗೂ ಹಿಂದಿ ಭಾಷೆ ಅತ್ಯಂತ ಅವಶ್ಯಕ ಭಾಷೆಗಳಾಗಿವೆ. ಪ್ರಾದೇಶಿಕವಾಗಿ ಭಾಷೆಯ ಚಹರೆಗಳು ಪಲ್ಲಟವಾಗುತ್ತಿದ್ದು ಭಾಷೆಯ ಗೊತ್ತು ಗುರಿಗಳನ್ನು ಅರಿತುಕೊಂಡು ಸಮಾಜದಲ್ಲಿ ಎಲ್ಲರ ಜೊತೆಗೆ ಬೆರೆಯಲು ಮಾತೃ ಭಾಷೆಯೊಂದಿಗೆ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಭಾಷೆಗಳನ್ನೂ ಗೌರವಿಸಿ ಎಂದು ಪ್ರೊ.ಎಲ್.ಎಚ್. ಅತ್ತಾರ ಹೇಳಿದರು.

ದಾನಮ್ಮದೇವಿ ಮಹಿಳಾ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ "ಹಿಂದಿ ದಿವಸ" ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿದರು. ಪಬ್ಲಿಕ್ ಶಾಲೆಯ ಪ್ರಾಚಾರ್ಯ ಶಶೀಧರ ಕುಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿ ಪ್ರತಿಯೊಬ್ಬರಿಗೂ ಭಾಷೆ ಅತ್ಯವಶ್ಯಕ. ಮಾತೃಭಾಷೆಯೊಂದಿಗೆ ರಾಷ್ಟ್ರ ಭಾಷೆಯಾದ ಹಿಂದಿ ಭಾಷೆಯ ಕಲಿಕೆಯಿಂದ ವ್ಯವಹರಿಸಲು ಸಹಕಾರಿಯಾಗುತ್ತದೆ" ಎಂದು ಹೇಳಿದರು.

ತುಮಕೂರಿನ ಸಿ.ಪಿ.ಐ ಐ.ಎಸ್. ಗುರುನಾಥ ಭಾಷೆಯ ಕಲಿಸುವ ಪ್ರಾಧ್ಯಾಪಕರು ಭಾಷೆಯ ಮಹತ್ವ ಅರಿತಿರಬೇಕು. ಭಾಷೆಯ ಜೊತೆಗೆ ಭಾವವೂ ಬೆರೆಸಿದರೆ ಬೋಧನೆ ಸಾರ್ಥಕ ಎಂದು ಹೇಳುತ್ತಾ ಮಕ್ಕಳಿಗೆ ಕಾನೂನಿನ ಅರಿವು ಮೂಡಿಸಿದರು. ಪ್ರೊ. ಎಮ್.ಎಮ್.ಹಿರೇಮಠ ಮಾತನಾಡಿ, ಭಾಷೆ ನಿಂತ ನೀರಲ್ಲ ಅದು ಸದಾ ಹರಿಯುವ ಜೀವಂತವಾಹಿಯಾಗಿದೆ. ಭಾಷೆ ಎನ್ನುವುದು ಒಂದು ಬೆಳಕು ಇದ್ದಂತೆ, ಮನದ ಭಾವವಗಳು ಅರ್ಥವಾಗುವುದು ಭಾಷೆಯ ಮೂಲಕವಾಗಿದ್ದು ಎಲ್ಲ ಭಾಷೆಗಳ ಅರಿವು ಅಗತ್ಯ ಎಂದರು.

ಡಾ. ರಮ್ಯಾ ನಾಯಕ ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಕು. ರವಿನಾ ಚೌದರಿ ವಂದಿಸಿದರು. ಪ್ರೊ ಎಮ್.ಎಸ್. ಲಂಗೋಟಿ ನಿರುಪಿಸಿದರು, ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎಲ್ಲಾ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಎಲ್ಲ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.



## ರೋಗಿಗಳಿಗೆ ಹಣ್ಣು-ಹಂಪಲ ವಿತರಣೆ



**ಜಮಖಂಡಿ:** ನಗರದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 75ನೇ ವರ್ಷದ ಜನ್ಮದಿನ ನಿಮಿತ್ತ ರೋಗಿಗಳಿಗೆ ಹಣ್ಣು-ಹಂಪಲ, ಹಾಲು ವಿತರಿಸುವ ಮೂಲಕ ಸಂತಸದಿಂದ ಸಂಭ್ರಮದಿಂದ ಆಚರಿಸಿದರು.

ಇದೇ ಸಂದರ್ಭದಲ್ಲಿ ಬಿಜಪಿ ಮಹಿಳಾ ಮೋರ್ಚಾ ಜಿಲ್ಲಾ ಉಪಾಧ್ಯಕ್ಷೆ, ಸ್ರೀರೋಗ ತಜ್ಞೆ ಡಾ. ವಿಜಯಲಕ್ಷ್ಮೀ ತುಂಗಳ, ಮಹಿಳಾ ಘಟಕ ಮುಖ್ಯಸ್ಥರಾದ ರಾಜೇಶ್ವಿ ಹಿರೇಮಠ, ಗೀತಾ ಸೂರ್ಯವಂಶಿ, ಶ್ರೀಶೈಲ ಗಡಾದ ಸಹಿತ ಹಲವರು ಇದ್ದರು.

## ಸಾಧಕ ರೈತ ಪ್ರಶಸ್ತಿಗೆ ಮಲ್ಲಿನಾಥ ಆಯ್ಕೆ

**ಜಮಖಂಡಿ:** ಕೃಷಿ ವಿಶ್ವವಿದ್ಯಾಲಯ, ಧಾರವಾಡವು ಆಯೋಜಿಸಿದ್ದ ನಾಲ್ಕು ದಿನಗಳ ಕೃಷಿ ಮೇಳ 2025 ಕಾರ್ಯಕ್ರಮವು ಸೆಪ್ಟೆಂಬರ್ 13ರಿಂದ 16ರವರೆಗೆ ವಿಜೃಂಭಣೆಯಿಂದ ನಡೆಯಿತು.

ಈ ಮೇಳವು ನೂರಾರು ರೈತರನ್ನು, ತಾಂತ್ರಿಕ ತಜ್ಞರನ್ನು ಹಾಗೂ ಕೃಷಿ ಕ್ಷೇತ್ರದ ಉತ್ಸಾಹಿಗಳನ್ನು ಒಂದೆಡೆ ಸೇರಿಸುವ ವೇದಿಕೆಯಾಗಿತ್ತು. ಮೇಳದ ಮುಖ್ಯ ವೇದಿಕೆಯಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ, ಜಮಖಂಡಿ ತಾಲೂಕಿನ ಮುತ್ತೂರ ಗ್ರಾಮದ ಮಲ್ಲಿನಾಥ ಭುಜಬಲಿ ಪಡಸಲಗಿ ಅವರನ್ನು "ಜಿಲ್ಲಾ ಮಟ್ಟದ ಆವಿಷ್ಕಾರಿ ಮತ್ತು ಸಾಧಕ ರೈತ" ಪ್ರಶಸ್ತಿಗೆ ಆಯ್ಕೆ ಮಾಡಿದರು .ಈ ಪ್ರಶಸ್ತಿಯನ್ನು ಮಾನ್ಯ ವಿಸ್ತರಣಾ ನಿರ್ದೇಶಕರು ಮತ್ತು ಅಧ್ಯಕ್ಷ ಡಾ. ಎಂ. ವಿ. ಮಂಜುನಾಥ ಹಾಗೂ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ. ಎಲ್. ಪಾಟೀಲ ಅವರ ಸಮ್ಮುಖದಲ್ಲಿ ಪ್ರದಾನ ಮಾಡಲಾಯಿತು. ಮಲ್ಲಿನಾಥ ಪಡಸಲಗಿ ಅವರು ತಮ್ಮ ಕೃಷಿ ಕ್ಷೇತ್ರದ ಸಾಧನೆಗಳ ಮೂಲಕ ಇತರ ರೈತರಿಗೆ ಮಾದರಿಯಾಗಿದ್ದಾರೆ. ಅವರು ನವೀನ ತಾಂತ್ರಿಕತೆಗಳನ್ನು ಅಳವಡಿಸಿಕೊಂಡು, ಕೃಷಿಯಲ್ಲಿ ಉತ್ತಮ ಉತ್ಪಾದನೆ ಸಾಧಿಸಿರುವುದರ ಜೊತೆಗೆ, ತಮ್ಮ ಅನುಭವಗಳನ್ನು "ರೈತರಿಂದ ರೈತರಿಗಾಗಿ" ಎಂಬ ಮೇಳದ ತಾತ್ಪರ್ಯಕ್ಕೆ ಅನುಗುಣವಾಗಿ ಹಂಚಿಕೊಂಡರು. ಮೇಳದ ಮಳಿಗೆಯಲ್ಲಿ ಬಳಸಿದ ತಾಂತ್ರಿಕ ವಿಧಾನಗಳು, ಸಾಧನೆಗಳ ಪ್ರದರ್ಶನವೂ ಗಮನ ಸೆಳೆಯಿತು.

## ದೀಕ್ಷಾ ಭೂಮಿ ಯಾತ್ರೆ: ಅವಧಿ ವಿಸ್ತರಣೆ

**ಕಾರವಾರ:** ಪ್ರಸುತ್ತ ಸಾಲಿನ ಅಕ್ಟೋಬರ್ 2 ರಂದು (ವಿಜಯ ದಶಮಿ ದಿನ) ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾ ಭೂಮಿಯಲ್ಲಿ ನಡೆಯವ ಪ್ರವರ್ತನ ಕಾರ್ಯಕ್ರಮಕ್ಕೆ ಸೆಪ್ಟಂಬರ್ 30 ರಿಂದ ಅಕ್ಟೋಬರ್ 4 ರವರೆಗೆ ಪ್ರತಿ ವರ್ಷದಂತೆ ಕರ್ನಾಟಕ ರಾಜ್ಯದಿಂದ ಡಾ. ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಇಲಾಖೆ ವತಿಯಿಂದ ನಾಗಪುರ ದೀಕ್ಷಾ ಭೂಮಿಗೆ ಯಾತ್ರೆ ಕೈಗೊಳ್ಳಲು ಸಾರಿಗೆ ವ್ಯವಸ್ಥೆ ಕಲ್ಪಿಸುವ ಸಂಬಂಧ ಅರ್ಹ ಯಾತ್ರಾರ್ಥಿಗಳನ್ನು ಆಯ್ಕೆ ಮಾಡಲು ಸೆಪ್ಟಂಬರ್ 21 ರವರೆಗೆ ಆನ್‌ಲೈನ್ https://swd.karnataka.gov.in ಮೂಲಕ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ. ಉತ್ತರ ಕನ್ನಡ ಜಿಲ್ಲೆಯಿಂದ ಹೊರಡುವ ಆಸಕ್ತರು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

## ಕುಮಟಾ: ವಿದ್ಯುತ್ ವ್ಯತ್ಯಯ

**ಕಾರವಾರ:** ಹೆಸ್ಕಾಂ, ಕುಮಟಾ ಉಪವಿಭಾಗದ ಗ್ರಾಮೀಣ ಶಾಖೆಯ ವ್ಯಾಪ್ತಿಯ 11ಕೆ.ವಿ ಮಿರ್ಜಾನ್ ಫೀಡರಿನ ಮಾರ್ಗದಲ್ಲಿ ಹೊಸ 11ಕೆ.ವಿ ಮಾರ್ಗವನ್ನು ನಿರ್ಮಿಸುವ ಕಾರ್ಯವಿರುವುದರಿಂದ ಮಿರ್ಜಾನ್, ದುಂಡಕುಳಿ, ಯಲವಳ್ಳಿ, ಕೋಡ್ಕಣಿ, ಖಂಡಗಾರ, ಬರಗದ್ದೆ, ನಾಗೂರ ಭಾಗಗಳಲ್ಲಿ ಸೆ. 20 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರಗೆ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ತಿಳಿಸಿದ್ದಾರೆ.

### ಬೆಳಗಾವಿ, ವಿಜಯಪುರ, ಬಾಗಲಕೋಟೆ ವಿಭಾಗದ ಅರಣ್ಯ ಇಲಾಖೆ ಸಿಬ್ಬಂದಿಗಳಿಗೆ ಕಿಟ್ ವಿತರಣಾ ಕಾರ್ಯಕ್ರಮ

# ಜಿಲ್ಲೆಯ ಅರಣ್ಯ ಪ್ರದೇಶ ಶೇ.10ರಷ್ಟು ಹೆಚ್ಚಿಸುವ ಗುರಿ

**ವಿಜಯಪುರ:** ಬರಪೀಡಿತ ಪ್ರದೇಶ ಎಂಬ ಹಣೆಪಟ್ಟಿ ಹೊಂದಿದ ವಿಜಯಪುರ ಜಿಲ್ಲೆಯಲ್ಲಿ ಪರಿಸರ ಕಾಳಜಿಯೊಂದಿಗೆ ಕೋಟಿ ವೃಕ್ಷ ಅಭಿಯಾನದ ಮೂಲಕ 0.17ರಷ್ಟಿದ್ದ ಜಿಲ್ಲೆಯ ಅರಣ್ಯ ಪ್ರದೇಶವನ್ನು ಶೇಕಡಾ 2ರಷ್ಟು ಹೆಚ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ಶೇ.10 ರಷ್ಟು ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಹೇಳಿದರು.

ಶುಕ್ರವಾರ ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಂಡ ಕೈಗಾರಿಕೆ ಇಲಾಖೆ ವ್ಯಾಪ್ತಿಯ ಕೆಎಸ್‌ಡಿಎಲ್- ಸಿಎಸ್‌ಆರ್ ಅನುದಾನದಲ್ಲಿ ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ವಿಭಾಗದ ಅರಣ್ಯ ಇಲಾಖೆ ಸಿಬ್ಬಂದಿಗಳಿಗೆ ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ 20ಜನ ಸಿಬ್ಬಂದಿಗಳಿಗೆ ಕಿಟ್ ವಿತರಿಸಿ ಅವರು ಮಾತನಾಡಿದರು.

ಅತಿ ಕಡಿಮೆ ಅರಣ್ಯ ಪ್ರದೇಶ ಹೊಂದಿರುವ ವಿಜಯಪುರ ಜಿಲ್ಲೆಯ ಅರಣ್ಯ ಪ್ರದೇಶ ಹೆಚ್ಚಿಸುವ ನಿಟ್ಟಿನಲ್ಲಿ ಕಳೆದ 2016ರಲ್ಲಿ ಆರಂಭಿಸಿದ ಕೋಟಿ ವೃಕ್ಷ ಅಭಿಯಾನವನ್ನು ಹಮ್ಮಿಕೊಂಡು ಬರಲಾಗುತ್ತಿದೆ. ಜಿಲ್ಲೆಯ ವಿವಿಧೆಡೆ ಸಸಿ-ಗಿಡಗಳನ್ನು ಬೆಳೆಸಿ ಸಂರಕ್ಷಿಸಲಾಗುತ್ತಿದೆ. ಈ ಅಭಿಯಾನ ನಿರಂತರವಾಗಿ ಸಾಗಬೇಕು. ಮುಂದಿನ ದಿನಗಳಲ್ಲಿ ಜಿಲ್ಲೆಯ ಅರಣ್ಯ ಪ್ರದೇಶ ಶೇ.10 ರಿಂದ 15 ರಷ್ಟಾಗಿಸುವ ನಿಟ್ಟಿನಲ್ಲಿ ನಿರಂತರವಾಗಿ ಪರಿಸರ ರಕ್ಷಣೆ, ಗಿಡ-ಸಸಿ ಬೆಳೆಸುವ ಕಾರ್ಯ ನಡೆಯಬೇಕು. ನಿಸರ್ಗ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಈ ನಿಟ್ಟಿನಲ್ಲಿ ಎಲ್ಲರೂ ಈ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ಅವರು ಹೇಳಿದರು.

ಅದರಂತೆ ನೀರಾವರಿ ಸಚಿವನಾಗಿದ್ದ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಹಲವು ನೀರಾವರಿ ಕಾರ್ಯಗಳನ್ನು ಕೈಗೊಂಡು ಅಭಿವೃದ್ಧಿಪಡಿಸಲಾಗಿದೆ. ದೇಶದ ರಾಜಸ್ಥಾನದ ಜೈಸಲ್ಮೇರ್ ಹಾಗೂ ವಿಜಯಪುರ ತೀವ್ರ ಬರ ಪೀಡಿತ ಪ್ರದೇಶವಾಗಿತ್ತು. ಇಂತಹ ಬರ ಪೀಡಿತ ಪ್ರದೇಶದಲ್ಲಿ ಅರಣ್ಯೀಕರಣ ಹೆಚ್ಚಿಸಿದ್ದು ಒಂದು ಸಾಧನೆಯಾಗಿದೆ. ನೀರಾವರಿ ಕಾಮಗಾರಿಗಳಿಂದ ಈ ಭಾಗದಲ್ಲಿ ಅಂತರಜಲಮಟ್ಟ ಹೆಚ್ಚಾಗಿ ಇಲ್ಲಿನ ಭೂಮಿಗೆ ಬೆಲೆ ಬಂದಿದೆ. ರೈತರು ಹಲವು ತಳಿಯ ಬೆಳೆಗಳನ್ನು, ಹಣ್ಣು ಹಂಪಲಗಳನ್ನು ಬೆಳೆದು ತಮ್ಮ ಆರ್ಥಿಕತೆಯನ್ನು ಸುಧಾರಿಸಿಕೊಂಡಿದ್ದಾರೆ. ಸಚಿನಾಗಿ ನನ್ನ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಭಾಯಿಸುತ್ತಿರುವುದು ನನಗೆ ತೃಪ್ತಿ ತಂದಿದೆ ಎಂದು ಅವರು ಹೇಳಿದರು.



ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ (ಕೆ.ಎಸ್.ಡಿ.ಎಲ್) ಸಂಸ್ಥೆಯು ಮೈಸೂರು ಸಂಸ್ಥಾನದ ಮಹಾರಾಜರಾದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು, ಮೈಸೂರು ದಿವಾನರಾಗಿದ್ದ ಸರ್.ಎಂ.ವಿಶ್ವೇಶ್ವರಯ್ಯರವರು ಕೈಗಾರಿಕೋದ್ಯಮಿಗಳಾದ ಎಸ್.ಜಿ.ಶಾಸ್ತ್ರಿ ಅವರ ದೂರದೃಷ್ಟಿಯಿಂದ 1916ರಲ್ಲಿ ಸ್ಥಾಪಿತಗೊಂಡು ಶತಮಾನಗಳ ಇತಿಹಾಸ ಹೊಂದಿರುತ್ತದೆ.

ಅದರಂತೆ, ರಾಜ್ಯದ ಅರಣ್ಯ ಸಂಪತ್ತನ್ನು ಸಂರಕ್ಷಿಸುವಲ್ಲಿ ಹಗಲಿರುಳು ಶ್ರಮಿಸುತ್ತಿರುವ ಅರಣ್ಯ ಇಲಾಖೆಯ ಕಾರ್ಯನಿರತ ಅರಣ್ಯ ರಕ್ಷಕರುಗಳಿಗೆ ಇನ್ನೂ ಉತ್ತಮವಾಗಿ ಸೇವೆ ಸಲ್ಲಿಸಲು ಪ್ರೇರೇಪಿಸುವ ದೃಷ್ಠಿಯಿಂದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ವ್ಯಾಪ್ತಿಯಲ್ಲಿನ ಕೆ.ಎಸ್.ಡಿ.ಎಲ್ ಸಂಸ್ಥೆಯ ವತಿಯಿಂದ ಸಿ.ಎಸ್.ಆರ್. ಅನುದಾನದಡಿ ಉಪಯುಕ್ತ ಪರಿಕರಗಳಿರುವ ಕಿಟ್ ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ರಾಜ್ಯದ ಅರಣ್ಯ ಇಲಾಖೆಯ 10 ಸಾವಿರ ಸಿಬ್ಬಂದಿಗಳಿಗೆ ಕಿಟ್‌ಗಳನ್ನು ಒದಗಿಸುವ ಮೂಲಕ ಅವರಿಗೆ ಪ್ರೋತ್ಸಾಹಿಸಲಾಗುತ್ತಿದೆ ಎಂದು ಅವರು ಹೇಳಿದರು.

ಸಂಸದ ರಮೇಶ ಜಿಗಜಿಣಗಿ ಅವರು ಮಾತನಾಡಿ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ (ಕೆ. ಎಸ್.ಡಿ.ಎಲ್) ಸಂಸ್ಥೆಯ ಸಿಎಸ್‌ಆರ್ ಅನುದಾನವನ್ನು ಬಳಕೆ ಮಾಡಿಕೊಂಡು ಅರಣ್ಯ ಇಲಾಖೆಯ 10 ಸಾವಿರ ಸಿಬ್ಬಂದಿಗಳಿಗೆ ಕಿಟ್ ವಿತರಿಸುತ್ತಿರುವುದು ಅನುದಾನದ ಸದ್ಬಳಕೆಯಾಗಿದೆ. ಕಷ್ಟಕರ ಮತ್ತು ಕ್ಲೀಷಕರ ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸಿ ವನ್ಯಜೀವಿ ಹಾಗೂ ಅರಣ್ಯ ಸಂರಕ್ಷಣೆ ಮಾಡುತ್ತಿರುವ ಮುಂಚೂಣಿ ಸಿಬ್ಬಂದಿಗಳಿಗೆ ಅತ್ಯಂತ ಅವಶ್ಯಕವಿರುವ ಕಿಟ್ ವಿತರಣೆ ಮಾಡುವ ಉತ್ತಮ ಕಾರ್ಯಕ್ಕೆ ಈ ಅನುದಾನ ವಿನಿಯೋಗವಾಗುತ್ತಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ. ಆನಂದ.ಕೆ ಅವರು ಮಾತನಾಡಿ, ಜಿಲ್ಲೆಯು ಅರಣ್ಯೀಕರಣದಲ್ಲಿ ದಾಪುಗಾಲು ಇಡುತ್ತಿದೆ. ಆ ನಿಟ್ಟಿನಲ್ಲಿ ಅರಣ್ಯೀಕರಣದ ಸಾಧನೆಯನ್ನು ನ್ಯೂಯಾರ್ಕ ಟೈಮ್ಸ್ ಪತ್ರಿಕೆಯು ಪ್ರಕಟಿಸಿ ಜಾಗತಿಕ ಮಟ್ಟದಲ್ಲಿ ಜಿಲ್ಲೆಯ ಅರಣ್ಯೀಕರಣದ ಯಶೋಗಾಥೆ ಕೇಳಿಬರುತ್ತಿದೆ. ಒಂದು ಕಾಲದಲ್ಲಿ ಕುಡಿಯುವ ನೀರಿಗೂ ತಾತ್ವಾರ, ವಿಪರೀತ ತಾಪಮಾನ ಹೊಂದಿದ್ದ ಜಿಲ್ಲೆ ನೀರಾವರಿ ಹಾಗೂ ಅರಣ್ಯೀಕರಣದಿಂದ ಸಮತೋಲಿತ ತಾಪಮಾನ ಅನುಭವವನ್ನು ಅನುಭವಿಸಿತ್ತಿದ್ದೇವೆ. ಕೋಟಿ ವೃಕ್ಷ ಅಭಿಯಾನ ಇದೊಂದು ಜನಾಂದೋಲನವಾಗಿ ಕಚೇರಿ ಮನೆಯಂಗಳದಲ್ಲೂ ಸಾರ್ವಜನಿಕರು ಗಿಡ ನೆಟ್ಟು ಪೋಷಿಸುತ್ತಿದ್ದಾರೆ ಎಂದು ಹೇಳಿದರು

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಬೆಳಗಾವಿ ವಿಭಾಗದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ ಚವ್ಹಾಣ, ವನ್ಯ ಜೀವಿ ಮಂಡಳಿ ಸದಸ್ಯರಾದ ಧ್ರುವ ಎಂ.ಪಾಟೀಲ, ವಿಜಯಪುರ ಅರಣ್ಯ ಉಪ ಸಂರಕ್ಷಣಾಧಿಕಾರಿ ಮಲ್ಲಿನಾಥ ಕುಸನಾಳ, ಕೆಬಿಜೆಎನ್‌ಎಲ್ ಉಪ ಸಂರಕ್ಷಣಾಧಿಕಾರಿ ಎನ್.ಕೆ.ಬಾಗಾಯತ್ ಸೇರಿದಂತೆ ಅರಣ್ಯ ಇಲಾಖೆ ಹಾಗೂ ಕೆಎಸ್‌ಡಿಎಲ್ ಅಧಿಕಾರಿ-ಸಿಬ್ಬಂದಿಗಳು ಉಪಸ್ಥಿತರಿದ್ದರು. ಕೆಎಸ್‌ಡಿಎಲ್‌ದ ವ್ಯವಸ್ಥಾಪಕ ನಿರ್ದೇಶಕರಾದ ಪಿ.ಕೆ.ಎಂ.ಪ್ರಶಾಂತ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಚಿವರ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಹಾಂತೇಶ ಬಿರಾದಾರ ವಂದಿಸಿದರು.

## ಪುರುಷನ ಶವ ಪತ್ತೆ

**ಹಾವೇರಿ:** ಕುಮಾರಪಟ್ಟಣಂ ಪೊಲೀಸ್ ಠಾಣಾ ವ್ಯಾಪ್ತಿಯ ಕೋಡಿಯಾಲ ಹೊಸಪೇಟೆ ಅಯ್ಯಪ್ಪಸ್ವಾಮಿ ದೇವಸ್ಥಾನದ ಹತ್ತಿ ಬ್ರಿಡ್ಜ ಹತ್ತಿರ ಇದೇ ಸೆಪ್ಟೆಂಬರ್ 15 ರಂದು ಅಂದಾಜು 60 ರಿಂದ 65 ವರ್ಷದ ಅನಾಮಧೇಯ ಪುರುಷ ಶವ ಪತ್ತೆಯಾಗಿದ್ದು, ಮೃತ ವ್ಯಕ್ತಿಯ ಕುರಿತು ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ. ಮೃತ ವ್ಯಕ್ತಿ 5.6 ಅಡಿ ಎತ್ತರ, ದುಂಡು ಮುಖ, ಸಾದಾಗಪ್ಪು ಮೈಬಣ್ಣ ಹೊಂದಿದ್ದು, ಬಿಳಿ ಬಣ್ಣದ ಶರ್ಟ್, ಸ್ವೇಟರ್, ಮಂಜರ್‌ಪಾಟ್ ಬನಿಯನ್, ಒಂದು ದೋತಿ ಧರಿಸಿದ್ದಾನೆ. ಈ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಹಾವೇರಿ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ. ದೂ.08375/100, ಕುಮಾರಪಟ್ಟಣಂ ವೃತ ಕಚೇರಿ ಸಿಪಿಐ ದೂ.08373-266404/ಮೊ.9480804536 ಹಾಗೂ ಕುಮಾರಪಟ್ಟಣಂ ಪೊಲೀಸ್ ಠಾಣಾ ದೂ.ಸಂ.08373-242208 /ಮೊ.9480804553 ಸಂಪರ್ಕಿಸಲು ಕುಮಾರಪಟ್ಟಣಂ ಪೊಲೀಸ್ ಠಾಣೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐತಿಹಾಸಿಕ ಸ್ಮಾರಕಗಳ ರಕ್ಷಣೆ, ಸ್ವಚ್ಛತೆಗಾಗಿ ಸಚಿವ ಪಾಟೀಲ ಕರೆ




**ವಿಜಯಪುರ:** ಐತಿಹಾಸಿಕ ಸ್ಮಾರಕಗಳ ರಕ್ಷಣೆ, ಹಸರೀಕರಣಕ್ಕಾಗಿ, ಸ್ವಚ್ಛತೆಗಾಗಿ 2025ನೇ ಸಾಲಿನ ಡಿಸೆಂಬರ್ 7 ರಂದು ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ವೃಕ್ಷೋತ್ಥಾನ ಹೆರಿಟೇಜ್ ರನ್‌ನಲ್ಲಿ ಜಿಲ್ಲಾಡಳಿತ, ಸ್ವಯಂ ಸೇವಾ ಸಂಘ-ಸಂಸ್ಥೆಗಳು, ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ಸಕ್ರೀಯವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಎಂ.ಬಿ.ಪಾಟೀಲ ಕರೆ ನೀಡಿದರು.

ಶನಿವಾರ ಸಂಜೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡ ವೃಕ್ಷೋತ್ಥಾನ ಹೆರಿಟೇಜ್ ರನ್ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಜಿಲ್ಲೆಯಲ್ಲಿ ಕಳೆದ 2016 ರಿಂದ ಕೋಟಿ ವೃಕ್ಷ ಅಭಿಯಾನ ಆರಂಭಿಸಲಾಗಿದ್ದು, ವೃಕ್ಷೋತ್ಥಾನ ಆರಂಭದಿಂದ ಇಲ್ಲಿಯವರೆಗೆ ಕೋಟಿ ವೃಕ್ಷ ಅಭಿಯಾನದಡಿ ಜಿಲ್ಲೆಯಲ್ಲಿ 1.50 ಕೋಟಿ ಸಸಿಗಳನ್ನು ನೆಟ್ಟು ಪೋಷಿಸಲಾಗುತ್ತಿದೆ. ಆ ಮೂಲಕ ಅತ್ಯಂತ ಕಡಿಮೆ ಇದ್ದ ಜಿಲ್ಲೆಯ ಅರಣ್ಯ ಪ್ರದೇಶವನ್ನು ರಾಜ್ಯದ ಅರಣ್ಯ ಪ್ರದೇಶ ಸರಾಸರಿ ಸಮತೋಲಕ್ಕೆ ತರುವ ನಿಟ್ಟಿನಲ್ಲಿ ಪ್ರಯತ್ನಿಸಲಾಗುತ್ತಿದೆ ಎಂದು ಅವರು ಹೇಳಿದರು.

ಕಳೆದ 2023ರಲ್ಲಿ ನಡೆದ ವೃಕ್ಷೋತ್ಥಾನ ಹೆರಿಟೇಜ್ ರನ್‌ನಲ್ಲಿ 8 ಸಾವಿರ ಓಟಗಾರರು , 2024ರಲ್ಲಿ 9400 ಓಟಗಾರರು ಭಾಗವಹಿಸಿದ್ದರು. ಈ ಬಾರಿ ನಡೆಯುವ ವೃಕ್ಷೋತ್ಥಾನ ಹೆರಿಟೇಜ್ ರನ್‌ನಲ್ಲಿ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದ 15 ಸಾವಿರ ಓಟಗಾರರು ಭಾಗವಹಿಸುವ ನಿರೀಕ್ಷೆ ಇದೆ. ಈ ಅಭಿಯಾನಕ್ಕೆ ಎಲ್ಲರೂ ಕೈ ಜೋಡಿಸುವ ಮೂಲಕ ಸಹಕಾರ ನೀಡಬೇಕು. ಜಿಲ್ಲೆಯಲ್ಲಿ ಯಶಸ್ವಿಯಾಗಿ ಹಮ್ಮಿಕೊಂಡ ಕೋಟಿ ವೃಕ್ಷ ಅಭಿಯಾನದ ಯಶಗೋಥೆ ಅಂತರರಾಷ್ಟ್ರೀಯ ಮಟ್ಟದ ನ್ಯೂಯಾರ್ಕ್ ಟೈಮ್ಸ್ ಪತ್ರಿಕೆಯಲ್ಲಿ ಪ್ರಕಟಗೊಂಡಿದ್ದು, ಅಭಿಯಾನದ ಯಶಸ್ವಿ ಕೈಗನ್ನಡಿಯಾಗಿದೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಜಯಪುರ ಜಿಲ್ಲೆ ಗುರುತಿಸಿಕೊಂಡಿದ್ದು, ಜಿಲ್ಲಾಡಳಿತ ಸೇರಿದಂತೆ ಸಾರ್ವಜನಿಕರ ಸಹಭಾಗಿತತ್ವದಿಂದ ಈ ಶ್ರೇಯಸ್ಸು ಜಿಲ್ಲೆಗೆ ಲಭಿಸಿದೆ ಎಂದು ಅವರು ಹೇಳಿದರು.

ಹೆರಿಟೇಜ್ ರನ್‌ನಲ್ಲಿ ಸ್ವಯಂ ಪ್ರೇರಿತವಾಗಿ ಭಾಗವಹಿಸಿ ಕ್ರೀಯಾಯಶೀಲರಾಗಿ ಕಾರ್ಯನಿರ್ವಹಿಸುತ್ತಿರುವ ಹಿನ್ನಲೆಯಲ್ಲಿ ಹಳ್ಳಿ ಹಳ್ಳಿಗಳಲ್ಲಿ, ಶಾಲಾ ಕಾಲೇಜ್‌ಗಳಲ್ಲಿ ಸರ್ಕಾರಿ ಸಂಸ್ಥೆಗಳಲ್ಲಿ, ಉದ್ಯಾನವನಗಳಲ್ಲಿ ನಗರದ ವಾರ್ಡಿನ ಖಾಲಿ ಜಾಗಗಳಲ್ಲಿ ಸಾರ್ವಜನಿಕರು ಸಸಿ ನೆಡುವ ಮೂಲಕ ತಮ್ಮ ಪರಿಸರ ಪ್ರೇಮವನ್ನು ಮೆರೆದು ಮೆರಗು ಹೆಚ್ಚಿಸಬೇಕು. ಈ ಬಾರಿಯ ವೃಕ್ಷೋತ್ಥಾನ್ ಹೆರಿಟೇಜ್ ರನ್ ಯಶಸ್ವಿಯಾಗಿ ಹಮ್ಮಿಕೊಂಡು ರಾಷ್ಟ್ರದ ಮಹಾನಗರಗಳು ಸೇರಿದಂತೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಈ ವೃಕ್ಷೋತ್ಥಾನ ಹೆರಿಟೇಜ್ ರನ್ ಗುರುತಿಸುವಂತಾಗಬೇಕು ಎಂದು ಅವರು ಹೇಳಿದರು.

ನಿಸರ್ಗದ ಬಗ್ಗೆ ಅಪಾರ ಕಾಳಜಿ, ಪ್ರೀತಿ ಹೊಂದಿದ ನಡೆದಾಡುವ ದೇವರು ಶ್ರೀ ಸಿದ್ದೇಶ್ವರ ಸ್ವಾಮೀಗಳ ಆಶಯದಂತೆ ಹೆರಿಟೇಜ್ ರನ್ ಮೂಲಕ ಹಸರಿಕರಣ ಜಾಗೃತಿ ಮೂಡುತ್ತಿದೆ. ಮಮದಾಪುರದ 1600 ಎಕರೆ ಅರಣ್ಯ ಪ್ರದೇಶಕ್ಕೆ ಸಿದ್ದೇಶ್ವರ ಶ್ರೀಗಳ ಹೆಸರಿಟ್ಟು ಗೌರವ ಅರ್ಪಿಸಲಾಗಿದೆ ಎಂದು ಅವರು ಹೇಳಿದರು.

ಸ್ವಚ್ಛತೆಯ ಮೂಲಕ ಹೆರಿಟೇಜ್ ರನ್ ಜಾಗೃತಿ : ಡಿ.7ರಂದು ಹಮ್ಮಿಕೊಂಡ ವೃಕ್ಷೋತ್ಥಾನ ಹೆರಿಟೇಜ್ ಜಾಗೃತಿಗಾಗಿ ಇದೇ ಸೆಪ್ಟಂಬರ್ 25 ರಂದು ನಗರದ ಕೋಟೆಗೋಡೆ ಹಾಗೂ ಆಯ್ದ ಐದು ಐತಿಹಾಸಿಕ ಸ್ಮಾರಕ ಹಾಗೂ ದೇವಸ್ಥಾನಗಳನ್ನು ಸ್ವಚ್ಛಗೊಳಿಸುವ ಸ್ವಚ್ಛತಾ ಅಭಿಯಾನ ಕಾರ್ಯಕ್ರಮವವನ್ನು ಹಮ್ಮಿಕೊಂಡು ಈ ಹೆರಿಟೇಜ್ ರನ್ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಈ ಸ್ವಚ್ಛತಾ ಅಭಿಯಾನದಲ್ಲಿ ನಾನೂ ಕೂಡ ಭಾಗವಹಿಸುತ್ತೇನೆ. ಇದರೊಂದಿಗೆ ಸ್ವಚ್ಛ ಸುಂದರ ಹಸಿರು ಅಭಿಯಾನ ಕೂಡ ಹಮ್ಮಿಕೊಂಡು ಎಲ್ಲ ವಾರ್ಡಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರತಿ ತಿಂಗಳು ಗ್ರಾಮ ಪಂಚಾಯತ್‌ಗಳಲ್ಲಿ ನಡೆಯುವ ಸಭೆಗಳಲ್ಲಿ ಹಸರಿಕರಣ ಕುರಿತು ಮನವರಿಕೆ ಮಾಡುವ ಮೂಲಕ ಜಾಗೃತಿ ಮೂಡಿಸಬೇಕು. ಹಸಿರು ಗ್ರಾಮ-ಸ್ವಚ್ಛ ಗ್ರಾಮ ಹಾಗೂ ಹಸಿರು ವಾರ್ಡ-ಸ್ವಚ್ಛ ವಾರ್ಡಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಈ ಕ್ಷೇತ್ರದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಸಂಘ-ಸಂಸ್ಥೆಗಳಿಗೂ ಸಹ ಗೌರವಿಸಲಾಗುವುದು. ಕಾರ್ಯಕ್ರಮದಲ್ಲಿ ಎಲ್ಲರೂ ಕಾರ್ಯಕ್ರಮದಲ್ಲಿ ಎಲ್ಲರೂ ಸ್ವಯಂ ಪ್ರೇರಿತವಾಗಿ ಭಾಗವಹಿಸಿ ಈ ವೃಕ್ಷೋತ್ಥಾನ ಹೆರಿಟೇಜ್ ರನ್ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಮಾತನಾಡಿ, ವೃಕ್ಷೋತ್ಥಾನ ಹೆರಿಟೇಜ್‌ರನ್ ನೋಂದಣಿ ಕಾರ್ಯ ಈಗಾಗಲೇ ಆರಂಭಿಸಲಾಗಿದೆ.

ಜಿಲ್ಲೆಯಲ್ಲಿ ನಡೆಯುವ ಹೆರಿಟೇಜ್ ರನ್‌ಗಳ ಕುರಿತು ರಾಷ್ಟ್ರ ಅಂತರರಾಷ್ಟ್ರೀಯ ಮಟ್ಟದಲ್ಲಿ ಜಾಗೃತಿ ಮೂಡಿಸಲು ಮ್ಯಾರಾಥಾನ್ ಗ್ರೂಪ್‌ಗಳಿಗೆ ಮಾಹಿತಿ ಒದಗಿಸುವ ಮೂಲಕ ಹೆಚ್ಚೆಚ್ಚು ರಾಷ್ಟ್ರ ಅಂತರರಾಷ್ಟ್ರೀಯ ಮಟ್ಟದ ಓಟಗಾರರು ಭಾಗವಹಿಸುವಂತೆ ಪ್ರೇರೆಪಿಸಲಾಗುವುದು ಎಂದು ಹೇಳಿದರು. ಹೆರಿಟೇಜ್ ರನ್ ಜಾಗೃತಿಗಾಗಿ ಸೆ.25 ರಂದು ಹಮ್ಮಿಕೊಂಡ ಸ್ವಚ್ಛತಾ ಅಭಿಯಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಚಿತ್ರಕಲೆ, ಪ್ರಬಂಧ ಸ್ಪರ್ಧೆ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುವುದು ಎಂದು ಅವರು ಹೇಳಿದರು.

ಸಭೆಯಲ್ಲಿ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿ ತಮ್ಮ ಅನಿಸಿಕೆ ಹಾಗೂ ಸಲಹೆ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ವೃಕ್ಷೋತ್ಥಾನ ಹೆರಿಟೇಜ್ ರನ್ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಮಹಾನಗರ ಪಾಲಿಕೆ ಮಹಾಪೌರ ಮಡಿವಾಳಪ್ಪ ಕರಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಎಎಸ್‌ಐ ಇಲಾಖೆ ಧಾರವಾಡ ವೃತ್ತದ ರಮೇಶ ಮೂಲಿಮನಿ, ಕರ್ನಲ್ ವಂಶಿ, ಮುರುಗೇಶ ಪಟ್ಟಣಶೆಟ್ಟಿ, ಮಹಾಂತೇಶ ಬಿರಾದಾರ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಉಗಾರ ಬಿಕೆ ಪಿಕೆಪಿಎಸ್.ಗೆ 15.61 ಲಕ್ಷ ಲಾಭ



**ಮೋಳೆ:** ಸ್ವಾತಂತ್ರದ ಪೂರ್ವದಲ್ಲಿ ಪ್ರಾರಂಭಗೊಂಡ ಕಾಗವಾಡ ತಾಲೂಕಿನ ಉಗಾರ ಬಿ.ಕೆ ಗ್ರಾಮದ ವಿವಿದೊದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಕ್ಕೆ ಸನ್ 2024-25-ನೇ ಸಾಲಿನಲ್ಲಿ 15.61 ಲಕ್ಷ ರೂ ನಿವ್ವಳ ಲಾಭಗಳಿಸಿದೆ ಎಂದು ಸಂಘದ ಅಧ್ಯಕ್ಷ ಶೀತಲಗೌಢ ಪಾಟೀಲ ತಿಳಿಸಿದರು.

ಶನಿವಾರ ದಿ.20 ರಂದು ಸಂಸ್ಥೆಯ ಸಭಾ ಭವನದಲ್ಲಿ ಉಗಾರ ಬಿ.ಕೆ ವಿವಿದೊದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 105 ನೇ ವಾರ್ಷಿಕ ಸರ್ವಸಾಧಾರಣ ಸಭೆಯನ್ನುದ್ದೇಸಿಸಿ ಮಾತನಾಡಿದ ಅವರು ಆಡಳಿತ ಮಂಡಳಿಯವರ ಪರಿಶ್ರಮ, ಬ್ಯಾಂಕ ಸಿಬ್ಬಂದಿಯವರ ಕರ್ತವ್ಯನಿಷ್ಠೆ, ಸಾಲಗಾರರ ಪ್ರಾಮಾಣಿಕತೆಯಿಂದ ಬ್ಯಾಂಕಿನ ಪ್ರಗತಿಯಾಗಲು ಸಾಧ್ಯ ಎಂದ ಅವರು ನಮ್ಮ ಗ್ರಾಮದ ಜಮೀನು ಕಡಿಮೆ ಇದ್ದರು ಮಾಜಿ ಉಪಮುಖ್ಯಮಂತ್ರಿ ಹಾಗೂ ಡಿಸಿಸಿ ಬ್ಯಾಂಕಿನ ನಿರ್ದೇಶಕರಾದ ಲಕ್ಷ ?ಮಣ ಸವದಿಯವರು ಈ ವರ್ಷ 2.30 ಕೋಟಿ ಹೆಚ್ಚಿನ ಸಾಲ ನೀಡಿದ್ದು ಅವರಿಗೆ ಈ ಸಭೆಯ ಮೂಲಕ ಧನ್ಯವಾದಗಳನ್ನು ಸಲ್ಲಿಸಿದರು.

ಸಹಕಾರ ಸಂಘಗಳಲ್ಲಿ ರೈತರು ಪಡೆದ ಸಾಲವನ್ನು ಕೃಷಿ ಚಟುವಟಿಕೆಯ ಜೊತೆಗೆ ಗುಡಿ ಕೈಗಾರಿಕೆ ಹಾಗೂ ಹೈನುಗಾರಿಕೆ ಸೇರಿದಂತೆ ಮತ್ತಿತರ ಲಾಭ ತರುವ ಚಟುವಟಿಕೆಗಳಿಗೆ ಸಮರ್ಪಕವಾಗಿ ಬಳಸಿದಾಗ ಆರ್ಥಿಕವಾಗಿ ಸಭಲರಾಗಲು ಸಾಧ್ಯ ಎಂದ ಅವರು ಸಂಘವು 1894 ಸದಸ್ಯರನ್ನು ಹೊಂದಿದ್ದು,1.22 ಕೋಟಿ ಶೇರ ಬಂಡವಾಳ ಹೊಂದಿದ್ದು, 12.86 ಕೋಟಿ ರೂ ದುಡಿಯುವ ಬಂಡವಾಳವಿದ್ದು, 11.66 ಕೋಟಿ ಬೆಳೆಸಾಲ ವಿತರಿಸಲಾಗಿದೆ. 33.70 ಲಕ್ಷ ಠೇವಣಿ ಹೊಂದಿದೆ ಎಂದು ಹೇಳಿದರು. ಪ್ರಸಕ್ತ ವರ್ಷ 15.62 ಲಕ್ಷ ನಿವ್ವಳ ಲಾಭ ಗಳಿಸಿ ಶೇ.6ರಷ್ಟು ಲಾಭಾಂಶವನ್ನು ಪ್ರಕಟಿಸಿದ್ದೇವೆಂದರು.

ಈ ಸಂದರ್ಭದಲ್ಲಿ, ಮುಖ್ಯಕಾರ್ಯನಿರ್ವಾಹಕ ಬಾಹುಬಲಿ ಚಿಂಚವಾಡೆ,ಸಂಘದ ವಿವರವನ್ನು ಸಭೆಯ ಮುಂದೆ ವಿವರಿಸಿದರು. ಒಪ್ಪಿಗೆ ಪಡೆದರು. ಉಪಾಧ್ಯಕ್ಷ ಪದ್ಮಕುಮಾರ ಆಳಪ್ಪನವರ,

ಆಡಳಿತ ಮಂಡಳಿ ಸದಸ್ಯರಾದ ಪ್ರಶಾಂತ ಕುಸನಾಳೆ,

ಮಲ್ಲಪ್ಪ ಕುರಬರ,ಸಾಗರ ಪುಜಾರಿ, ಸದಾಶಿವ ನಾಯಿಕ, ಸಂಗೀತಾ ಹೊಸುರೆ, ಪದ್ಮಾ ಖಂಡೇರಾಜುರೆ, ಪ್ರವೀಣ ಪಾಟೀಲ ರಾವಸಾಬ ಗಿಡ್ಡಸಕ್ಕನವರ,ಬಾಳಾಸಾಬ ಹವಲೆ,ಆಮಂತ್ರಿತ ಸದಸ್ಯರಾದ ವೃಷಭ ಪಾಡೀಲ,ದೀಪಕ ಪಾಟೀಲ,ಪ್ರಮೋದ ಪಾಟೀಲ ಬಾಳಾಸಾಬ ಚೌಗಲಾ ಸೇರಿದಂತೆ ಸಂಘದ ಸರ್ವ ಸದಸ್ಯರು ಉಪಸ್ಥಿತರಿದ್ದರು.

## ಗುರುವಿನ ನಾಮಸ್ಮರಣೆಯಿಂದ ಎಲ್ಲವೂ ಸಾಧ್ಯ: ಹಿರೇಮಠ

**ರಬಕವಿ-ಬನಹಟ್ಟಿ:** ಗುರುವಿನ ಮಹಿಮೆ ಅಪಾರವಾದುದು, ಸದಾ ನಾಮಸ್ಮರಣೆಯಿಂದ ಎಲ್ಲವೂ ಸಾಧ್ಯವೆಂದು ವೇದಮೂರ್ತಿ ಚರಂತಯ್ಯ ಹಿರೇಮಠ ಹೇಳಿದರು. ಅವರು ಬನಹಟ್ಟಿಯ ಸೋಮವಾರ ಪೇಟೆಯ ಶರಣರ ಬಾವಿ ಹತ್ತಿರವಿರುವ ಹಿರೇಮಠದಲ್ಲಿ ಗಂಗಾಧರ ಸ್ವಾಮಿಗಳ ಹಾಗೂ ಮೃತ್ಯುಂಜಯ ಸ್ವಾಮಿಗಳ ಪುಣ್ಯಾರಾಧನೆ ಪ್ರಯುಕ್ತ ಜರುಗಿದ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಗುರುವಿನ ಪುಣ್ಯಾರಾಧನೆ ಅಂಗವಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಅನ್ನಸಂತರ್ಪಣೆ ಮಾಡುತ್ತಿರುವುದು ಸ್ತುತ್ಯಾರ್ಹವಾದುದು ಎಂದರು. ಇದು ಇಷ್ಟಕ್ಕೆ ಸಿಮೀತಗೊಳಿಸದೆ ಈ ಪುಣ್ಯಾರಾಧನೆ ಒಂದು ದೊಡ್ಡ ಕಾರ್ಯಕ್ರಮವಾಗಿ ಪರಿವರ್ತಿಸಿ ಅನೇಕ ಶರಣರನ್ನು ಕರೆಸಿ ಗುರುವಿನ ಮಹಿಮೆಯ ಆಶೀರ್ವಚನ ಪಡೆಯಬೇಕು ಎಂದರು.

ಭಕ್ತಿ-ಭಾವಗಳೊಂದಿಗೆ ನಿತ್ಯ ಗುರು-ಶಿಷ್ಯರನ್ನು ಒಂದು ಮಾಡುವ ನಿತ್ಯ ಕಾಯಕ ಮಠಗಳದ್ದಾಗಿವೆ. ಸನ್ಮಾರ್ಗದೊಂದಿಗೆ ನೆಮ್ಮದಿಯ ಬದುಕು ಕಾಣಲು ಮಠ-ಮಾನ್ಯಗಳಿಗೆ ತೆರಳಿ ಮಾನಸಿಕ ಒತ್ತಡಗಳಿಂದ ದೂರ ಉಳಿಯಲು ಸಾಧ್ಯವೆಂದು ಸಿದ್ಧನಗೌಡ ಪಾಟೀಲ ಹೇಳಿದರು. ಮಹಾಂತಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಮಲ್ಲಣ್ಣ ಬಾವಲತ್ತಿ, ಸಿದ್ದನಗೌಡ ಪಾಟೀಲ, ಕಿರಣ ಆಳಗಿ, ಶಿವು ಬಾಗೇವಾಡಿ, ಮಹಾಶಾಂತ ಶೆಟ್ಟರ, ಶ್ರೀಶೈಲ ಉಳ್ಳಾಗಡ್ಡಿ, ಚನ್ನಪ್ಪ ಗುಣಕಿ, ಅಶೋಕ ಹಟ್ಟಿ, ಶಿವಾನಂದ ಗುಂಡಿ, ಸೋಮವಾರ ಪೇಟೆ ಸಮಸ್ತ ದೈವ ಮಂಡಳಿ, ರೈತರ ಮತ್ತು ಗೌಡರ ದೈವ ಮಂಡಳಿ, ಆದಿ ಬಣಜಿಗ ಸಮಾಜ ಬಾಂಧವರ ಹಿರಿಯರು ಸೇರಿದಂತೆ ಅನೇಕರಿದ್ದರು.



## ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ



**ರಾಯಬಾಗ:** ಪಟ್ಟಣದ ತಾಲ್ಲೂಕಾ ಕ್ರೀಡಾಂಗಣದಲ್ಲಿ ಶನಿವಾರ ನಡೆದ ತಾಲೂಕು ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕ್ರೀಡಾಕೂಟಕ್ಕೆ ಶಾಸಕ ಡಿ.ಎಂ. ಐಹೊಳೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು,"ಕ್ರೀಡೆ ದೈಹಿಕ ಮಾನಸಿಕ ಆರೋಗ್ಯಕ್ಕಾಗಿ ಅವಶ್ಯಕ. ಪಾಠ ಪುಸ್ತಕಗಳ ಜ್ಞಾನಕ್ಕಿಂತ ಕ್ರೀಡಾಂಗಣದ ಪಾಠಗಳು ಹೆಚ್ಚು ಜೀವನ ಪಾಠ ನೀಡುತ್ತವೆ. ಶಿಸ್ತಿನ ಜೀವನ, ಸಹನೆ, ಸಹಕಾರ ಹಾಗೂ ನಾಯಕತ್ವ ಬೆಳೆಸುವ ಶಕ್ತಿ ಕ್ರೀಡೆ ಹೊಂದಿದೆ. ತಾಲೂಕಿನ ವಿದ್ಯಾರ್ಥಿಗಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ತರುವಂತೆ ನಾವು ಎಲ್ಲರು ಪ್ರೋತ್ಸಾಹಿಸಬೇಕು" ಎಂದು ಹೇಳಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜಪ್ಪ ಆರ್ ಅವರು ಮಾತನಾಡಿ, "ಶೈಕ್ಷಣಿಕ ಸಾಧನೆಯ ಜೊತೆಗೆ ಕ್ರೀಡಾ ಸಾಧನೆಯೂ ಸಮಾನ ಮಹತ್ವದ್ದಾಗಿದೆ. ವಿದ್ಯಾರ್ಥಿಗಳು ಕ್ರೀಡೆಯಲ್ಲಿ ತೊಡಗಿಕೊಂಡರೆ ಆತ್ಮವಿಶ್ವಾಸ, ದೈಹಿಕ ಸಾಮರ್ಥ್ಯ ಹಾಗೂ ಮಾನಸಿಕ ಧೈರ್ಯ ಹೆಚ್ಚುತ್ತದೆ. ಇಂತಹ ಕೂಟಗಳು ಗ್ರಾಮೀಣ ಪ್ರತಿಭೆಗೆ ವೇದಿಕೆ ಒದಗಿಸುತ್ತವೆ" ಎಂದರು.

ಪಟ್ಟಣ ಪಂಚಾಯಿತಿ ಅಧ್ಯಕ್ಷ ಅಶೋಕ ಅಂಗಡಿ, ದೈಹಿಕ ಶಿಕ್ಷಣ ಪರಿವೀಕ್ಷಕ ಎಂ ಪಿ ಜೀರಗ್ಯಾಳ, ಕ್ಷೇತ್ರ ಸಮನ್ವಯಾಧಿಕಾರಿ ಬಸವರಾಜ ಕಾಂಬಳೆ, ಕೆನರಾ ಬ್ಯಾಂಕ್ ಮುಖ್ಯ ಪ್ರಬಂಧಕ ಚಂದ್ರಕುಮಾರ. ಪಿ, ಯುವಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಅಧಿಕಾರಿ ಸಂಜೀವ ನಾಯಿಕ, ಪ್ರಶಾಂತ ಶಾರಬಿದ್ರೆ, ವಿಠ್ಠಲ ತೇರದಾಳೆ ಸೇರಿದಂತೆ ತಾಲ್ಲೂಕಿನ ವಿವಿಧ ಶಾಲೆಗಳ ದೈಹಿಕ ಶಿಕ್ಷಕರು, ಕ್ರೀಡಾಪಟುಗಳು, ಇಲಾಖೆಯ ವಿವಿಧ ಸಂಘಟನೆಗಳ ಅಧ್ಯಕ್ಷರು, ಉಪಾಧ್ಯಕ್ಷರು,ಪದಾಧಿಕಾರಿಗಳು ಇದ್ದರು.

### ಸಮೀಕ್ಷೆ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಸಂಗಪ್ಪ ಕರೆ

## ನಾಳೆಯಿಂದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಪ್ರಾರಂಭ

**ಬಾಗಲಕೋಟೆ:** ಜಿಲ್ಲೆಯಾದ್ಯಂತ ಸೆಪ್ಟೆಂಬರ 22 ರಿಂದ ಅಕ್ಟೋಬರ 7 ವರೆಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಜರುಗಲಿದ್ದು, ಸಮೀಕ್ಷೆಗೆ ಆಗಮಿಸಿದ ಗಣತಿದಾರರಿಗೆ ಅಗತ್ಯ ದಾಖಲೆಗಳ ಜೊತೆಗೆ ಸೂಕ್ತ ಮಾಹಿತಿ ಒದಗಿಸಿ, ಸಹಕರಿಸುವ ಮೂಲಕ ಸಮೀಕ್ಷೆ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಕರೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಜರುಗಿದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತು ಜಿಲ್ಲಾ ಮತ್ತು ತಾಲೂಕಾ ಮಟ್ಟದ ಅಧಿಕಾರಿಗಳ ಸಮನ್ವಯ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಾಜ್ಯದ ಅಭಿವೃದ್ಧಿ ಮತ್ತು ಸಾಮಾಜದ ಎಲ್ಲ ವರ್ಗಗಳಿಗೆ ಸಮಾನ ಅವಕಾಶ ಒದಗಿಸುವ ನಿಟ್ಟಿನಲ್ಲಿ ಹಿಂದುಳಿದ ವರ್ಗಗಳ ಆಯೋಗದಿಂದ ಸಮೀಕ್ಷೆ ಕಾರ್ಯವನ್ನು ನಡೆಸಲಾಗುತ್ತಿದೆ. ಸಮೀಕ್ಷೆ ಒಟ್ಟು 60 ಪ್ರಶ್ನೆಗಳನ್ನೊಂಗೊಂಡಿದ್ದು, ಗಣಿತಿದಾರರು ಮನೆ ಮನೆಗೆ ತೆರಳಿ ಮೊಬೈಲ್ ಆ್ಯಪ್ ಮೂಲಕ ಮಾಹಿತಿ ಸಂಗ್ರಹಿಸಲಿದ್ದಾರೆ ಎಂದರು.



ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಕುರಿತು ನಿಖರವಾದ ಮಾಹಿತಿ ಸಂಗ್ರಹಿಸುವುದು ಸಮೀಕ್ಷೆಯ ಮುಖ್ಯ ಉದ್ದೇಶವಾಗಿದೆ. ಈ ಸಮೀಕ್ಷೆ ಪಡಿತರ ಚೀಟಿ ಮತ್ತು ಆಧಾರ ಕಾರ್ಡ ಸಂಖ್ಯೆಯ ಆಧಾರದಲ್ಲಿ ನಡೆಯಲಿದೆ. ಆದ್ದರಿಂದ ಸಾರ್ವಜನಿಕರು ನಿಖರವಾದ ಮಾಹಿತಿಯನ್ನು ಒದಗಿಸಬೇಕು. ಜಿಲ್ಲಯಲ್ಲಿ ಸಮೀಕ್ಷೆ ಕಾರ್ಯ ಯಶಸ್ವಿಯಾಗಿ ನಡೆಸಲು ಜಿಲ್ಲಾಡಳಿತ ಸಕಲ ಸಿದ್ದತೆ ಮಾಡಿಕೊಂಡಿದೆ. ಸಮೀಕ್ಷೆದಾರರಿಗೆ 2 ಹಂತದ ತರಬೇತಿಯನ್ನು ನೀಡಲಾಗಿದೆ. ಸಮೀಕ್ಷೆ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ ಸುಮಾರು 4,75,236 ಮನೆಗಳನ್ನು ಗುರುತಿಸಿ ಯು.ಎಚ್.ಐ.ಡಿ ವಿವರಗಳೊಂದಿಗೆ ಜಿಯೋ ಟ್ಯಾಗ್ ಮಾಡುವ ಮೂಲಕ ಸ್ಟೀಕರ್‌ಗಳನ್ನು ಅಂಟಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ಸಮೀಕ್ಷೆ ಕಾರ್ಯಕ್ಕಾಗಿ 4323 ಸಮೀಕ್ಷಾ ಬ್ಲಾಕ್‌ಗಳನ್ನು ಗುರುತಿಸಿ, ಪ್ರತಿ ಬ್ಲಾಕ್‌ಗೆ ಒಬ್ಬರಂತೆ ಸಮೀಕ್ಷಾದಾರರನ್ನು ನೇಮಿಸಲಾಗಿದೆ. ಸಮೀಕ್ಷಾ ಕಾರ್ಯವು ಸಂಪೂರ್ಣವಾಗಿ ಮೊಬೈಲ್ ಸರ್ವೆ ಆ್ಯಪ್ ಮುಖಾಂತರ ನಡೆಯಲಿದೆ. ಸಮೀಕ್ಷೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಗೊಂದಲವಿದ್ದಲ್ಲಿ ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದ ಸಹಾಯವಾಣಿ ಸಂಖ್ಯೆ 8050770004ಗೆ ಕರೆ ಮಾಡಿ ಸಹಾಯ ಪಡೆಯಬಹುದಾಗಿದೆ. ಗಣತಿದಾರರಿಗೆ ಜಿಲ್ಲಾಡಳಿತದಿಂದ ಐಡಿ ಕಾರ್ಡ ನೀಡಲಾಗಿದೆ. ಸಮೀಕ್ಷೆ ಕೈಗೊಂಡ ಬಗ್ಗೆ ಪ್ರತಿದಿನ ವರದಿ ಪಡೆಯಲಾಗುತ್ತದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎ.ಸಿ.ಮನ್ನಿಕೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ ಸೇರಿದಂತೆ ಆಯಾ ತಾಲೂಕಿನ ತಹಶೀಲ್ದಾರ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಕರಿಯಮ್ಮದೇವಿ ದೇವಸ್ಥಾನದಲ್ಲಿ ನವರಾತ್ರಿ ಉತ್ಸವ

**ಧಾರವಾಡ:** ಧಾರವಾಡ ನಗರದ ಕೆಲಗೇರಿ ರಸ್ತೆಯಲ್ಲಿರುವ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿ ದೇವಸ್ಥಾನದಲ್ಲಿ ಬರುವ ಸೋಮವಾರ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2 ರವರೆಗೆ ನವರಾತ್ರಿ ಉತ್ಸವ ನಡೆಯಲಿದೆ.



ಭಾವೈಕ್ಯತೆಯ ಕೇಂದ್ರವು ಆಗಿರುವ ಈ ದೇವಸ್ಥಾನಕ್ಕೆ ಛತ್ರಪತಿ ಶಿವಾಜಿ ಮಹಾರಾಜರು ಸಹ ಭಕ್ತರಾಗಿದ್ದರು. ಅನಾದಿಕಾಲದಿಂದಲೂ ಈ ಭಾಗದ ರೈತರು ಮತ್ತು ಭಕ್ತರು ಶ್ರದ್ಧೆ ಮತ್ತು ಭಕ್ತಿಯಿಂದ ಪೂಜೆ ಸಲ್ಲಿಸುತ್ತಾ ಬಂದಿದ್ದಾರೆ. ಈ ಬಾರಿಯ ನವರಾತ್ರಿ ಉತ್ಸವವು ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2 ರ ವರಗೆ ನಡೆಯಲಿದ್ದು, ದೇವಿಗೆ ವಿವಿಧ ಅಲಂಕಾರಗಳನ್ನು ಮಾಡಲಾಗುತ್ತಿದೆ. ಪ್ರತಿದಿನ ರಾತ್ರಿ 9 ಗಂಟೆಗೆ ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಲಾಗಿದೆ.

ದೇವಿಗೆ ಸೆಪ್ಟೆಂಬರ್ 22 ರಂದು ಶ್ರೀ ರೇಣುಕಾ ಯಲ್ಲಮ್ಮ ದೇವಿ, ಸೆ. 23 ರಂದು ಶ್ರೀ ಪದ್ಮಾವತಿ ದೇವಿ, ಸೆ.24 ಶ್ರೀ ಅಂಭಾ ಭವಾನಿ ದೇವಿ, ಸೆ.25 ರಂದು ಶ್ರೀ ಗಾಯತ್ರಿ ದೇವಿ, ಸೆ. 26 ರಂದು ಶ್ರೀ ಮಹಾಲಕ್ಷ್ಮಿ ದೇವಿ, ಸೆ.27 ರಂದು ಶ್ರೀ ಶಾಖಾಂಬರಿ ದೇವಿ, ಸೆ. 28 ರಂದು ಶ್ರೀ ಅನ್ನಪೂರ್ಣೇಶ್ವರಿ ದೇವಿ, ಸೆ.29 ರಂದು ಶ್ರೀ ಸರಸ್ವತಿ ದೇವಿ, ಸೆ. 30 ರಂದು ಶ್ರೀ ಕನ್ಯಾಕುಮಾರಿ ದೇವಿ, ಅಕ್ಟೋಬರ್ 1 ರಂದು ಶ್ರೀ ಮಹಾಗೌರಿ ದೇವಿ ಮತ್ತು ಅ. 2 ರಂದು ಶ್ರೀ ಮಾತಂಗಿ ದೇವಿ ಅಲಂಕಾರ ಮಾಡಲಾಗುತ್ತದೆ. ಅಂದೆ ಸಾಯಂಕಾಲ 4.30 ಕ್ಕೆ ಶ್ರೀ ಕರಿಯಮ್ಮ ದೇವಿ ಅಲಂಕೃತ ಪಲ್ಲಕ್ಕಿ ಉತ್ಸವವು ಶಾಂತಿ ನಿಕೇತನ ನಗರ ಪ್ರದಕ್ಷಿಣೆ ಹಾಕಿ ಬನ್ನಿ ಮಂಟಪಕ್ಕೆ ತೆರಳಿ ಬನ್ನಿ ಮುಡಿಯಲಾಗುವುದು.

ಉತ್ಸವದ ಅಂಗವಾಗಿ ಸೋಮವಾರ ಸೆಪ್ಟೆಂಬರ್ 29 ರಂದು ಸಾಯಂಕಾಲ 4.30 ಕ್ಕೆ ಸುಮಂಗಲೆಯರಿಂದ ಕುಂಕುಮಾರ್ಚನೆ ನಡೆಯಲಿದೆ. ಪ್ರತಿದಿನ ಕಾಕಡಾರತಿ, ಪಂಚಾಮೃತ ಅಭಿಷೇಕ, ಮಂಗಳಾರತಿ, ಭಜನೆ ಮತ್ತು ಮಹಾಮಂಗಳಾರತಿ ಇರುತ್ತದೆ.

## ಶಿಕ್ಷಕರು ಶಾಲೆಗೆ ಚಕ್ಕರ್ ಕ್ರಮಕ್ಕೆ ಆಗ್ರಹ



**ಬಸವನಬಾಗೇವಾಡಿ:** ತಾಲೂಕಿನ ಬೂದಿಹಾಳ ಎಲ್.ಟಿ-2 ರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ಸೆ.9 ರಂದು ಶಾಲೆಗೆ ಚಕ್ಕರ್ ಹಾಕಿದ್ದು ಅವರ ಮೇಲೆ ಬಿಇಓ ಅವರು ಕ್ರಮ ತೆಗೆದುಕೊಳ್ಳಬೇಕೆಂದು ಜಯ ಕರ್ನಾಟಕ ಸಂಘಟನೆ ಪದಾಧಿಕಾರಿಗಳು ಬಿಇಓ ವಸಂತ ರಾಠೋಡ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಅವರು ಸಲ್ಲಿಸಿದ ಮನವಿಯಲ್ಲಿ ಸೆ.9 ರಂದು ಬೆಳಗ್ಗೆ 10 ಗಂಟೆಗೆ ಶಿಕ್ಷಕರು ಶಾಲೆಗೆ ಬಂದು ಮರಳಿ 11 ಗಂಟೆಗೆ ಶಾಲೆಯಿಂದ ತೆರಳಿದ್ದಾರೆ. ಶಾಲೆಯಲ್ಲಿ ಬಿಸಿಯೂಟ ಮಾಡುವವರು ಇಡೀ ದಿನ ಇರಲಿಲ್ಲ. ಇದರಿಂದಾಗಿ ವಿದ್ಯಾರ್ಥಿಗಳಿಗೆ ಹಾಲು, ಬಿಸಿಯೂಟ ಕೊಟ್ಟಿಲ್ಲ. ಈ ಶಾಲೆಯಲ್ಲಿ ಹದಿನೈದು ವಿದ್ತಾರ್ಥಿಗಳು ಇದ್ದು. ಇಬ್ಬರು ಶಿಕ್ಷಕರು ಕಾರ್ಯನಿರ್ವಹಿಸುತ್ತಾರೆ. ಈ ರೀತಿಯಲ್ಲಿ ಶಿಕ್ಷಕರು ಶಾಲೆಗೆ ಬಾರದೇ ಹೋದರೆ ವಿದ್ತಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗುತ್ತದೆ. ಈ ಶಿಕ್ಷಕರು ಶಾಸಕ ರಾಜುಗೌಡ ಪಾಟೀಲ ಅವರ ರಾಮನಹಟ್ಟಿ ಕಾರ್ಯಕ್ರಮದಲ್ಲಿ ಅಂದು ಭಾಗವಹಿಸಿದ್ದಾರೆ. ಕರ್ತವ್ಯ ಲೋಪವೆಸಗಿದ ಈ ಶಿಕ್ಷಕರನ್ನು ವೃತ್ತಿಯಿಂದ ವಜಾಗೊಳಿಸಬೇಕೆಂದು ತಿಳಿಸಲಾಗಿದೆ. ಈ ಸಂದರ್ಭದಲ್ಲಿ ಜಯ ಕರ್ನಾಟಕ ಸಂಘಟನೆಯ ತಾಲೂಕಾಧ್ಯಕ್ಷ ಶರಣು ಹೂಗಾರ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಹಳ್ಳಿ, ಕಾರ್ಯಾಧ್ಯಕ್ಷ ನಿಂಗರಾಜ ಗೊರಗುಂಡಗಿ, ನೀರಪ್ಪ ತಡಲಗಿ, ಆನಂದ ರಾಠೋಡ,ಪ್ರಭು ಹಲಸಗಿ, ನಂಜುಂಡಿ ಇದ್ದರು.

## ಜಾತಿ ಕಾಲಂನಲ್ಲಿ ಮಾಳಿ ಎಂದೇ ಬರೆಯಿಸಿ: ಮಾಲಗಾರ

**ಹಳ್ಳೂರ:** ರಾಜ್ಯ ಸರ್ಕಾರದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಜನಗಣತಿಯು ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರ ವರೆಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ಸೋಮವಾರದಿಂದ ಪ್ರಾರಂಭವಾಗಲಿದೆ. ರಾಜ್ಯದ 31 ಜಿಲ್ಲೆಗಳಲ್ಲಿ ಮಾಳಿ,ಮಾಲಗಾರ ಸಮಾಜ ಬಾಂಧವರೆಲ್ಲರೂ ಧರ್ಮದ ಕಾಲಂನಲ್ಲಿ ಹಿಂದೂ ಅಂಥ ನಮೂದಿಸಿ, ಜಾತಿ ಕಾಲಂನಲ್ಲಿ ಮಾಳಿ .ಅಂತ ನಮೂದಿಸಬೇಕೆಂದು ಮುರಿಗೆಪ್ಪ ಮಾಲಗಾರ ಅವರು ತಿಳಿಸಿದ್ದಾರೆ.

ಹಳ್ಳೂರ ಗ್ರಾಮದಲ್ಲಿ ಸಭೆ ನಡೆಸಿ ಅವರು ಮಾತನಾಡಿ, ಸಮೀಕ್ಷೆದಾರರು ಮನೆಗೆ ಬಂದ ಸಮಯದಲ್ಲಿ ಕುಟುಂಬದವರೆಲ್ಲ ತಮ್ಮ ಓಟಿಪಿ ಇರುವ ಆಧಾರ್ ಕಾರ್ಡ್ ರೇಷನ್ ಕಾರ್ಡ್ ತೋರಿಸಿ ಕರ್ನಾಟಕ ಸರಕಾರದ ಮಾಲಿ,/ಮಾಳಿ, ಅಂತ ನಮೂದಿಸಿದರೆ 2 ಎ ಮೀಸಲಾತಿಯಲ್ಲಿ ಬರುತ್ತದೆ. ಮಾಳಿ, ಮಾಲಗಾರ ಬರೆಯಿಸುವುದರಿಂದ ಸಮಾಜದ



ಜನಸಂಖ್ಯೆ 2 ಬಾಗವಾಗಿ ಕಡಿಮೆ ಸಂಖ್ಯೆ ತೋರಿಸುತ್ತದೆ.ಅದಕ್ಕಾಗಿ ಹಿಂದೂ ಮಾಳಿ ಒಂದೇ ಬರೇಯಿಸಿ ಎಂದು ಸಮಾಜದ ಮುಖಂಡರು ನಿರ್ಣಯಿಸಿದ್ದಾರೆ.ಒಂದು ವೇಳೆ ಲಿಂಗಾಯತ ಮಾಳಿ, ನಮೂದಿಸಿದರೆ 3 ಬಿ ಗೆ ಸೇರುತ್ತದೆ. ಕಡ್ಡಾಯವಾಗಿ ಮಾಳಿ/ ಅಂತ ಬರೆಯಿಸಿರಿ ಎಂದರು.

ಸಮೀಕ್ಷೆ ವೇಳೆಯಲ್ಲಿ 6 ವರ್ಷ ಮೇಲ್ಪಟ್ಟವರು ಒಟಿಪಿ ಇರುವ ಆಧಾರ ನಂಬರ ಪಡೆಯುವುದನ್ನು ಕಡ್ಡಾಯಗೊಳಿಸಿದ್ದಾರೆ.ಈ ಸಮೀಕ್ಷೆ ಸಾಮಾಜಿಕ ಶೈಕ್ಷಣಿಕ ಮತ್ತು ಸರಕಾರದ ಸೌಲಭ್ಯ ಪಡೆದುಕೊಳ್ಳುವ ಉದ್ದೇಶಕ್ಕಾಗಿ ಸಮಾಜದ ನೈಜ ಸಂಖ್ಯೆ ತಿಳಿಯಲು ಇದೊಂದು ಸುವರ್ಣಾವಕಾಶ ಸರಕಾರದ ಸೌಲಭ್ಯ ಪಡೆದುಕೊಳ್ಳುವ ನಮ್ಮ ಹಕ್ಕಿಗಾಗಿ ಜಾತಿ ಸಮೀಕ್ಷೆ ಕಾರ್ಯವಿದು. ಆದ್ದರಿಂದ ಸಮಾಜ ಬಾಂದವರು ಸದುಪಯೋಗ ಪಡಿಸಿಕೊಳ್ಳಬೇಕು ನಮ್ಮ ಸಮಾಜಕ್ಕೆ ಅನ್ಯಾಯವಾಗದಂತೆ ಸಮಾಜದ ಸ್ಥಿತಿ- ಗತಿ ಮತ್ತು ನಿಖರ ಸಂಖ್ಯೆ ತಿಳಿಯುವ ಉದ್ದೇಶ ಇದಾಗಿದೆ ಎಂದರು.

ರಾಜ್ಯದಲ್ಲಿ ವಿವಿಧ ನಾಮಾಂಕಿತವಾದ ಮಾಳಿ, ಮಾಲಗಾರ, ತೋಟಗೇರ, ತಿಗಳ ಇನ್ನೂ ಆನೇಕ ಹೆಸರುಗಳಿಂದ ಕರೆಯಲ್ಪಡುತ್ತಾರೆ ಕರ್ನಾಟಕದಲ್ಲಿ ಮಾಳಿ, ಮಾಲಗಾರ ಸಮಾಜದವರು ಒಗ್ಗಟ್ಟು ತೋರಿಸಬೇಕಾಗಿದೆ. ಇದರಲ್ಲಿ ಮಕ್ಕಳ ಭವಿಷ್ಯವೂ ಅಡಗಿದೆ ಹಿಂದೆ ಸರಕಾರವು ಸಮೀಕ್ಷೆ ನಡೆಸಿ ಕೇವಲ 83296 ಸಾವಿರ ಜನಸಂಖ್ಯೆ ತೋರಿಸಿದ್ದಾರೆ. ರಾಜ್ಯದಲ್ಲಿ ಸುಮಾರು 25 ಲಕ್ಷದಿಂದ 30 ಲಕ್ಷ ಜನಸಂಖ್ಯೆಯಿದೆ ಎಂದು ತಿಳಿದು ಬಂದಿದೆ ಉಳಿದವರು ಎಲ್ಲಿ ಹೋದರೆಂದು ಗೊಂದಲವಿದೆ ಇನ್ನಾದರೂ ಸಮಾಜ ಬಾಂದವರು ಎಚ್ಚೆತ್ತುಕೊಳ್ಳಬೇಕಾಗಿದೆ 900 ವರ್ಷಗಳ ಹಿಂದಿನಿಂದಲೂ ಸಮಾಜವು ನಲುಗಿ ಹೋಗಿದೆ. ಈಗ ಬಂದಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಸಮಾಜದ ಒಮ್ಮತದ ನಿರ್ಧಾರವಾಗಿದೆ.

ಈ ಸಮಯದಲ್ಲಿ ಮುಖಂಡರಾದ, ನಿಂಗಪ್ಪ ಸುಣದೋಳಿ. ಮಲ್ಲಪ್ಪ ಕೂಲಿಗೋಡ. ಶಿವಪ್ಪ ನಿಡೋಣಿ. ದುಂಡಪ್ಪಾ ಹೊಸಟ್ಟಿ. ಯಮನಪ್ಪ ನಿಡೋಣಿ. ಭೀಮಪ್ಪ ಹೊಸಟ್ಟಿ. ಲಕ್ಷ್ಮಣ ಹೊಸಟ್ಟಿ. ಹನಮಂತ ಸುಣದೋಳಿ. ಬಸಪ್ಪ ನಿಡೋಣಿ. ರಾಮಪ್ಪ ಕೂಲಿಗೋಡ. ಶಿವಲಿಂಗ ಹೊಸಟ್ಟಿ ಸೇರಿದಂತೆ ಅನೇಕರಿದ್ದರು.

## ಮಕ್ಕಳ ಸಹಾಯವಾಣಿ ಸಂಖ್ಯೆ ಬರೆಯಲು ಸೂಚನೆ

**ವಿಜಯಪುರ:** ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ / ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ಕಡ್ಡಾಯವಾಗಿ ಬರೆಸಲು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ.

ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯು ಮಕ್ಕಳ ಅಭಿವೃದ್ಧಿ ಮತ್ತು ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದೆ. ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೊಳ್ಳಲು ಹಾಗೂ ಪುನರ್ ವಸತಿ ಸೇವೆ ಕಲ್ಪಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರ ವಹಿಸುತ್ತದೆ.

ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿದಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕತೆ ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ. ಈಗಾಗಲೇ ಕೆಲವು ಇಲಾಖೆಗಳು ಈ ಕುರಿತು ಕ್ರಮವಹಿಸಿವೆ. ಕೆಲವು ಇಲಾಖೆಗಳಲ್ಲಿ ಈ ಬಗ್ಗೆ ನಿರ್ದೇಶನವಿಲ್ಲ ಎಂಬ ಗೊಂದಲಗಳಿಂದ ಶಾಶ್ವತ ಫಲಕಗಳಲ್ಲಿ ಪ್ರದರ್ಶಿಸದೇ ಇರುವುದು ತಿಳಿದು ಬಂದಿದ್ದು, ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಶಾಶ್ವತ ಫಲಕದಲ್ಲಿ ಪ್ರದರ್ಶಿಸದೆ ಇರುವ ಇಲಾಖೆಗಳು ಯಾವುದೇ ಗೊಂದಲಗಳಿಗೆ ಆಸ್ಪದ ಕೊಡದೇ ತಕ್ಷಣ ಕ್ರಮಕೈಗೊಂಡು ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ತಮ್ಮ ಇಲಾಖೆಯ ಶಾಶ್ವತ ಫಲಕದಲ್ಲಿ ಪ್ರದರ್ಶಿಸುವಂತೆ ಮುಖ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :194, Postal Reg No. PMG/KA/NK/BM/135/25-27 / POST AT Vantamury Colony Post Office